ಸುದ್ದಿಗಳ ಹೊನಲು

# ಸಂಜೆ ಮುಗಿಲು

ಸಂಪುಟ: 21, ಸಂಚಿಕೆ: 355, ಪುಟಗಳು: 8, ಬುಧವಾರ, 2 ಅಕ್ಟೋಬರ್ 2024 RNI NO. KARKAN/2002/08054

epaper: www.sanjemugilu.com

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3



ವೇಣು ಸಾರಥ್ಯದಲ್ಲಿ...



# ದಶಪ್ರಮತಿ ಮುದ್ರಣಾಲಯ

dashapramathi mudranalaya

PRE-PRESS PRINTERS

Contact: +91 9483589085 | e-mail: dashapramathimudranalaya@gmail.com

We Undertake Printing of Newspapers | Tabloids | Magazines



### ಸುಭಾಷಿತ

ಜಗತ್ತು ಬದಲಾಗಬೇಕು ಎಂದು ಹೇಳುವವರು, ಮೊದಲು ತಮ್ಮಿಂದಲೇ ಬದಲಾವಣೆಯಾಗಬೇಕು ಎಂಬುದನ್ನು ಅರಿತುಕೊಳ್ಳಬೇಕು.

। ಮಹಾತ್ಮಗಾಂಧಿ

### ಪಂಚಾಂಗ

(ಬುಧವಾರ 2, ಅಕ್ಟೋಬರ್-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ಉತ್ತರ ನಕ್ಷತ್ರ, ದಕ್ಷಿಣಾಯನ, ವರ್ಷ ಋತು, ಭಾದ್ರಪದ ಮಾಸ, ಕೃಷ್ಣ ಪಕ್ಷ,
- ತಿಥಿ : ಮಹಾಲಯ ಅಮಾವಾಸ್ಯೆ
- ರಾಹುಕಾಲ : 12-12 ರಿಂದ 1.42
- ಗುಳಿಕಕಾಲ : 10.42 ರಿಂದ 12.12
- ಯಮಗಂಡಕಾಲ : 7.42 ರಿಂದ 9.12

## ಸಂಕ್ಷಿಪ್ತ ಸುದ್ದಿ

## ಹಿಂದೆ ಹೋಗು ಎಂದಿದ್ದಕ್ಕೆ ಬಿಎಂಟಿಸಿ ಕಂಡಕ್ಟರ್ ಹೊಟ್ಟೆಗೆ ಚಾಕು ಇರಿದ ಯುವಕ






**ಬೆಂಗಳೂರು:** ಕ್ಷುಲ್ಲಕ ಕಾರಣಕ್ಕೆ ಬಿಎಂಟಿಸಿ ವೋಲ್ವೋ ಬಸ್ ಕಂಡಕ್ಟರ್‌ಗೆ ಪ್ರಯಾಣಿಕನೊಬ್ಬ ಚಾಕು ಇರಿದ ಪ್ರಕರಣ ನಗರದಲ್ಲಿ ನಡೆದಿದೆ. ಮಂಗಳವಾರ ಸಂಜೆ 7 ಗಂಟೆ ಸುಮಾರಿಗೆ ವೈಟ್ ಫೀಲ್ಡ್ ಪೊಲೀಸ್ ಠಾಣಾ ವ್ಯಾಪ್ತಿಯ ವೈದೇಹಿ ಬಸ್ ನಿಲ್ದಾಣದ ಬಳಿ ಯುವಕನೊಬ್ಬ ವೋಲ್ವೋ ಬಸ್ ಹತ್ತಿದ್ದಾನೆ. ಬಸ್ ಹತ್ತಿದವನು ಒಳಗಡೆ ಹೋಗದೆ ಡೋರ್ ಸಮೀಪ ನಿಂತಿದ್ದಾನೆ. ಈ ವೇಳೆ ಕಂಡಕ್ಟರ್ ಯೋಗಿಶ್ ಯುವಕನಿಗೆ ಒಳಗಡೆ ಹೋಗುವಂತೆ ಸೂಚಿಸಿದ್ದಾರೆ. ಅಷ್ಟಕ್ಕೇ ಕೋಪಗೊಂಡಿರುವ ಯುವಕ ಕಂಡಕ್ಟರ್ ಹೊಟ್ಟೆ ಭಾಗಕ್ಕೆ ಚಾಕುವಿನಿಂದ ಎರಡು ಮೂರು ಬಾರಿ ಇರಿದ್ದಾನೆ. ಬಸ್‌ನಲ್ಲಿದ್ದ ಸಹ ಪ್ರಯಾಣಿಕರು ಭಯಭೀತರಾಗಿ ಚೀರಾಡಿದಾಗ ಯುವಕ ಇಳಿದು ಎಸ್ಕೇಪ್ ಆಗಲು ಯತ್ನಿಸಿದ್ದಾನೆ. ಬಳಿಕ ಬಸ್‌ನಲ್ಲಿದ್ದ ಪ್ರಯಾಣಿಕರು 112 ಗೆ ಕರೆ ಮಾಡಿ ಪೊಲೀಸರಿಗೆ ಮಾಹಿತಿ ಕೊಟ್ಟಿದ್ದಾರೆ. ಕೂಡಲೇ ಘಟನ ಸ್ಥಳಕ್ಕೆ ವೈಟ್ ಫೀಲ್ಡ್

ಪುಟ 2

## ಚಾಲಕನ ನಿಯಂತ್ರಣ ತಪ್ಪಿ ಗೂಡ್ಸ್ ಲಾರಿ ಪಲ್ಟಿ ಎದೆಗೆ ಹೊಕ್ಕ ಕಬ್ಬಿಣದ ಪೈಪ್



**ಹಾವೇರಿ:** ಚಾಲಕನ ನಿಯಂತ್ರಣ ತಪ್ಪಿ ಗೂಡ್ಸ್ ಲಾರಿ ಪಲ್ಟಿಯಾಗಿರುವ ಘಟನೆ ಜಿಲ್ಲೆಯ ರಾಣೇಬೆನ್ನೂರು ತಾಲ್ಲೂಕಿನ ಹೂಲಹಳ್ಳಿ ಗ್ರಾಮದ 48 ರಾಷ್ಟ್ರೀಯ ಹೆದ್ದಾರಿಯ ಬಳಿ ನಡೆದಿದೆ. ಗಾಯಗೊಂಡ ವ್ಯಕ್ತಿಯನ್ನು 27 ವರ್ಷದ ಚಾಲಕ ಶಿವಾನಂದ ಬಡಗಿ ಎಂದು ಗುರುತಿಸಲಾಗಿದೆ. ಹುಬ್ಬಳ್ಳಿಯಿಂದ ದಾವಣಗೆರೆ ಕಡೆಗೆ ಹೊರಟಿದ್ದ ಲಾರಿಯು 48ನೇ ರಾಷ್ಟ್ರೀಯ ಹೆದ್ದಾರಿಯ ಬಳಿ ನಿಯಂತ್ರಣ

ಪುಟ 2

## ವಿಧಾನಸೌಧದವರೆಗೂ ನಡೆದುಕೊಂಡೇ ಹೋದ ಸಿಎಂ, ಡಿಸಿಎಂ

**ಬೆಂಗಳೂರು:** ಗಾಂಧಿ ಜಯಂತಿ ಮತ್ತು ಕಾಂಗ್ರೆಸ್ ಪಕ್ಷಕ್ಕೆ ಗಾಂಧೀಜಿ ಅಧ್ಯಕ್ಷತೆಗೆ 100 ವರ್ಷಗಳ ಸಂಭ್ರಮ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ''ಗಾಂಧಿ ನಡಿಗೆ'' ಕಾರ್ಯಕ್ರಮ ನಡೆಸಿತು. ಗಾಂಧಿ ನಡಿಗೆ ಕಾರ್ಯಕ್ರಮ ಅಂಗವಾಗಿ ಬೆಂಗಳೂರಿನ ಗಾಂಧಿ ಭವನದಿಂದ ವಿಧಾನಸೌಧದವರೆಗೆ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ಮತ್ತು ಸಚಿವರಾದ ಹೆಚ್ .ಕೆ.ಪಾಟೀಲ್, ಲಕ್ಷ್ಮೀ ಹೆಬ್ಬಾಳ್ಕರ್, ಪ್ರಿಯಾಂಕ್ ಖರ್ಗೆ ಕಾಲ್ನಡಿಗೆಯಲ್ಲಿ ಸಾಗಿದರು. ಮುಖ್ಯಮಂತ್ರಿಗಳಿಗೆ ಮಾಜಿ ಸಿಎಂ ವೀರಪ್ಪ ಮೊಯ್ಲಿ, ಶಾಸಕ ರಿಜ್ವಾನ್ ಸೇರಿ ಹಲವರು ಸಾಥ್ ನೀಡಿದರು.

ನಡಿಗೆ ವೇಳೆ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಡಿಕೆ ಶಿವಕುಮಾರ್, ಸ್ವಾತಂತ್ರ್ಯ ಹೋರಾಟದಲ್ಲಿ ಗಾಂಧೀಜಿಯವರು ನಾಯಕತ್ವ ವಹಿಸಿದ್ದರು. ಮಹಾತ್ಮ ಗಾಂಧೀಜಿಯವರ ಆಚಾರ ವಿಚಾರ ಅಳವಡಿಸಿಕೊಳ್ಳಬೇಕು. ಕೆಪಿಸಿಸಿಯಿಂದ ನಾವು ಪ್ರತ್ಯೇಕ ಕಾರ್ಯಕ್ರಮ ಮಾಡುತ್ತಿದ್ದೇವೆ. ಸ್ವಚ್ಛತೆ ಕಾರ್ಯಕ್ರಮ ಮಾಡಲು ಮಕ್ಕಳಿಗೆ ಪ್ರತಿಜ್ಞೆ ಮಾಡುತ್ತಿದ್ದೇವೆ. ಎಲ್ಲ ಮಂತ್ರಿಗಳು, ಶಾಸಕರಿಗೆ ಆಯಾ ಜಿಲ್ಲೆಗಳಲ್ಲಿ ಸ್ವಚ್ಛತೆ ಕಾರ್ಯ ಮಾಡಿ ಎಂದು ಸೂಚಿಸಿದ್ದೇವೆ ಎಂದು ಹೇಳಿದರು.



## ಮುನಿರತ್ನ ವಿರುದ್ಧ ಮೂರು ತಿಂಗಳ ಹಿಂದೆಯೇ ದಾಖಲಾಗಿತ್ತು ದೂರು ಕೇಸ್ ಕೊಟ್ಟು ಹಿಂದೆ ಸರಿದಿದ್ದ ದೂರುದಾರೆ!



**ಬೆಂಗಳೂರು:** ಒಂದಲ್ಲ ಎರಡಲ್ಲ, ಮೂರು ಪ್ರಕರಣಗಳಲ್ಲಿ ಆರೋಪಿಯಾಗಿರುವ ಆರ್‌ಆರ್ ನಗರ ಕ್ಷೇತ್ರದ ಶಾಸಕ ಮುನಿರತ್ನ ಈಗ ಎಸ್‌ಐಟಿ ಕಸ್ಟಡಿಯಲ್ಲಿದ್ದಾರೆ. ಅತ್ಯಾಚಾರ ಪ್ರಕರಣ ಸಂಬಂಧ ಎಸ್‌ಐಟಿ ಅಧಿಕಾರಿಗಳ ವಿಚಾರಣೆ ಎದುರಿಸುತ್ತಿದ್ದಾರೆ. ಸಂತ್ರಸ್ತೆಯ ಆರೋಪಗಳೆಲ್ಲ ಸುಳ್ಳು ಅಂತ ತಮ್ಮನ್ನು ತಾವು ಸಮರ್ಥಿಸಿಕೊಳ್ಳುತ್ತಿದ್ದಾರೆ. ಆದರೆ, ಮುನಿರತ್ನ ವಿರುದ್ಧ ಮೂರು ತಿಂಗಳ ಹಿಂದೆಯೇ ಅತ್ಯಾಚಾರ ಆರೋಪದ ಬಗ್ಗೆ ದೂರು ನೀಡಲಾಗಿತ್ತು ಎಂಬ ವಿಚಾರ ಬಯಲಾಗಿದೆ.

ಪುಟ 2

## ಸಿಎಂ ಕುರ್ಚಿಗೆ ಕುತ್ತು ತರುತಾ ಮುಡಾ ಹಗರಣ? ಕುತೂಹಲ ಮೂಡಿಸಿದೆ ದಲಿತ ಸಚಿವರ

# ಮಿಡ್‌ನೈಟ್ ಮೀಟಿಂಗ್!

**ಬೆಂಗಳೂರು:** ಮುಡಾ ಹಗರಣದಲ್ಲಿ ಸಿಎಂ ವಿರುದ್ಧ ಇ.ಡಿಯಲ್ಲಿ ಇಸಿಐಆರ್ ದಾಖಲು ಆಗ್ತಿದ್ದಂತೆ ಕಾಂಗ್ರೆಸ್‌ನಲ್ಲಿ ಅಲ್ಲೋಲ ಕಲ್ಲೋಲ ಆಗ್ತಿದೆ. ಮತ್ತೆ ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಚರ್ಚೆ ಜೋರಾಗಿದೆ. ಇದಕ್ಕೆ ಪುಷ್ಟಿ ಕೊಡುವಂತೆ ಸಚಿವ ಎಚ್.ಸಿ ಮಹದೇವಪ್ಪ ನಿವಾಸದಲ್ಲಿ ಡಿನ್ನರ್ ಮೀಟಿಂಗ್ ಮಾಡಲಾಗಿದೆ. ಸಭೆಯಲ್ಲಿ ಗೃಹ ಸಚಿವ ಡಾ.ಜಿ.ಪರಮೇಶ್ವರ್, ಸತೀಶ್ ಜಾರಕಿಹೊಳಿ ಭಾಗಿಯಾಗಿ ಸುಮಾರು 1 ಗಂಟೆಗೂ ಹೆಚ್ಚು ಕಾಲ ಚರ್ಚೆ ನಡೆಸಿದ್ದಾರೆ. ದಲಿತ ನಾಯಕರ ಮೀಟಿಂಗ್ ಈಗ ಭಾರೀ ಕುತೂಹಲಕ್ಕೆ ಕಾರಣವಾಗಿದೆ.

ಸಿಎಂ ಸಿದ್ದರಾಮಯ್ಯ ವಿರುದ್ಧ ಇಡಿಯಲ್ಲೂ ಪ್ರಕರಣ ದಾಖಲಾದ ಬಳಿಕ ಸಚಿವರಲ್ಲಿ ಆತಂಕ ಹೆಚ್ಚಾಗಿದ್ದು, ಮುಂದೆ ಕೆಲವೇ ದಿನಗಳಲ್ಲಿ ರಾಜಕೀಯ ಸ್ಥಿತ್ಯಂತರದ ಆತಂಕ ಜೋರಾಗಿದೆ. ಸಿಎಂ ಸಿದ್ದರಾಮಯ್ಯನವರ ಸ್ಥಾನಕ್ಕೂ ಕುತ್ತು ಬರುವ ಸಾಧ್ಯತೆಯ ನಿಟ್ಟಿನಲ್ಲಿ ತಂತ್ರಗಾರಿಕೆ ಮಾಡುವ ಸಂಬಂಧ ಮೂರು ಸಚಿವರು ಸಭೆ ಸೇರಿದ್ದಾರೆ ಎನ್ನಲಾಗಿದೆ.

ಎರಡು ದಿನಗಳ ಹಿಂದಷ್ಟೇ ಪ್ರತ್ಯೇಕವಾಗಿ ಡಾ. ಜಿ ಪರಮೇಶ್ವರ್ ಮತ್ತು ಡಿಕೆ ಶಿವಕುಮಾರ್ ಮಾತುಕತೆ ನಡೆಸಿದ್ದರು. ನಿನ್ನೆ ತಡರಾತ್ರಿ ಸತೀಶ್ ಜಾರಕಿಹೊಳಿ, ಪರಮೇಶ್ವರ ಹಾಗೂ ಮಹದೇವಪ್ಪ ಚರ್ಚೆ ನಡೆದಿದ್ದಾರೆ. ಸರ್ಕಾರಕ್ಕೆ ಡ್ಯಾಮೇಜ್ ಆಗುವ ಸ್ಥಿತಿ ಬಂದರೆ ಹೇಗೆ ತಂತ್ರಗಾರಿಕೆ ಮಾಡಬೇಕು ಎಂಬ ಸಭೆಯಲ್ಲಿ ಸಮಾಲೋಚನೆ ನಡೆಸಲಾಗಿದೆ ಎನ್ನಲಾಗಿದ್ದು. ವ್ಯತಿರಿಕ್ತ ಪರಿಸ್ಥಿತಿಯಲ್ಲಿ ಮುಖ್ಯಮಂತ್ರಿ ಸ್ಥಾನದ ಮೇಲೆ ಪರಮೇಶ್ವರ್, ಸತೀಶ್ ಜಾರಕಿಹೊಳಿ ಹಾಗೂ ಹೆಚ್ ಸಿ ಮಹದೇವಪ್ಪ ಕಣ್ಣು ನೆಟ್ಟಿದ್ದಾರೆ.

ಪುಟ 2



## ಸಿದ್ದರಾಮಯ್ಯ ಪತ್ನಿ ಮುಡಾ ಸೈಟ್ ವಾಪಸ್ ಕೊಡಲು ಇದೆ ಬಲವಾದ ಕಾರಣ

**ಬೆಂಗಳೂರು:** ಮುಡಾ ಹಗರಣ ಸಂಬಂಧ ತಮಗೆ ಯಾವುದೇ ಭಯವಿಲ್ಲ. ಕಾನೂನು ಹೋರಾಟಕ್ಕೆ ಸದಾ ಸಿದ್ಧ. ಅದನ್ನೇ ಮಾಡಲುತ್ತೇನೆಯೇ ವಿಹಃ ರಾಜೀನಾಮೆ ಕೊಡುವುದೇ ಇಲ್ಲ ಎನ್ನುತ್ತಿರುವ ಸಿಎಂ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ 14 ಮುಡಾ ನಿವೇಶನಗಳನ್ನು ವಾಪಸ್ ಮಾಡುವುದಾಗಿ ಪತ್ರ ಬರೆದಿದ್ದಾರೆ. ಇದು ಪ್ರಕರಣಕ್ಕೆ ದೊಡ್ಡ ತಿರುವು ನೀಡಿದೆ. ಪ್ರತಿಪಕ್ಷಗಳ (ಬಿಜೆಪಿ, ಜೆಡಿಎಸ್) ದ್ವೇಷದ ರಾಜಕಾರಣ, ಕೇಂದ್ರ ತನಿಖಾ ಸಂಸ್ಥೆಗಳನ್ನು ಮುಂದಿಟ್ಟುಕೊಂಡು ಕಾಂಗ್ರೆಸ್ ಸರ್ಕಾರಗಳ ಮೇಲೆ ಬಿಜೆಪಿ ನಡೆಸುತ್ತಿರುವ ದಾಳಿಯಿಂದ ಮನನೊಂದು ಅವರು ಸೈಟ್ ವಾಪಸ್ ಮಾಡುವ ನಿರ್ಧಾರ ಕೈಗೊಂಡಿದ್ದಾರೆ ಎಂದು ಕಾಂಗ್ರೆಸ್ ನಾಯಕರು ಪ್ರತಿಪಾದಿಸುತ್ತಿದ್ದಾರೆ.

ಆದರೆ, ಸಿದ್ದರಾಮಯ್ಯ ಪತ್ನಿ ಸೈಟ್ ಗಳನ್ನು ವಾಪಸ್ ನೀಡಲು ಮನ ಮಾಡಲು ಜಾರಿ ನಿರ್ದೇಶನಾಲಯ 2003ರ ಪಿಎಂಎಲ್ ಎ ಕಾಯ್ದೆಯ ಸೆಕ್ಷನ್ 15 ರ ಅಡಿ ಪ್ರಕರಣ ದಾಖಲಿಸಿರುವುದೇ ಕಾರಣ ಎನ್ನಲಾಗಿದೆ.

ಸಿಎಂ ವಿರುದ್ಧ ಇಡಿ ದಾಖಲಿಸುರುವ ಇಸಿಐಆರ್ ನಲ್ಲಿ ಪಿಎಂಎಲ್ ಎ ಕಾಯ್ದೆಯ ಸೆಕ್ಷನ್ 15 ರ ಅಡಿ ಪ್ರಕರಣ ದಾಖಲಿಸಲಾಗಿದೆ.

ಪುಟ 2

## ಲಂಚ ಸ್ವೀಕರಿಸುವಾಗ ಲೋಕಾಯುಕ್ತ ಬಲೆಗೆ ಆರೋಗ್ಯ ಇಲಾಖೆಯ ಮಹಿಳಾ ಅಧಿಕಾರಿ

**ಬಾಗಲಕೋಟೆ:** ಲಂಚ ಸ್ವೀಕರಿಸುವಾಗ ರೆಡ್ ಹ್ಯಾಂಡ್ ಆಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಧಿಕಾರಿ ಲೋಕಾಯುಕ್ತ ಅಧಿಕಾರಿಗಳ ಬಲೆಗೆ ಬಿದ್ದಿದ್ದಾರೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಾಯಕ ಆಡಳಿತಾಧಿಕಾರಿ ರಾಜಶ್ರೀ ಪೋಳ ಲಂಚ ಪಡೆಯುವ ಲೋಕಾಯುಕ್ತ ಅಧಿಕಾರಿಗಳ ಕೈಗೆ ಸಿಕ್ಕಿ ಬಿದ್ದ ಅಧಿಕಾರಿಯಾಗಿದ್ದಾರೆ.

ರಾಘವೇಂದ್ರ ಮಡಿವಾಳ ಎಂಬವರು ನೀಡಿದ ದೂರಿನ ಅನ್ವಯ ಲೋಕಾಯುಕ್ತ ಡಿವೈಎಸ್ಪಿ ಸಿದ್ದೇಶ್ವರ ನೇತೃತ್ವದಲ್ಲಿ ನಡೆದ ದಾಳಿ ನಡೆಸಲಾಗಿತ್ತು. ಬಾಗಲಕೋಟೆ ಜಿಲ್ಲಾಡಳಿತ

ಪುಟ 2




## ಬಂಧನದ ವೇಳೆ ಮಾರಕಾಸ್ತ್ರದಿಂದ ಹಲ್ಲೆ ರೌಡಿಶೀಟರ್ ಮೇಲೆ ಪೊಲೀಸರ ಫೈರಿಂಗ್

**ಹಾಸನ:** ಮಾರಕಾಸ್ತ್ರದಿಂದ ಹಲ್ಲೆ ಮಾಡಿ ಎಸ್ಕೇಪ್ ಆಗಲು ಯತ್ನಿಸಿದಕ್ಕೆ ರೌಡಿಶೀಟರ್ ಮೇಲೆ ಪೊಲೀಸರು ಫೈರಿಂಗ್ ಮಾಡಿರುವ ಘಟನೆ ಜಿಲ್ಲೆಯ ಬೇಲೂರು ತಾಲ್ಲೂಕಿನ ಬಿಕ್ಕೋಡು ಗ್ರಾಮದಲ್ಲಿ ನಡೆದಿದೆ.

ರೌಡಿಶೀಟರ್ ಮಧು ಎಂಬಾತನ ಮೇಲೆ ಪೊಲೀಸರು ಫೈರಿಂಗ್ ನಡೆಸಿದ್ದು, ಬಂಧನದ ವೇಳೆ ಮಾರಕಾಸ್ತ್ರದಿಂದ ಪೊಲೀಸರ ಮೇಲೆ ಹಲ್ಲೆ ಮಾಡಿದ ಹಿನ್ನೆಲೆ ಆತನ ಕಾಲಿಗೆ ಗುಂಡು ಹಾರಿಸಿದ್ದಾರೆ.

ಸೆ.14 ರಂದು ರೌಡಿಶೀಟರ್ ಮಧು ಕ್ಷುಲ್ಲಕ ಕಾರಣಕ್ಕೆ ಚಾಕುವಿನಿಂದ ಇರಿದು ವಾಟರ್‌ಮ್ಯಾನ್ ಗಣೇಶ್‌ನನ್ನು ಕೊಲೆ ಮಾಡಿದ್ದ. ಕೊಲೆ ಮಾಡಿದ ಬಳಿಕ ತಲೆಮರೆಸಿಕೊಂಡಿದ್ದ. ಇಂದು ಹಬ್ಬಕ್ಕೆಂದು ಅರೇಹಳ್ಳಿಗೆ ಆರೋಪಿ ಮಧು ಬರುವುದಾಗಿ ಪೊಲೀಸರು ಖಚಿತ ಮಾಹಿತಿ ಮೇರೆಗೆ ಬಂಧಿಸಲು ತೆರಳಿದ್ದರು. ಬಂಧನದ ವೇಳೆ ಡ್ರ್ಯಾಗನ್‌ನಿಂದ ಪೊಲೀಸರ ಮೇಲೆ ಹಲ್ಲೆ ನಡೆಸಿದ್ದಾನೆ.

ಒಂದು ಸುತ್ತು ಗುಂಡು ಹಾರಿಸಿ ಮಧುವನ್ನು ಶರಣಾಗುವಂತೆ ಇನ್ಸ್‌ಪೆಕ್ಟರ್ ವಿನಯ್ ತಿಳಿಸಿದ್ದರು. ಆದರೆ ಇದೇ ವೇಳೆ ಅರೇಹಳ್ಳಿ ಪೊಲೀಸ್ ಠಾಣೆ ಕಾನ್‌ಸ್ಟೇಬಲ್‌ಗಳಾದ ಶಶಿ ಹಾಗೂ ಅಶೋಕ್ ಮೇಲೆ ಕಲ್ಲಿನಿಂದ ಹಲ್ಲೆ ನಡೆಸಿದ್ದಾನೆ. ಬೇಲೂರು ಇನ್ಸ್‌ಪೆಕ್ಟರ್ ವಿನಯ್ ಕಾಲಿಗೆ ಗುಂಡು ಹಾರಿಸಿ ಆರೋಪಿಯನ್ನು ಬಂಧಿಸಿದ್ದಾರೆ. ಸದ್ಯ ಆರೋಪಿಯನ್ನು ಬೇಲೂರು ಆಸ್ಪತ್ರೆಗೆ ದಾಖಲಿಸಲಾಗಿದ್ದು, ಬೇಲೂರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ.



## ಸಿಲಿಕಾನ್ ಸಿಟಿಯಲ್ಲಿ ಡೆಡ್‌ಲೈನ್ ಅಂತ್ಯ ಕಂಡರೂ ಮುಗಿಯದ ವೈಟ್ ಟಾಪಿಂಗ್ ಕಾಮಗಾರಿ

**ಬೆಂಗಳೂರು:** ನಗರದಲ್ಲಿ ಗುಂಡಿ ಮುಚ್ಚಳಕ್ಕೆ ಡೆಡ್‌ಲೈನ್ ಮುಗಿದಿದ್ದರೂ ವೈಟ್ ಟಾಪಿಂಗ್ ಕಾಮಗಾರಿ ಮುಕ್ತಾಯ ಆಗುತ್ತಿಲ್ಲ ಎಂದು ಸೌರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ವೈಟ್ ಟಾಪಿಂಗ್ ಕಾಮಗಾರಿ ತಡ ಆಗುವುದಕ್ಕೆ ಪೊಲೀಸ್ ಇಲಾಖೆ, ಬೆಸ್ಕಾಂ, ಜಲಮಂಡಳಿ ಮೇಲೆ ಬಿಬಿಎಂಪಿಯವರು ಗೂಬೆ ಕೂರಿಸುತ್ತಿದ್ದಾರೆ. ಈ ಕಾಮಗಾರಿ ತಡ ಆಗುವುದಕ್ಕೆ ಸಾರ್ವಜನಿಕರ ಸಮಸ್ಯೆ ಆಗುತ್ತಿದೆ. ಈ ಹಿನ್ನೆಲೆ ಇಲಾಖೆಗಳ ಜೊತೆ ಸಮನ್ವಯ ಸಾಧಿಸಲು ಮನೀಷ್ ಮೌದ್ಗಿಲ್ ನೇತೃತ್ವದಲ್ಲಿ ತಂಡ ರಚನೆ ಮಾಡಿದ್ದು, ಮುಂದಿನ ವಾರದಲ್ಲಿ ಮತ್ತೆ ಏಳು ರಸ್ತೆಗಳಲ್ಲಿ ವೈಟ್ ಟಾಪಿಂಗ್ ಕಾಮಗಾರಿ ಆರಂಭಿಸಲಿದೆ.

ಒಟ್ಟು 90ಕ್ಕೂ ಹೆಚ್ಚು ರಸ್ತೆಗಳಲ್ಲಿ ಬಿಬಿಎಂಪಿ ರಸ್ತೆಗಳಲ್ಲಿ ವೈಟ್ ಟಾಪಿಂಗ್ ಕಾಮಗಾರಿ ಮಾಡಲು ಮುಂದಾಗಿದೆ. ಈಗಾಗಲೇ ಚಿಕ್ಕಪೇಟೆ, ರಾಜ್ ಕುಮಾರ್ ರಸ್ತೆ ಸೇರಿದಂತೆ ಹಲವು ಕಡೆ ವೈಟ್ ಟಾಪಿಂಗ್ ಆರಂಭ ಮಾಡಿ 100 ದಿನ ಕಳೆದರೂ ಕಾಮಗಾರಿ ಮುಕ್ತಾಯ ಆಗಿಲ್ಲ. ನೀಡಿದ್ದ ಕಾಲಾವಕಾಶ ಮುಗಿದರೂ ಇನ್ನು ಕಾಮಗಾರಿ ಕೆಲಸ ಮುಗಿದಿಲ್ಲ. ಇದರಿಂದಾಗಿ ಚಿಕ್ಕಪೇಟೆಯಲ್ಲಿ ಟ್ರಾಫಿಕ್ ಸಮಸ್ಯೆ, ವ್ಯಾಪಾರಕ್ಕೆ ಸಮಸ್ಯೆ, ಸಾರ್ವಜನಿಕರ ಓಡಾಟಕ್ಕೆ ಸಮಸ್ಯೆ ಆಗುತ್ತಿದೆ.

ಪುಟ 2



## ರಾಜ್ಯಾದ್ಯಂತ ನಾಳೆಯಿಂದ ಶಾಲಾ ಮಕ್ಕಳಿಗೆ ದಸರಾ ರಜೆ ಆರಂಭ

**ಬೆಂಗಳೂರು:** ನಾಳೆಯಿಂದ ನವರಾತ್ರಿ ಶುರುವಾಗುತ್ತಿದೆ. ಮೈಸೂರಿನಲ್ಲಿ ದಸರಾ ಹಬ್ಬದ ಸಂಭ್ರಮ ಮನೆ ಮಾಡಿದೆ. ಸದ್ಯ ಸಾರ್ವಜನಿಕ ಶಿಕ್ಷಣ ಇಲಾಖೆ ರಾಜ್ಯಾದ್ಯಂತ ಶಾಲಾ ಮಕ್ಕಳಿಗೆ ಅಕ್ಟೋಬರ್ 3 ರಿಂದ 20ರ ತನಕ ದಸರಾ ರಜೆ ಘೋಷಿಸಿದ್ದು, ನಾಳೆಯಿಂದಲೇ ಮಕ್ಕಳಿಗೆ ದಸರಾ ರಜೆ ಆರಂಭವಾಗಲಿದೆ. ಒಟ್ಟು 17 ದಿನ ಶಾಲಾ ವಿದ್ಯಾರ್ಥಿಗಳಿಗೆ ದಸರಾ ರಜೆ ಇರಲಿದೆ.

2024-25ನೇ ಶೈಕ್ಷಣಿಕ ಸಾಲಿನ ದಸರಾ ರಜೆ ಅಕ್ಟೋಬರ್ 3 ರಿಂದ 20 ರವರೆಗೆ ಇರಲಿದೆ. ಅಕ್ಟೋಬರ್ 2 ರಂದು ಗಾಂಧಿ ಜಯಂತಿ ಇದ್ದು, ಕಾರ್ಯಕ್ರಮದ ನಂತರ ರಜೆಗಳು ಆರಂಭವಾಗಲಿದೆ. ಇನ್ನು ದಸರಾ ರಜೆ ಬಳಿಕ ಅಕ್ಟೋಬರ್ 21ರಿಂದ 2ನೇ ಅವಧಿಯು ಪ್ರಾರಂಭವಾಗಲಿದ್ದು, 2025ರ ಏಪ್ರಿಲ್ 10 ತನಕ ಶಾಲೆ ನಡೆಯಲಿದೆ. 2024-2025ರ ಶೈಕ್ಷಣಿಕ ವರ್ಷದ ಶಾಲಾ ಅವಧಿಯ ಮಾರ್ಗದರ್ಶಿಯನ್ನು ಸಾರ್ವಜನಿಕ ಶಿಕ್ಷಣ ಇಲಾಖೆ, ಶಾಲೆಗಳು ಆರಂಭಕ್ಕೂ ಮುನ್ನ ಪ್ರಕಟಣೆ ಹೊರಡಿಸಿತ್ತು.



ಪುಟ 2

# ಸೈಟ್ ವಾಪಸ್ ಕೊಟ್ಟು ಸಿಎಂ ಮತ್ತಷ್ಟು ಸಂಕಷ್ಟವನ್ನು ಮೈಮೇಲೆ ಎಳೆದುಕೊಂಡಿದ್ದಾರೆ

**ಹುಬ್ಬಳ್ಳಿ:** ಸೈಟ್ ವಾಪಸ್ ಕೊಡುವ ಮೂಲಕ ಸಿಎಂ ಸಿದ್ದರಾಮಯ್ಯ ಅವರು ಮತ್ತಷ್ಟು ಸಂಕಷ್ಟವನ್ನು ಮೈಮೇಲೆ ಎಳೆದುಕೊಂಡಿದ್ದಾರೆ ಎಂದು ಮಾಜಿ ಸಿಎಂ, ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.



ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಸಿಎಂ ಸಿದ್ದರಾಮಯ್ಯ ಅವರ ಪತ್ನಿ ಮುಡಾ ಸೈಟ್ ವಾಪಸ್ ಕೊಟ್ಟಿರುವ ವಿಚಾರವಾಗಿ ಈ ಕೆಲಸವನ್ನು ಅವರು ಮೊದಲೇ ಮಾಡಬೇಕಿತ್ತು. ಹೈಕೋರ್ಟ್ ನ್ಯಾಯಮೂರ್ತಿಗಳ ಮೂಲಕ ತನಿಖೆ ಮಾಡಿಸಿದ್ದರೆ ಮುಗಿದಿತ್ತು. ಸಿದ್ದರಾಮಯ್ಯ ಅವರ ಪ್ರಾಮಾಣಿಕತೆ ಬಗ್ಗೆ ಪ್ರಶ್ನೆ ಬರುತ್ತಿರಲಿಲ್ಲ. ಆದರೆ ಆಗ ಸಮರ್ಥನೆ ಮಾಡಿಕೊಂಡರು ಎಂದು ಪ್ರತಿಕ್ರಿಯೆ ನೀಡಿದರು.

ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ಕೊಟ್ಟು, ಪ್ರಕರಣ ದಾಖಲಾಗಿ, ಈಗ ತನಿಖೆ ಆರಂಭವಾಗಿದೆ. ಈಗ ಸೈಟ್ ವಾಪಸ್ ಕೊಟ್ಟಿರುವುದರಿಂದ ಹಲವಾರು ಪ್ರಶ್ನೆಗಳು ಉದ್ಭವಿಸಿವೆ. ವಾಪಸ್ ಕೊಡುವ ಮೂಲಕ ಮೂಲಕ ಮತ್ತಷ್ಟು ಜಟಿಲ ಮಾಡಿಕೊಂಡಿದ್ದಾರೆ. ಎಫ್ಐಆರ್ ಆದ ಮೇಲೆ ತನಿಖೆ ಆಗಲೇಬೇಕು. ಒಂದು ಕಡೆ ಲೋಕಾಯುಕ್ತ ತನಿಖೆ ನಡೆದಿದೆ. ಮತ್ತೊಂದು ಕಡೆ ಇಡಿ ಎಫ್ಐಆರ್ ಮಾಡಿಕೊಂಡು ತನಿಖೆ ಮಾಡುತ್ತಿದೆ. ಕಾಂಗ್ರೆಸ್ ನಾಯಕರು ತಪ್ಪೇ ನಡೆದಿಲ್ಲ ಎಂದು ಹೇಳುತ್ತಿದ್ದರು ಎಂದು ತಿಳಿಸಿದರು.

ಸೈಟ್ ವಾಪಸ್ ಕೊಡುವ ಮೂಲಕ ತಪ್ಪಾಗಿದೆ ಎನ್ನುವುದು ಒಪ್ಪಿಕೊಂಡಂತಾಗಿದೆ. ಈ ಹಿಂದೆ ಯಡಿಯೂರಪ್ಪ ಸೈಟ್ ವಾಪಸ್ ಮಾಡಿದಾಗ ಇದೇ ಸಿದ್ದರಾಮಯ್ಯ ಏನು ಹೇಳಿದ್ದರು ಎಂದು ನೆನಪಿಸಿಕೊಳ್ಳಲಿ. ಆಗ ಸಿದ್ದರಾಮಯ್ಯ ಸೈಟ್ ವಾಪಸ್ ಮಾಡುವ ಮೂಲಕ ತಪ್ಪನ್ನು ಒಪ್ಪಿಕೊಂಡಿದ್ದಾರೆ ಎಂದು ಹೇಳಿದ್ದರು. ಇದೇ ಮಾತು ಈಗ ಸಿದ್ದರಾಮಯ್ಯ ಅವರಿಗೂ ಅನ್ವಯ ಆಗುತ್ತದೆ. ಸೈಟ್ ವಾಪಸ್‌ನೊಂದಿಗೆ ಸೈಟು ಹಂಚಿಕೆ ಕಾನೂನುಬಾಹಿರವಾಗಿ ಹಾಗೂ ಅಕ್ರಮವಾಗಿದೆ ಎನ್ನುವುದನ್ನು ಒಪ್ಪಿಕೊಂಡಿದ್ದಾರೆ ಎಂದು ಹೇಳಿದರು.

# ಬೆಂಗಳೂರಿನಲ್ಲಿ ಬಂಧಿತನಾದ ಪಾಕಿಸ್ತಾನ ಪ್ರಜೆ ಬಳಿ ಇದೆ ಭಾರತದ ಪಾಸ್‌ಪೋರ್ಟ್?!



**ಆನೇಕಲ್:** ಬಂಧಿತ ಪಾಕಿಸ್ತಾನ ಪ್ರಜೆಗಳನ್ನು ರಾಷ್ಟ್ರೀಯ ತನಿಖಾ ಸಂಸ್ಥೆ ಅಧಿಕಾರಿಗಳು ವಿಚಾರಣೆ ನಡೆಸುತ್ತಿದ್ದಾರೆ. ವಿಚಾರಣೆ ವೇಳೆ ಹಲವು ವಿಚಾರಗಳು ಅಧಿಕಾರಿಗಳಿಗೆ ಗೊತ್ತಾಗಿದೆ. ಪಾಕಿಸ್ತಾನ ಪ್ರಜೆ ರಶೀದ್ ಅಲಿ ಸಿದ್ಧಕಿ ಕುಟುಂಬ ಭಾರತಕ್ಕೆ ಅಕ್ರಮವಾಗಿ ನುಸುಳಲು, ಭಾರತೀಯ ಪಾಸ್ ಪೋರ್ಟ್, ಆಧಾರ್ ಕಾರ್ಡ್, ಪ್ಯಾನ್ ಕಾರ್ಡ್ ಮತ್ತು ಡಿಎಲ್ ಎಲ್ಲವನ್ನು ಹೊಂದಲು ಮೆಹದಿ ಫೌಂಡೇಷನ್‌ನ ಪ್ರಮುಖ ವ್ಯಕ್ತಿ ಪರ್ವೇಜ್ ಸಹಾಯ ಮಾಡಿದ್ದಾನೆ ಎಂದು ತಿಳಿದುಬಂದಿದೆ. ಈ ಹಿನ್ನೆಲೆಯಲ್ಲಿ ಜಿಗಣಿ ಪೊಲೀಸರು ಪರ್ವೇಜ್ ಮತ್ತು ಇತನ ಸಂಪರ್ಕದಲ್ಲಿದ್ದವರಿಗಾಗಿ ಹುಡುಕಾಟ ನಡೆಸಿದ್ದಾರೆ. ಪಾಕಿಸ್ತಾನ ಪ್ರಜೆ ರಶೀದ್ ಅಲಿ ಸಿದ್ದಕಿಗೆ ಮುಂಬೈ ಮತ್ತು ದೆಹಲಿಯಲ್ಲಿ ಹಲವರು ಪರಿಚಯಸ್ಥರಿದ್ದಾರೆ. ಹೀಗಾಗಿ, ಎರಡು ಪೊಲೀಸ್ ತಂಡ ಮುಂಬೈ ಮತ್ತು ದೆಹಲಿಗೆ ತೆರಳಿದೆ. ರಶೀದ್ ಕುಟುಂಬದವರ ಸಂಪರ್ಕದಲ್ಲಿರುವವರಿಗಾಗಿ ಶೋಧ ನಡೆಸುತ್ತಿವೆ.

**ಪಾಕ್ ಪ್ರಜೆಗಳ ಬಳಿ ಇದೆ ಭಾರತದ ಪಾಸ್‌ಪೋರ್ಟ್:** ರಶೀದ್ ಅಲಿ ಸಿದ್ದಕಿ ಮತ್ತು ಈತನ ಕುಟುಂಬಸ್ಥರ ಬಳಿ ಭಾರತದ ಪಾಸ್‌ಪೋರ್ಟ್ ಪತ್ತೆಯಾಗಿದೆ. ದೆಹಲಿಯ ಪರ್ವೇಜ್ ಮೂಲಕ ಭಾರತೀಯ ಪಾಸ್‌ಪೋರ್ಟ್ ಮಾಡಿಸಿಕೊಂಡಿದ್ದಾರೆ. ಪಾಸ್‌ಪೋರ್ಟ್ ಜೊತೆ ಆಧಾರ್, ಪ್ಯಾನ್ ಮತ್ತು ಡಿಎಲ್ ಸಹ ಮಾಡಿಸಿಕೊಂಡಿದ್ದಾರೆ. ಬೆಂಗಳೂರು ಹೊರವಲಯದ ಆನೇಕಲ್ ತಾಲೂಕಿನ ಜಿಗಣಿಯಲ್ಲಿ ವಾಸವಿದ್ದ ಪಾಕಿಸ್ತಾನ ಪ್ರಜೆಯನ್ನು ಪೊಲೀಸರು ಸೋಮವಾರ ಬಂಧಿಸಿದ್ದರು. ಪಾಕಿಸ್ತಾನ ಪ್ರಜೆ ಸೇರಿಂದತೆ ಒಟ್ಟು ನಾಲ್ವರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದರು. ಪಾಕಿಸ್ತಾನ ಪ್ರಜೆ ರಷೀದ್ ಸಿದ್ದಿಕಿ ಅಲಿಯಾಸ್ ಶಂಕರ್ ಶರ್ಮಾ (48), ಆಯುಷಾ ಅನಿಫ್ ಅಲಿಯಾಸ್ ಆಶಾ ಶರ್ಮಾ (38), ಮೊಹಮ್ಮದ್ ಹನೀಫ್ ಅಲಿಯಾಸ್ ರಾಮ್ ಬಾಬಾ ಶರ್ಮಾ (73), ರುಬೀನಾ ಅಲಿಯಾಸ್ ರಾಣಿ ಶರ್ಮಾ (61) ಬಂಧಿತರು.

ಮುಡಾ ಕೇಸ್

# ಕಾಂಗ್ರೆಸ್-ಬಿಜೆಪಿಯಿಂದ ರಾಷ್ಟ್ರಮಟ್ಟದಲ್ಲಿ ತಂತ್ರ-ಪ್ರತಿತಂತ್ರ

**ಬೆಂಗಳೂರು:** ಮುಡಾ ಹಗರಣ ರಾಷ್ಟ್ರ ಮಟ್ಟದಲ್ಲೂ ಭಾರಿ ಚರ್ಚೆಯಾಗುತ್ತಿದೆ. ಈ ಹಗರಣ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಉರುಳಾಗಿ ಪರಿಣಮಿಸಿದೆ. ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜಿನಾಮೆ ನೀಡಬೇಕೆಂದು ವಿಪಕ್ಷ ಬಿಜೆಪಿ ರಾಷ್ಟ್ರ ಮಟ್ಟದಲ್ಲಿ ಹೋರಾಟ ನಡೆಸಲು ಮುಂದಾಗಿದೆ. ಕೇಂದ್ರ ಸರ್ಕಾರ ಬಿಜೆಪಿಯೇತರ ಸರ್ಕಾರದ ಮೇಲೆ ಟಾರ್ಗೆಟ್ ಮಾಡಿದ್ದು, ಇಡಿ-ಸಿಬಿಐ ಮುಖಾಂತರ ದಾಳಿ ಮಾಡಿಸುತ್ತಿದೆ ಎಂದು ಕಾಂಗ್ರೆಸ್ ಕೂಡ ರಾಷ್ಟ್ರ ಮಟ್ಟದಲ್ಲಿ ಹೋರಾಟ ನಡೆಸಲು ಚಿಂತನೆ ನಡೆಸಿದೆ.




**ಬಿಜೆಪಿ ಹೋರಾಟ ಹೇಗಿರಲಿದೆ?:** 14 ನಿವೇಶನಗಳನ್ನು ಹಿಂದಿರುಗಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ ಅವರು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಪತ್ರ ಬರೆದಿದ್ದಾರೆ. ಇದನ್ನೇ ಮುಂದಿಟ್ಟುಕೊಂಡಿರುವ ಬಿಜೆಪಿ, ಸೈಟ್ ವಾಪಸ್ ಕೊಟ್ಟಿದ್ದು ಭ್ರಷ್ಟಾಚಾರಕ್ಕೆ ಆಧಾರ ಎಂದು ರಾಷ್ಟ್ರಮಟ್ಟದಲ್ಲಿ ಅಭಿಯಾನ ನಡೆಸಲು ತಯಾರಿ ನಡೆಸಿದೆ. ರಾಷ್ಟ್ರಮಟ್ಟದಲ್ಲಿ ಸುದ್ದಿಗೋಷ್ಠಿ ಮತ್ತು ಪ್ರತಿಭಟನೆ ನಡೆಸಲು ಚಿಂತನೆ ನಡೆಸಿದೆ. ಮುಡಾ ಪ್ರಕರಣದ ಹೋರಾಟ ತೀವ್ರಗೊಳಿಸಲು ಬಿಜೆಪಿ ನಾಯಕರು ಯೋಜನೆ ರೂಪಿಸುತ್ತಿದ್ದಾರೆ. ಚುನಾವಣೆ ನಡೆಯುತ್ತಿರುವ ರಾಜ್ಯಗಳಲ್ಲೂ ಮುಡಾ ಕೇಸ್ ಪ್ರಸ್ತಾಪಿಸಲಾಗುತ್ತಿದೆ. ಅಲ್ಲದೇ, ಕರ್ನಾಟಕದ ಪ್ರತಿ ಜಿಲ್ಲೆಗಳಲ್ಲೂ ಬಿಜೆಪಿ ನಾಯಕರು ಸುದ್ದಿಗೋಷ್ಠಿ ನಡೆಸಿ ಮುಡಾ ಹಗರಣದ ಬಗ್ಗೆ ಮಾತನಾಡಲಿದ್ದಾರೆ.

**ಕಾಂಗ್ರೆಸ್ ಹೋರಾಟ ಹೇಗಿರಲಿದೆ?:** ಸೋಮವಾರ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಸಿಎಂ ಸಿದ್ದರಾಮಯ್ಯ ವಿರುದ್ಧ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಇಡಿ ಅಧಿಕಾರಿಗಳು ಸಿದ್ದರಾಮಯ್ಯ ಅವರಿಗೆ ಯಾವುದೇ ಕ್ಷಣದಲ್ಲಿ ನೋಟಿಸ್ ಕೊಟ್ಟು ವಿಚಾರಣೆ ನಡೆಸಬಹುದಾಗಿದೆ. ಹೀಗಾಗಿ, ಹೈಕಮಾಂಡ್ ನಾಯಕರು ಇಡಿ ಇಕ್ಕಳದಲ್ಲಿ ಸಿಲುಕಿರುವ ಸಿದ್ದರಾಮಯ್ಯ ಅವರ ಬೆನ್ನಿಗೆ ನಿಂತಿದ್ದಾರೆ.

ಸಿಎಂ ಸಿದ್ದರಾಮಯ್ಯ ಅವರ ವಿರುದ್ಧ ಇಡಿ ಪ್ರಕರಣ ದಾಖಲಿಸಿಕೊಂಡಿರುವುದಕ್ಕೆ ಕಾಂಗ್ರೆಸ್ ಹೈಕಮಾಂಡ್ ಕೇಂದ್ರ ಸರ್ಕಾರದ ವಿರುದ್ಧ ಆಕ್ರೋಶ ಹೊರಹಾಕಿದೆ. ಜನಪರ ಆಡಳಿತ ನೀಡುತ್ತಿರುವ ಕರ್ನಾಟಕ ಸಿಎಂ ಸಿದ್ದರಾಮಯ್ಯ ವಿರುದ್ಧ ಕೇಂದ್ರ ಸರ್ಕಾರ ಸೇಡಿನ ರಾಜಕಾರಣ ಮಾಡುತ್ತಿದೆ ಎಂದು ಕಾಂಗ್ರೆಸ್ ನಾಯಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಬಿಜೆಪಿಯೇತರ ಸರ್ಕಾರಗಳ ಮೇಲೆ ಕೇಂದ್ರ ಸರ್ಕಾರ ದಬ್ಬಾಳಿಕೆ ಮಾಡುತ್ತಿದೆ ಎಂದು ಕಾಂಗ್ರೆಸ್ ಆರೋಪಿಸಿದೆ.

ಈ ಆರೋಪಕ್ಕೆ ಕಾಂಗ್ರೆಸ್ ಜಾರ್ಖಂಡ್ ಹಾಗೂ ದೆಹಲಿ ಮುಖ್ಯಮಂತ್ರಿಗಳನ್ನು ಇಡಿ ಬಂಧಿಸಿದನ್ನು ಮುಂದಿಟ್ಟಿದೆ. ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಹಾಗೂ ಜಾರ್ಖಂಡ್ ಮುಖ್ಯಮಂತ್ರಿ ಹೇಮಂತ್ ಸೊರೇನ್ ಅವರನ್ನು ಇಡಿ ಬಂಧಿಸಿದೆ. ಇದರ ಹಿಂದೆ ಕೇಂದ್ರ ಸರ್ಕಾರ ಕುತಂತ್ರವಿದೆ ಎಂದು ಕಾಂಗ್ರೆಸ್ ಹೇಳಿದೆ.

ಈಗ ಮುಡಾ ಕೇಸ್‌ನಲ್ಲೂ ಸಿಎಂ ಸಿದ್ದರಾಮಯ್ಯ ಅವರ ಮೇಲೂ ಜಾರಿ ನಿರ್ದೇಶನಾಲಯದ ತೂಗುಗತ್ತಿ ನೇತಾಡುತ್ತಿದೆ. ಯಾವಾಗ ಬೇಕಾದರೂ ಈಡಿ ಅಧಿಕಾರಿಗಳು ಸಿಎಂ ಸಿದ್ದರಾಮಯ್ಯ ಅವರಿಗೆ ಸಮನ್ಸ್ ಕೊಟ್ಟು ವಿಚಾರಣೆಗೆ ಕರೆಯಬಹುದಾಗಿದೆ. ಈ ಹಿನ್ನೆಲೆಯಲ್ಲಿ ಕಾಂಗ್ರೆಸ್ ರಾಷ್ಟ್ರಮಟ್ಟದಲ್ಲಿ ಹೋರಾಟ ನಡೆಸಲು ಚಿಂತನೆ ನಡೆಸಿದೆ.

14 ಸೈಟ್ ಕೇಸ್‌ಗಿಂತಲೂ ಇದು ದೊಡ್ಡ ಪ್ರಕರಣ

# ಹಳೆಯ ಡಿನೋಟಿಫಿಕೇಶನ್ ಕೆದಕಿ ಸಿಎಂಗೆ ಹೆಚ್‌ಡಿಕೆ ಗುದ್ದು

**ನವದೆಹಲಿ:** ಚುನಾವಣಾ ಸಾಲಕ್ಕಾಗಿ ಸೈಟು ಮಾರಾಟ ಮಾಡಿದ್ದರಲ್ಲ ಅದು ಎಲ್ಲಿಂದ ಬಂತು? ಇದು 14 ಸೈಟ್ ಪ್ರಕರಣಕ್ಕಿಂತ ದೊಡ್ಡ ಪ್ರಕರಣ ಎಂದು ಹೆಚ್‌ಡಿ ಕುಮಾರಸ್ವಾಮಿ ಸಿದ್ದರಾಮಯ್ಯ ವಿರುದ್ಧ ಗಂಭೀರ ಆರೋಪ ಮಾಡಿದ್ದಾರೆ.



ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಮೈಸೂರಿನ ಹಿನಕಲ್ ಗ್ರಾಮ ಪಂಚಾಯತ್‌ನಲ್ಲಿ ಬಡವರ ಮಕ್ಕಳ ವಸತಿ ಶಾಲೆ ನಿರ್ಮಾಣಕ್ಕಾಗಿ ಭೂಮಿ ಡಿನೋಟಿಫಿಕೇಷನ್ ಮಾಡಿಸಿಕೊಂಡು ಅದನ್ನು ಸಿದ್ದರಾಮಯ್ಯ ಪಡೆದುಕೊಂಡಿದ್ದಾರೆ. ಈ ಪ್ರಕರಣದಲ್ಲಿ ಸಿದ್ದರಾಮಯ್ಯ ಮೊದಲ ಆರೋಪಿ. ಒಟ್ಟು 18 ಮಂದಿ ಆರೋಪಿಗಳಿದ್ದಾರೆ. ಕೆಳಹಂತದ ನ್ಯಾಯಾಲಯ ಸಿದ್ದರಾಮಯ್ಯ ವಿರುದ್ಧ ತೀರ್ಪು ನೀಡಿತ್ತು. ಅಷ್ಟೇ ಅಲ್ಲದೇ ತನಿಖೆ ನಡೆಸುವಂತೆ ಆದೇಶಿಸಿತ್ತು ಎಂದು ಹೇಳಿದರು.

ಈ ಆದೇಶವನ್ನು ಸಿದ್ದರಾಮಯ್ಯ ಹೈಕೋರ್ಟ್‌ನಲ್ಲಿ ಪ್ರಶ್ನೆ ಮಾಡಿದ್ದರು. ಹೈಕೋರ್ಟ್‌ನಲ್ಲಿ ಸಿದ್ದರಾಮಯ್ಯನವರಿಗೆ ರಿಲೀಫ್ ಸಿಕ್ಕಿತ್ತು. ಈ ರಿಲೀಫ್ ಕೊಟ್ಟವರು ನ್ಯಾ. ಮೈಕೆಲ್ ಡಿ ಕುನ್ಹಾ. ನ್ಯಾಯಮೂರ್ತಿಗಳ ಆದೇಶದ ಬಗ್ಗೆ ನಾನು ಏನು ಮಾತನಾಡುವುದಿಲ್ಲ. ಈ ನ್ಯಾಯಧೀಶರು ಈಗ ಕರ್ನಾಟಕದಲ್ಲಿನ ಕೋವಿಡ್ ಅಕ್ರಮದ ಬಗ್ಗೆ ತನಿಖೆ ನಡೆಸುತ್ತಿದ್ದಾರೆ ಎಂದು ತಿಳಿಸಿದರು.

ಈ ಪ್ರಕರಣ 14 ಸೈಟ್‌ಗಿಂತಲೂ ದೊಡ್ಡದು. ಊರಿಗೆ ಬುದ್ಧಿ ಹೇಳುವವರು ಇಲ್ಲಿ ಏನೇನು ಮಾಡಿದ್ದೀರಿ. ಈಗ ಚಾಮುಂಡೇಶ್ವರಿ ದೇವಸ್ಥಾನಕ್ಕೆ ಹೋಗಿ ಕುಂಕುಮ ಇಟ್ಟುಕೊಂಡು ರಕ್ಷಣೆ ಪಡೆಯುತ್ತಿದ್ದಾರೆ. ಇದರ ಜೊತೆಗೆ ಇನ್ನು ಎರಡು ಪ್ರಕರಣಗಳಿವೆ. ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ ದೂರುದಾರರು ಸುಪ್ರೀಂ ಕೋರ್ಟ್ ಮೊರೆ ಹೋಗಿದ್ದಾರೆ. ಈ ಸಂದರ್ಭದಲ್ಲಿ ಅರ್ಜಿದಾರರ ಒಬ್ಬರು ವಕೀಲರು ಮೃತಪಟ್ಟರೆ ಇನ್ನೊಬ್ಬರು ಜಡ್ಜ್ ಆಗಿ ನೇಮಕವಾಗಿದ್ದಾರೆ. ಸದ್ಯ ಈ ಪ್ರಕರಣ ಸುಪ್ರೀಂಕೋರ್ಟ್‌ನಲ್ಲಿದೆ ಎಂದು ಹೇಳಿದರು.

ಕೃಷ್ಣ ಬೈರೇಗೌಡ ಮೇಧಾವಿಯಲ್ವ ಇದನ್ನು ಪರಿಶೀಲನೆ ಮಾಡಪ್ಪ. ನಾನು ಇಂತಹ ಕೆಲಸ ಮಾಡಿಲ್ಲ. ಸಮಸ್ಯೆ ಬಂದಿದ್ದಕ್ಕೆ ಚುನಾವಣಾ ಖರ್ಚಿನ ಹೆಸರಿನಲ್ಲಿ ಈ ಜಾಗವನ್ನು ಮಾರಾಟ ಮಾಡಿದ್ದಾರೆ. ತಾನೊಂದು ಬಗೆದರೆ ದೈವ ಮತ್ತೊಂದು ಬಗೆಯುವುದು. ಈಗ ಅಧಿಕಾರ ದುರ್ಬಳಕೆ ಮಾಡಿಕೊಂಡು ನಮ್ಮನ್ನು ಮುಗಿಸಲು ಬಂದಿದ್ದಾರೆ ಎಂದು ಕಿಡಿಕಾರಿದರು.

1988ರಲ್ಲಿ ಮುಡಾ ವಿಜಯನಗರ 2ನೇ ಹಂತದ ಬಡಾವಣೆ ನಿರ್ಮಾಣಕ್ಕೆ ಹಿನಕಲ್ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿದ್ದ 535 ಎಕರೆ ಪ್ರದೇಶವನ್ನು ವಶಪಡಿಸಿಕೊಂಡಿತ್ತು. 10 ವರ್ಷಗಳ ಬಳಿಕ ಬಡಾವಣೆ ರಚನೆಗೊಂಡು ನಿವೇಶನ ಹಂಚಿಕೆ ಮಾಡಿತ್ತು. ಈ ಹಂಚಿಕೆ ವೇಳೆ ಅಕ್ರಮ ನಡೆದ ವಿಚಾರವನ್ನು ಹೆಚ್‌ಡಿ ಕುಮಾರಸ್ವಾಮಿ ಇಂದಿನ ಸುದ್ದಿಗೋಷ್ಠಿಯಲ್ಲಿ ಪ್ರಸ್ತಾಪ ಮಾಡಿ ಸಿಎಂ ವಿರುದ್ಧ ಕಿಡಿಕಾರಿದ್ದಾರೆ.

# ಪ್ರಜ್ವಲ್ ಪ್ರಕರಣಕ್ಕೆ ಭವಾನಿಯನ್ನು ಎಳೆ ತಂದಾಗ ಸರಿ ಅನ್ನಿಸಿತ್ತಾ

**ಬೆಂಗಳೂರು:** ಪ್ರಜ್ವಲ್ ರೇವಣ್ಣ ಪ್ರಕರಣಕ್ಕೆ ಭವಾನಿ ರೇವಣ್ಣ ಅವರನ್ನು ಎಳೆದು ತಂದಿದ್ದು ಸರಿಯೇ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಅವರು ಕಾಂಗ್ರೆಸ್ ನಾಯಕರಿಗೆ ಪ್ರಶ್ನೆ ಮಾಡಿದ್ದಾರೆ.



ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ ಬರೆದ ಪತ್ರವನ್ನು ಉಲ್ಲೇಖಿಸಿ ಕಾಂಗ್ರೆಸ್ ಮಾಡುತ್ತಿರುವ ಟೀಕೆಗೆ ಪ್ರತಿಕ್ರಿಯಿಸಿ, ನಾನು ಸಿಎಂ ಪತ್ನಿಯವರ ಪತ್ರ ನೋಡಿದ್ದೇನೆ. ಯಾರೂ ಸಹ ಸುಖಾಸುಮ್ಮನೇ ಕುಟುಂಬದ ಹೆಸರನ್ನು ತರಬಾರದು. ಆದರೆ ಕಾಂಗ್ರೆಸ್ ಭವಾನಿ ರೇವಣ್ಣ ಹೆಸರು ತಂದಿದ್ದರು. ಆಗ ಅವರಿಗೆ ಅದು ಸರಿ ಅನ್ನಿಸಿತ್ತಾ ಎಂದು ಮರು ಪ್ರಶ್ನೆ ಹಾಕಿ ತಿರುಗೇಟು ನೀಡಿದರು.

ಸೈಟ್ ವಾಪಸ್ ಕೊಟ್ಟಿದ್ದು ತುಂಬಾ ತಡವಾಗಿದೆ. ಇಷ್ಟು ದಿನ ನಾನು ತಪ್ಪೇ ಮಾಡಿಲ್ಲ ಎನ್ನುತ್ತಿದ್ದರು. ಈಗ ಯೂ ಟರ್ನ್ ಹೊಡೆದು ಸೈಟ್ ವಾಪಸ್ ನೀಡಿದ್ದಾರೆ. ರಾಜ್ಯದ ಜನತೆಗೆ ಈಗ ಎಲ್ಲವೂ ಅರ್ಥವಾಗಿದೆ ಎಂದು ಹೇಳಿದರು.

ಮೂಡಾ ಕೇಸ್ ಹಾಕಿದ್ದು ರಾಜಕೀಯ ಪಕ್ಷಗಳಲ್ಲ. ಮೂಡಾ ಅಕ್ರಮದ ಬಗ್ಗೆ ಮೊದಲು ಮಾಧ್ಯಮಗಳಲ್ಲಿ ಸುದ್ದಿಗಳು ಪ್ರಕಟವಾಗಿತ್ತು. ತಪ್ಪು ಮಾಡಿಲ್ಲ ಅಂದಮೇಲೆ ಯಾಕೆ ಸೈಟ್ ವಾಪಸ್ ಕೊಟ್ಟಿದ್ದೀರಿ. ಸೈಟ್ ಇಟ್ಟುಕೊಂಡು ಕಾನೂನು ಹೋರಾಟ ಎದುರಿಸಬೇಕಿತ್ತು ಎಂದು ತಿಳಿಸಿದರು.

ಬಿಜೆಪಿ ಸಿಎಂ ವಿರುದ್ಧ ಹೋರಾಟ ಮುಂದುವರೆಸುತ್ತದೆ. ನಮ್ಮ ಹೋರಾಟದಿಂದಲೇ ವಾಲ್ಮೀಕಿ ಹಗರಣ ಅಂತ್ಯಕ್ಕೆ ಬಂದು ನಿಂತಿದೆ. ಸಿಎಂ ಈಗಲಾದ್ರೂ ರಾಜೀನಾಮೆ ಕೊಡಬೇಕು. ಒಂದು ವೇಳೆ ಈಗ ರಾಜೀನಾಮೆ ನೀಡದೇ ಇದ್ದರೆ ರಾಜ್ಯವ್ಯಾಪಿ ಹೋರಾಟ ಮಾಡುತ್ತೇವೆ ಎಂದು ಎಚ್ಚರಿಕೆ ನೀಡಿದರು.

# ಒಡವೆ ಕದ್ದ ಕಳ್ಳ ವಾಪಸ್ ಕೊಟ್ಟರೆ ಕೇಸ್ ಮುಗಿಯುತ್ತಾ

**ಮೈಸೂರು:** ಹೊಗಳು ಭಟ್ಟರು ಬಹುಪರಾಕ್ ಹಾಕುವವರನ್ನು ಇಟ್ಟುಕೊಂಡ ಪರಿಣಾಮ ಸಿಎಂ ಸಿದ್ದರಾಮಯ್ಯನವರಿಗೆ ಈ ಸ್ಥಿತಿ ಬಂದಿದೆ ಎಂದು ಮಾಜಿ ಸಂಸದ ಪ್ರತಾಪ್ ಸಿಂಹ ಹೇಳಿದ್ದಾರೆ.



» ಪ್ರತಾಪ್ ಸಿಂಹ ಪ್ರಶ್ನೆ

ಸಿದ್ದರಾಮಯ್ಯನವರ ಪತ್ನಿ 14 ಸೈಟ್ ಅನ್ನು ಮರಳಿ ಮುಡಾಕ್ಕೆ ನೀಡಿದ ವಿಚಾರಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿದ ಅವರು, ಅಧಿಕಾರದಲ್ಲಿ ಇದ್ದಾಗ ಕುಟುಂಬ ಹತ್ತಿರವಿಟ್ಟುಕೊಂಡರೆ, ಮಕ್ಕಳನ್ನು ಬೆಳೆಸಲು ಮುಂದಾದರೆ ಅವರು ನಿಮ್ಮ ಹೆಸರಿಗೆ ಕಳಂಕ ತರುತ್ತಾರೆ ಎಂಬುದಕ್ಕೆ ಇದು ಇನ್ನೊಂದು ಉದಾಹರಣೆ. ಒಡವೆ ಕದ್ದ ಕಳ್ಳ ಒಡವೆ ವಾಪಸ್ ಕೊಟ್ಟರೆ ಕೇಸ್ ಮುಗಿಯುತ್ತಾ? ಇಲ್ಲ ಅಲ್ವಾ? ಎಂದು ಪ್ರಶ್ನಿಸಿದರು.

ಎರಡೂವರೆ ತಿಂಗಳ ಹಿಂದೆಯೇ ನಾನು ಸಿಎಂಗೆ ನಿಮಗೆ ಬಂದ ಅಕ್ರಮ ಸೈಟ್ ವಾಪಸ್ ಕೊಟ್ಟು ಬಿಡಿ ಎಂದು ಹೇಳಿದ್ದೆ. ಸಿಎಂ ಅವರ ಇಷ್ಟು ವರ್ಷದ ರಾಜಕೀಯ ಜೀವನವನ್ನು 14 ಸೈಟ್ ನುಂಗಬಾರದು ಎಂದು ಅಂದೇ ಹೇಳಿದ್ದೆ. ಎರಡೂವರೆ ತಿಂಗಳ ಹಿಂದೆ ವಾಪಸ್ ಕೊಟ್ಟಿದ್ದರೆ ಇವತ್ತು ಪ್ರಾಸಿಕ್ಯೂಷನ್, ಕೇಸ್ ಏನೂ ಆಗುತ್ತಿರಲಿಲ್ಲ. ಕುರ್ಚಿಯೂ ಅಲುಗಾಡುತ್ತಿರಲಿಲ್ಲ ಎಂದರು.

ಸಿಎಂ ತಮ್ಮ ಸೈಟ್‌ಗೆ 64 ಕೋಟಿ ರೂ. ಕೇಳಿದ ದಿನವೇ ಸಿಎಂ ಮೇಲಿನ ಗೌರವ, ವಿಶ್ವಾಸ ನೆಲ ಕಚ್ಚಿತು. ಈಗ ಸಿಎಂ ಪತ್ನಿ ಸೈಟ್ ವಾಪಸ್ ಕೊಟ್ಟರೂ ಅಷ್ಟೇ. ಕೊಡದಿದ್ದರೂ ಅಷ್ಟೇ. ತನಿಖೆ ಆಗಲೇಬೇಕು ಎಂದು ಆಗ್ರಹಿಸಿದರು.

ವರುಣಾ ಚುನಾವಣೆ ಸಂದರ್ಭದಲ್ಲೇ ನನಗೆ ಈ ಸೈಟ್ ದಾಖಲಾತಿ ಬಂದಿತ್ತು. ಪತ್ನಿ ಹೆಸರಿದೆ ವೈಯಕ್ತಿಕ ದಾಳಿ ಬೇಡ ಎಂದು ಸುಮ್ಮನಿದ್ದೆ. ರಾಜಕಾರಣಿಗಳೇ ನಿಮ್ಮ ಹೆಂಡತಿ, ಮಕ್ಕಳನ್ನು ಹದ್ದುಬಸ್ತಿನಲ್ಲಿ ಇಟ್ಟುಕೊಳ್ಳಿ. ಈ ಹಿಂದೆ ಸಿಎಂಗಳಾಗಿ ಜೈಲಿಗೆ ಹೋಗಿದ್ದು ಅವರ ಕುಟುಂಬದ, ಮಕ್ಕಳ ಕಾರಣಕ್ಕಾಗಿ ಎಂಬುದು ನೆನಪಿರಲಿ ಎಂದರು.

ಈಗ ಸಿಎಂ ಪತ್ನಿಯ ಭಾವನಾತ್ಮಕ ಕಾರ್ಡ್ ಕೆಲಸ ಮಾಡುವುದಿಲ್ಲ. ಪಾರ್ವತಮ್ಮ ಅವರಿಗೆ ತಮ್ಮ ಪತಿಯ ತಪಸ್ಸಿನ ರೀತಿಯ ರಾಜಕಾರಣಕ್ಕಿಂತಾ ಸೈಟ್ ಮುಖ್ಯವಾಗಿ ಇಷ್ಟು ದಿನ ಹಠ ಹಿಡಿದು ಕೂತಿದ್ದೆ ಬಹುದೊಡ್ಡ ತಪ್ಪು. ಈಗ ಸೈಟ್ ವಾಪಸ್ ಕೊಡುವುದಾಗಿದ್ದರೆ ಹೈಕೋರ್ಟ್‌ನಲ್ಲಿ ಹೋರಾಟ ಮಾಡಿದ್ದು ಯಾಕೆ ಎಂದು ಪ್ರಶ್ನಿಸಿದರು.

ಇಡಿಯಿಂದ ಮತ್ತೊಂದು ಕೇಸ್

# 18 ಅಧಿಕಾರಿಗಳ ವಿರುದ್ಧ ಇಸಿಐಆರ್ ದಾಖಲು




**ಬೆಂಗಳೂರು:** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಹಗರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ ಮತ್ತೊಂದು ಇಸಿಐಆರ್ (ಜಾರಿ ನಿರ್ದೇಶನಾಲಯ ಪ್ರಕರಣ ಮಾಹಿತಿ ವರದಿ) ದಾಖಲಿಸಿದೆ.

2022ರಲ್ಲಿ ಲೋಕಾಯುಕ್ತ ದಾಖಲಿಸಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ 18 ಅಧಿಕಾರಿಗಳ ವಿರುದ್ಧ ಇಸಿಐಆರ್ ದಾಖಲಾಗಿದೆ.

ಹಿನಕಲ್ ಸರ್ವೇ ನಂಬರ್ 89ರಲ್ಲಿ ಮುಡಾದಿಂದ ನಿವೇಶನ ಹಂಚಿಕೆಯಾಗಿತ್ತು. 350 ಕ್ಕೂ ಹೆಚ್ಚು ಪ್ರಭಾವಿಗಳಿಗೆ 7.18 ಎಕರೆ ಜಮೀನನ್ನು ಹಂಚಿಕೆ ಮಾಡಿದ ಆರೋಪ ಕೇಳಿ ಬಂದಿದೆ. ಈ ಆರೋಪಕ್ಕೆ ಸಂಬಂಧಿಸಿದಂತೆ 2017ರಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ 18 ಅಧಿಕಾರಿಗಳ ವಿರುದ್ಧ ಇಸಿಐಆರ್ ದಾಖಲಾಗಿದೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸೆ.9ರಂದು 18 ಅಧಿಕಾರಿಗಳಿಗೆ ಲೋಕಾಯುಕ್ತ ವಿಚಾರಣೆಗೆ ಬರುವಂತೆ ನೋಟಿಸ್ ಜಾರಿ ಮಾಡಿತ್ತು.

14 ಬದಲಿ ನಿವೇಶನಗಳ ಹಂಚಿಕೆಯಲ್ಲಿ ನಡೆದಿದೆ ಎನ್ನಲಾದ ಅಕ್ರಮಕ್ಕೆ ಸಂಬಂಧಿಸಿದಂತೆ ಸಿಎಂ ಸಿದ್ದರಾಮಯ್ಯ ವಿರುದ್ಧ ಸೆ.30 ರಂದು ಹಣ ಅಕ್ರಮ ವರ್ಗಾವಣೆ ತಡೆ ಕಾಯ್ದೆಯಡಿ ಪ್ರಕರಣ ದಾಖಲಿಸಿತ್ತು. ಇಡಿಯಿಂದ ಇಸಿಐಆರ್ ದಾಖಲಾದ ಬೆನ್ನಲ್ಲೇ ಸಿಎಂ ಅವರ ಪತ್ನಿ ಪಾರ್ವತಿ ಅವರು 14 ಸೈಟ್‌ಗಳನ್ನು ಮುಡಾಗೆ ನೀಡುವುದಾಗಿ ಪತ್ರ ಬರೆದಿದ್ದರು.

# ಲೋಕಾಯುಕ್ತ ಎಡಿಜಿಪಿ ಚಂದ್ರಶೇಖರ್ ವಿರುದ್ಧ ಗದಗದಲ್ಲಿ ಜೆಡಿಎಸ್ ಪ್ರೊಟೆಸ್ಟ್

**ಗದಗ:** ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ ಅವರ ವಿರುದ್ಧ ಪತ್ರದಲ್ಲಿ ಆಕ್ಷೇಪಾರ್ಹ ಹೇಳಿಕೆ ನೀಡಿದ್ದಾರೆಂದು ಆರೋಪಿಸಿ ಎಡಿಜಿಪಿ ಚಂದ್ರಶೇಖರ್ ವಿರುದ್ಧ ಗದಗ ಜಿಲ್ಲಾ ಜೆಡಿಎಸ್ ಕಾರ್ಯಕರ್ತರು ತಹಶೀಲ್ದಾರ್ ಕಚೇರಿ ಬಳಿ ಪ್ರತಿಭಟನೆ ಮಾಡಿದರು. ಲೋಕಾಯುಕ್ತ ಎಡಿಜಿಪಿ ಚಂದ್ರಶೇಖರ್ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಅಧಿಕಾರಿ ಚಂದ್ರಶೇಖರ್ ಅವರನ್ನು ಕೆಲಸದಿಂದ ವಜಾಗೊಳಿಸುವಂತೆ ಒತ್ತಾಯಿಸಿದರು.

ಹೆಚ್‌ಡಿಕೆ ವಿರುದ್ಧ ಅಸಂವಿಧಾನಿಕ ಪದ ಬಳಕೆ ಚಂದ್ರಶೇಖರ್ ಅವರು ಮಾಡಿದ್ದಾರೆ. ಇಂತಹ ಅಧಿಕಾರಿಯ ವಿರುದ್ಧ ಕೂಡಲೇ ಕ್ರಮ ಕೈಗೊಳ್ಳಬೇಕು. ಕುಮಾರಸ್ವಾಮಿಗೆ ಹಾಗೂ ನಾಡಿನ ಜನತೆಗೆ ಕೂಡಲೆ ಕ್ಷಮೆ ಕೇಳಬೇಕು. ಅಧಿಕಾರಿಯಾಗಿದ್ದು ನಾಲಿಗೆ ಮೇಲೆ ಹಿಡಿತವಿಟ್ಟುಕೊಳ್ಳಬೇಕು. ಭ್ರಷ್ಟಾಚಾರ ಆರೋಪ ಬಗ್ಗೆ ತನಿಖೆ ಆಗಬೇಕೆಂದು ಜೆಡಿಎಸ್ ಕಾರ್ಯಕರ್ತರು ಒತ್ತಾಯಿಸಿದರು.

ನಂತರ ಗದಗ ತಹಶೀಲ್ದಾರ್ ಮೂಲಕ ರಾಜ್ಯಪಾಲರು, ರಾಷ್ಟ್ರಪತಿ ಹಾಗೂ ಕೇಂದ್ರ ಗೃಹ ಸಚಿವರಿಗೆ ಮನವಿ ಸಲ್ಲಿಸಿದರು. ಈ ವೇಳೆ ಜೆಡಿಎಸ್ ರಾಜ್ಯ ವಕ್ತಾರ ವೆಂಕನಗೌಡ ಗೋವಿಂದಗೌಡ, ಬಸವರಾಜ್ ಅಪ್ಪನ್ನವರ್, ಸಂತೋಷ್ ಪಾಟೀಲ, ಪ್ರಫುಲ್ ಪುಣೇಕರ್, ದೇವಪ್ಪ ಮಲ್ಲಸಮುದ್ರ, ರಮೇಶ್ ಹುಣಶಿಮರದ, ಕುಮಾರ್ ಜಿಗಳೂರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಮೊದಲನೇ ಪುಟದಿಂದ...

# ಸರಿದಿದ್ದ ದೂರುದಾರೆ!

ಶಾಸಕ ಮುನಿರತ್ನ ವಿರುದ್ಧ ಜೂನ್‌ನಲ್ಲೇ ದೂರು ದಾಖಲಾಗಿತ್ತು. ಜೂನ್‌ನಲ್ಲಿಯೇ ಶಾಸಕ ಮುನಿರತ್ನ ವಿರುದ್ಧ ಸಂತ್ರಸ್ತ ಮಹಿಳೆ ಕಗ್ಗಲಿಪುರ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ಈ ದೂರನ್ನು ಅರ್ಜಿಯಾಗಿ ಪಡೆದುಕೊಂಡಿದ್ದ ಪೊಲೀಸರು ಅರ್ಜಿ ಸಂಬಂಧ ವಿಚಾರಣೆಗೆ ಸಾಕ್ಷಿ ನೀಡುವಂತೆ ದೂರುದಾರೆಗೆ ತಿಳಿಸಿದ್ದರು. ಈ ಸಂಬಂಧ ದೂರುದಾರೆಗೆ ನೋಟಿಸ್ ನೀಡಲಾಗಿತ್ತು. ಆದ್ರೆ ದೂರುದಾರೆ ಪೊಲೀಸರ ಮುಂದೆಯೇ ಹಾಜಾರಾಗಿರಲಿಲ್ಲ. ಹೀಗಾಗಿ ಪೊಲೀಸರು ವಿಚಾರಣೆಯನ್ನು ಹಾಗೇಯೇ ಬಿಟ್ಟಿದ್ದರು. ಈಗ ಮತ್ತೆ ಅದೇ ಪೊಲೀಸ್ ಠಾಣೆಗೆ ತೆರಳಿ ದೂರು ನೀಡಿದ್ದರಿಂದ ಕೇಸ್ ದಾಖಲು ಮಾಡಿ ಅರೆಸ್ಟ್ ಮಾಡಲಾಗಿತ್ತು. ಆದರೆ ಈ ವಿಚಾರವಾಗಿ ಕೆಲ ಪ್ರಶ್ನೆಗಳಿಗೆ ಉತ್ತರ ಸಿಗುತ್ತಿಲ್ಲ.

ಸಂತ್ರಸ್ತೆ ಈ ಹಿಂದೆ ದೂರು ಕೊಟ್ಟಿದ್ದರೂ ಆಗ ಪೊಲೀಸರು ಎಫ್ಐಆರ್ ದಾಖಲಿಸಿರಲಿಲ್ಲ. ಹೀಗಾಗಿ ದೂರು ಕೊಟ್ಟರೂ ಯಾಕೆ ಪೊಲೀಸರು ಎಫ್ಐಆರ್ ದಾಖಲಿಸಿಲ್ಲ ಎಂಬ ಪ್ರಶ್ನೆ ಮೂಡಿದೆ. ಅಷ್ಟಲ್ಲದೇ, ಮಹಿಳೆ ಮೂರು ತಿಂಗಳ ಹಿಂದೆ ದೂರು ನೀಡಿ ಹಿಂದೆ ಸರಿದಿದ್ದು ಯಾಕೆ ಎಂಬ ಪ್ರಶ್ನೆ ಉದ್ಭವಿಸಿದೆ.

# ಮಿಡ್‌ನೈಟ್ ಮೀಟಿಂಗ್!

**14 ಸೈಟ್ ವಾಪಸ್ ಪಡೆದ ಮುಡಾ:** ಸಿಎಂ ಪತ್ನಿಯಿಂದ ಮುಡಾ ಅಧಿಕಾರಿಗಳು ಎಲ್ಲಾ 14 ಸೈಟ್‌ಗಳನ್ನ ವಾಪಸ್ ಪಡೆದಿದ್ದಾರೆ. ನಿನ್ನೆಯೇ ಎಲ್ಲಾ ಪತ್ರ ವ್ಯವಹಾರ ಮುಗಿದಿದೆ. ಈ ನಡುವೆ ಲೋಕಾಯುಕ್ತ ತನಿಖೆ ಚುರುಕುಗೊಂಡಿದೆ. ತಾಂತ್ರಿಕ ವಿಭಾಗದಿಂದ ಕಾನೂನು ವಿಭಾಗಕ್ಕೆ ಸಿಬ್ಬಂದಿ ಫೈಲ್ ಸ್ಥಳಾಂತರ ಮಾಡಿದ್ದಾರೆ. ಯಾವುದೇ ಕ್ಷಣದಲ್ಲಿ ಲೋಕಾಯುಕ್ತರು ದಾಖಲೆ ಕೇಳುವ ಸಾಧ್ಯತೆ ಇರುವುದರಿಂದ ದಾಖಲೆ ಸಿದ್ದಪಡಿಸಿಕೊಳ್ಳುತ್ತಿರುವ ಮುಡಾ ಅಧಿಕಾರಿಗಳು. ಇನ್ನು ಲೋಕಾಯುಕ್ತ ಅಧಿಕಾರಿಗಳು ಪೆನ್ ಡ್ರೈವ್, ಪ್ರಿಂಟರ್ ತೆಗೆದುಕೊಂಡು ಹೋಗಿದ್ದಾರೆ.

ಸಿಎಂ ವಿರುದ್ಧ ಲೋಕಾಯುಕ್ತದಲ್ಲಿ ಎಫ್ಐಆರ್ ವಿಚಾರ, ಲೋಕಾಯುಕ್ತ ಅಧಿಕಾರಿಗಳು ತನಿಖಾ ಕಾರ್ಯ ಮುಂದುವರೆಸಿದ್ದಾರೆ. ಮೈಸೂರು ತಾಲ್ಲೂಕು ಕಚೇರಿಗೆ ಎಸ್ಪಿ ಟಿ.ಜೆ.ಉದೇಶ್ ನೇತೃತ್ವದ ತಂಡ ಭೇಟಿ ನೀಡಿ ತಾಲ್ಲೂಕು ಕಚೇರಿಯ ಅಭಿಲೇಖನ ಶಾಖೆಯ ದಾಖಲೆಗಳ ಪರಿಶೀಲನೆ ಮಾಡಿದ್ದಾರೆ.

ಮುಡಾ ಹಗರಣದಲ್ಲಿ ಮತ್ತೊಂದು ಇಸಿಐಆರ್ ದಾಖಲಾಗಿದೆ. 18 ಅಧಿಕಾರಿಗಳ ವಿರುದ್ಧ ಇಅಖಖ ದಾಖಲಿಸಿದ್ದಾರೆ ಇ.ಡಿ ಅಧಿಕಾರಿಗಳು.. 2022 ರಲ್ಲಿ ಲೋಕಾಯುಕ್ತ ದಾಖಲಿಸಿದ್ದ ಪ್ರಕರಣದಲ್ಲಿ ಹಿನಕಲ್ ಸರ್ವೇ ನಂಬರ್ 89ರ ನಿವೇಶನ ಹಂಚಿಕೆ ಹಗರಣದ ಬಗ್ಗೆ ಇಡಿ ಅಖಾಡಕ್ಕೆ ಇಳಿದಿದೆ. 7.18 ಎಕರೆ ಜಮೀನನ್ನು ನಿವೇಶನ ಮಾಡಲಾಗಿತ್ತು. 350 ಕ್ಕೂ ಹೆಚ್ಚು ಪ್ರಭಾವಿಗಳಿಗೆ ಸೈಟ್ ಹಂಚಿಕೆ ಆರೋಪ ಕೇಳಿಬಂದಿದೆ. 2017ರಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅಧಿಕಾರಿಗಳ ವಿರುದ್ಧ ಇಸಿಐಆರ್ ದಾಖಲಾಗಿದೆ.

# ಬಲವಾದ ಕಾರಣ

ಈ ಸೆಕ್ಷನ್ ಗೆ ಇರುವ ಮಹತ್ವ ಹಾಗೂ ಅದರ ಪರಿಣಾಮಗಳನ್ನು ಅರಿತೇ ಸಿಎಂ ಪತ್ನಿ ಸೈಟ್ ವಾಪಸ್ ಕೊಡಲು ಮನ ಮಾಡಿದ್ದು ಎನ್ನಲಾಗುತ್ತಿದೆ.

**ಪಿಎಂಎಲ್ ಎ ಕಾಯ್ದೆ ಸೆಕ್ಷನ್ 15 ರ ಮಹತ್ವ ಏನು?** ಈ ಸೆಕ್ಷನ್ ಅಡಿ ಆರೋಪಿಗಳ ಆಸ್ತಿ ಮುಟ್ಟುಗೋಲು ಹಾಕಿಕೊಳ್ಳಲು ಜಾರಿ ನಿರ್ದೇಶನಾಲಯಕ್ಕೆ ಅಧಿಕಾರವಿದೆ. ಇದಕ್ಕೆ ಯಾವುದೇ ನ್ಯಾಯಾಲಯದ ಆದೇಶ ಪಡೆಯಬೇಕು ಎಂಬ ನಿಯಮ ಕೂಡ ಇಲ್ಲ. ಸಂಬಂಧಪಟ್ಟ ಆಸ್ತಿಗಾಗಿ ಮನಿಲಾಂಡ್ರಿಂಗ್ (ಹಣಕಾಸು ಅಕ್ರಮ ವರ್ಗಾವಣೆ) ನಡೆದಿದೆ ಎಂದು ತನಿಖಾಧಿಕಾರಿಗೆ ಅನಿಸಿದರೆ 180 ದಿನಗಳವರೆಗೂ ಆಸ್ತಿಯನ್ನ ಮುಟ್ಟಗೋಲು ಹಾಕಿಕೊಳ್ಳಬಹುದಾಗಿದೆ.

ಹೀಗಾಗಿ, ಒಂದು ವೇಳೆ ಸಿಎಂ ಪತ್ನಿ ಈ ಸೈಟ್ ಗಳನ್ನು ವಾಪಸ್ ಕೊಡದೇ ಇದ್ದಲ್ಲಿ ಜಾರಿ ನಿರ್ದೇಶನಾಲಯ ಯಾವುದೇ ಕ್ಷಣದಲ್ಲಿ ಮುಟ್ಟಗೋಲು ಹಾಕಿಕೊಳ್ಳುವ ಸಾಧ್ಯತೆ ಇದೆ. ಸೈಟ್ ಗಳನ್ನು ಜಾರಿ ನಿರ್ದೇಶನಾಲಯ ಮುಟ್ಟುಗೋಲು ಹಾಕಿಕೊಂಡರೆ ಸಿದ್ದರಾಮಯ್ಯಗೆ ದೊಡ್ಡ ಹಿನ್ನಡೆಯಾಗುವ ಸಾಧ್ಯತೆ ಇತ್ತು. ಇದಕ್ಕಾಗಿಯೇ ಕೂಡಲೆ ಸೈಟ್ ಗಳನ್ನು ವಾಪಸ್ ಕೊಡುವ ನಿರ್ಧಾರ ಮಾಡಿರಬಹುದು ಎಂದು ವಿಶ್ಲೇಷಿಸಲಾಗುತ್ತಿದೆ.

# ಲೋಕಾಯುಕ್ತ ಬಲೆಗೆ

ಭವನದಲ್ಲಿರುವ ಕಚೇರಿಯಲ್ಲಿ ಕಾರ್ಯಾಚರಣೆ ನಡೆಸಲಾಗಿದೆ. ಬಾಗಲಕೋಟೆಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಧಿಕಾರಿ ರಾಜಶ್ರೀ ಪೋಳ ಅವರು ಸಿಬ್ಬಂದಿಯನ್ನು ಕರ್ತವ್ಯಕ್ಕೆ ಸೇರಿಸಿಕೊಳ್ಳಲು ಲಂಚದ ಬೇಡಿಕೆ ಇಟ್ಟಿದ್ದರಂತೆ. 5 ಸಾವಿರ ರೂಪಾಯಿ ಲಂಚದ ಹಣ ಪಡೆಯುವ ವೇಳೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿ ವಶಕ್ಕೆ ಪಡೆದುಕೊಂಡಿದ್ದಾರೆ.

ರಾಜ್ಯದ ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ಎಂಎಸ್ಐಎಲ್ ನಿಗಮದ ಸಿಎಸ್ಆರ್ ನಿಧಿಯಿಂದ ಉಚಿತ ನೋಟ್ ಬುಕ್ ವಿತರಣೆ ಆರಂಭಿಸಿದೆ. ಈ ಹಿನ್ನೆಲೆ ಚಾಮರಾಜನಗರದಲ್ಲಿ ಎಂಎಸ್ಐಎಲ್ ಅಧ್ಯಕ್ಷ ಸಿ ಪುಟ್ಟರಂಗಶೆಟ್ಟಿ ಹರದನಹಳ್ಳಿ ಹಾಗು ನಗರದ ಜೆಎಸ್ಎಸ್ ಶಿಕ್ಷಣ ಸಂಸ್ಥೆಯ ವಿದ್ಯಾರ್ಥಿಗಳಿಗೆ ಉಚಿತ ನೋಟ್ ಪುಸ್ತಕ ವಿತರಣೆ ಮಾಡಿದರು. ಬಳಿಕ ಮಾತನಾಡಿದ ಅವರು, ಎಂಎಸ್ಐಎಲ್ ಗೋದಾಮಿನಲ್ಲಿ 216 ಟನ್ ನೋಟ್ ಪುಸ್ತಕ ದಾಸ್ತಾನು ಇದೆ. ಹಾಗಾಗಿ ರಾಜ್ಯದ ಸರ್ಕಾರಿ ಶಾಲೆಗಳ 1 ರಿಂದ 10 ನೇ ತರಗತಿ ವಿದ್ಯಾರ್ಥಿಗಳಿಗೆ ಒಂದುವರೆ ಕೋಟಿ ರೂ ಮೌಲ್ಯದ ನೋಟ್ ಪುಸ್ತಕ ವಿತರಣೆ ಮಾಡಲಾಗುತ್ತಿದೆ ಎಂದರು.

# ದಸರಾ ರಜೆ ಆರಂಭ

ಅದರ ನಿಯಮಾನುಸಾರದಂತೆ ರಜೆಗಳು ಘೋಷಣೆಯಾಗಿವೆ. ಕರ್ನಾಟಕದಲ್ಲಿ 2024-25ರ ಶೈಕ್ಷಣಿಕ ವರ್ಷವು ಮೇ 29ರಿಂದ ಪ್ರಾರಂಭವಾಗಿದ್ದು, ಮೊದಲ ಅವಧಿಯು ಅಕ್ಟೋಬರ್ 2ರ ತನಕ ಇತ್ತು. ಸೆಪ್ಟೆಂಬರ್ 23ರಿಂದ ಮಧ್ಯಂತರ ಪರೀಕ್ಷೆಗಳು ಶುರುವಾಗಿ ಸೆಪ್ಟೆಂಬರ್ 30ರ ತನಕ ನಡೆದಿವೆ. ಆ ಬಳಿಕ ಸರ್ಕಾರಿ ಮತ್ತು ಖಾಸಗಿ ಶಾಲಾ ಮಕ್ಕಳಿಗೆ ದಸರಾ ರಜೆ ಪ್ರಕ್ರಿಯೆ ಶುರುವಾಗಿದೆ. ಅಕ್ಟೋಬರ್ 2ರಂದು ಎಲ್ಲಾ ಶಾಲೆಗಳಲ್ಲೂ ಗಾಂಧಿ ಜಯಂತಿ ಆಚರಿಸಿದ ಮರು ದಿನದಿಂದ ಶಾಲಾ ಮಕ್ಕಳಿಗೆ ದಸರಾ ರಜೆ ನೀಡಲಾಗಿದೆ. ಅಕ್ಟೋಬರ್ ತಿಂಗಳಲ್ಲಿ ಕೇವಲ 11 ದಿನಗಳು ತರಗತಿಗಳು ನಡೆಯಲಿವೆ.

# ಟಾಪಿಂಗ್ ಕಾಮಗಾರಿ

ಬಿಬಿಎಂಪಿ ಮುಖ್ಯ ಮಾತನಾಡಿ, ಆಯುಕ್ತರು ವೈಟ್ ಟಾಪಿಂಗ್ ಕಾಮಗಾರಿ ತಡ ಆಗುವುದಕ್ಕೆ ಪೊಲೀಸ್ ಇಲಾಖೆ, ಜಲಮಂಡಳಿ ಹಾಗೂ ಬೆಸ್ಕಾಂ ಕಾರಣ ಎಂದು ತಿಳಿಸಿದ್ದಾರೆ. ಪೊಲೀಸ್ ಇಲಾಖೆ ಬದಲಿ ಮಾರ್ಗ ನೀಡಲ್ಲ, ಜಲಮಂಡಳಿ ಪೈಪ್ ಮಾಹಿತಿ ನೀಡಲ್ಲ ಈ ಕಾರಣದಿಂದಾಗಿ ತಡ ಆಗುತ್ತಿದೆ. ಇಲಾಖೆಗಳ ಜೊತೆ ಸಮನ್ವಯ ಸಾದಿಸಲು ಬಿಬಿಎಂಪಿ ವಿಶೇಷ ಆಯುಕ್ತ ಮನೀಷ್ ಮೌದ್ಗಿಲ್ ನೇತೃತ್ವದಲ್ಲಿ ತಂಡ ರಚನೆ ಮಾಡಿದ್ದಾರೆ.

ಹೆಣ್ಣೂರು ಜಂಕ್ಷನ್, ತುಮಕೂರು ರಸ್ತೆಯ ಎಂಇಎ ಮುಖ್ಯ ರಸ್ತೆ, ರಾಜ್‌ಕುಮಾರ್ ರಸ್ತೆಯ ಒಳಭಾಗದ ರಸ್ತೆಗಳು, ಮಹಾದೇವಪುರ, ಪಶ್ಚಿಮ ವಲಯದ ಹಲವು ಪ್ರದೇಶದ ರಸ್ತೆಗಳಲ್ಲಿ ವೈಟ್ ಟಾಪಿಂಗ್ ಕಾಮಗಾರಿ ಆರಂಭ ಆಗಲಿದ್ದು, ಟ್ರಾಫಿಕ್ ಸಮಸ್ಯೆ ಆಗುವ ಸಾಧ್ಯತೆ ಇದೆ. ಹೀಗಾಗಿ ಸಾರ್ವಜನಿಕರು ಸಹಕರಿಸಬೇಕು ಎಂದು ಮನವಿ ಮಾಡಿಕೊಂಡಿದ್ದಾರೆ.

ಒಟ್ಟಾರೆ ವೈಟ್ ಟಾಪಿಂಗ್ ರಸ್ತೆ ಮಾಡುವುದು ಒಳ್ಳೆಯದೇ ಆದರೆ ಕೊಟ್ಟಿರುವ ಸಮಯದ ಒಳಗಡೆ ಮುಗಿಸಬೇಕು. ಇಲ್ಲದೇ ಇದ್ದರೆ ಸಾರ್ವಜನಿಕರಿಗೆ ಸಮಸ್ಯೆ ಆಗಲಿದೆ. ಈಗಾಗಿ ಡೆಡ್‌ಲೈನ್ ಒಳಗಡೆ ವೈಟ್ ಟಾಪಿಂಗ್ ಕಾಮಗಾರಿ ಮುಗಿಸುವ ಮೂಲಕ ಸುಗಮ ಸಂಚಾರಕ್ಕೆ ಅನುವು ಮಾಡಿ ಮಾಡಿಕೊಡುತ್ತಾರಾ ಎನ್ನುವುದು ಕಾದು ನೋಡಬೇಕಿದೆ.

# ಯುವಕ

ಪೊಲೀಸರು ಆಗಮಿಸಿ ಕಂಡಕ್ಟರ್ ಯೋಗೀಶ್ ಅವರನ್ನ ಸ್ಥಳೀಯ ಖಾಸಗಿ ಆಸ್ಪತ್ರೆಗೆ ದಾಖಲಿಸಿದ್ದಾರೆ.

ಚಾಕು ಇರಿದಿದ್ದ ಯುವಕನ್ನ ವಶಕ್ಕೆ ಪಡೆದು ಠಾಣೆಗೆ ಕರೆದುಕೊಂಡು ವಿಚಾರಣೆ ನಡೆಸಿದ್ದಾರೆ. ಆರೋಪಿ ಹರಿಸಿಂಹ ಜಾರ್ಖಂಡ್ ಮೂಲದವನು ಎಂದು ತಿಳಿದು ಬಂದಿದೆ.

# ಪೈಪ್

ತಪ್ಪಿ ಗೂಡ್ಸ್ ಲಾರಿ ಪಲ್ಟಿಯಾಗಿದೆ. ಸರ್ವೀಸ್ ರಸ್ತೆಯ ಜಾಲರಿಗೆ ಹಾಕಿದ್ದ ಕಬ್ಬಿಣದ ಪೈಪ್ ಚಾಲಕನ ಎದೆಯೊಳಗೆ ಹೊಕ್ಕಿದೆ. ರಕ್ತ ಸೋರುತ್ತಿದ್ದರೂ ಚಾಲಕ ದಿಕ್ಕು ತೋಚದೇ ಕುಳಿತು ಬಿಟ್ಟಿದ್ದಾನೆ. ರಾಷ್ಟ್ರೀಯ ಹೆದ್ದಾರಿಯ ಅಂಬ್ಯುಲೆನ್ಸ್ ಸಿಬ್ಬಂದಿ ಮತ್ತು ಅಗ್ನಿಶಾಮಕ ದಳದವರು ಸ್ಥಳಕ್ಕೆ ದೌಡಾಯಿಸಿದ್ದು, ಕಬ್ಬಿಣದ ಪೈಪ್‌ನ್ನು ಹೊರತೆಗೆಯಲು ಹರಸಾಹಸ ಪಡುತ್ತಿದ್ದಾರೆ. ರಾಣೇಬೆನ್ನೂರು ಗ್ರಾಮೀಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದ್ದು, ಪ್ರಕರಣ ದಾಖಲಾಗಿದೆ. ಸದ್ಯ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆ.

# ಮುಡಾ ಸೈಟ್ ವಾಪಸ್ ನೀಡಿರುವುದು ಒಳ್ಳೆಯ ನಿರ್ಧಾರ



**ಬೆಂಗಳೂರು:** ಮುಡಾ ಸೈಟ್ ವಾಪಾಸ್ ನೀಡಿರುವುದು ಒಳ್ಳೆಯ ನಿರ್ಧಾರ ಎಂದು ಸಿಎಂ ಪತ್ನಿ ಮುಡಾ ಸೈಟ್ ವಾಪಸ್ ನೀಡಿರುವ ವಿಚಾರವಾಗಿ ಗೃಹ ಸಚಿವ ಪರಮೇಶ್ವರ್ ಹೇಳಿದ್ದಾರೆ.

ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಸ್ವಾಭಾವಿಕವಾಗಿ ಮನೆಯಲ್ಲಿ ಯಜಮಾನರಿಗೆ ತೊಂದರೆ ಆಗುತ್ತಿದೆ ಅಥವಾ ತೇಜೋವಧೆ ಆಗುತ್ತಿದೆ ಎನ್ನವುದು ಅವರಿಗೆ ಗೊತ್ತಾಗಿದೆ. ಅದಕ್ಕಾಗಿ ವಾಪಸ್ ಮಾಡುತ್ತೇನೆ ಎಂದಿದ್ದಾರೆ. ಇದೊಂದು ಒಳ್ಳೆಯ ನಿರ್ಧಾರ ಅನಿಸುತ್ತದೆ. ತನಿಖೆ ಇರಲಿ ಆಪಾದನೆ ಬಂದ ತಕ್ಷಣ ಇದು ಸತ್ಯ ಆಗುವುದಿಲ್ಲ. ಆದರೆ ಇಷ್ಟು ದಿನ ರಾಜಕೀಯಕ್ಕೆ ಉಪಯೋಗಿಸುತ್ತಿದ್ದಾರೆ ಎನ್ನುವುದು ಅವರ ಅಭಿಪ್ರಾಯ ಅಷ್ಟೇ ಎಂದರು. ಕಾನೂನು ದೃಷ್ಟಿಯಲ್ಲಿ ಮುಂದೆ ಏನಾಗುತ್ತದೆ ಗೊತ್ತಿಲ್ಲ. ಸರೆಂಡರ್ ಮಾಡಿದ ಮೇಲೆ ಏನಾಗುತ್ತದೆ ಎಂದು ಗೊತ್ತಿಲ್ಲ. ರಾಜಕೀಯಕ್ಕೆ ಉಪಯೋಗ ಮಾಡುತ್ತಿದ್ದಾರೆ. ನನಗೆ ಮರ್ಯಾದೆ ಮುಖ್ಯ ಅನ್ನುವುದು ಅವರ ಭಾವನೆಯಾಗಿದೆ. ಹಾಗಾಗಿಯೇ ಮುಡಾ ಸೈಟುಗಳನ್ನು ವಾಪಸ್ ನೀಡಿದ್ದಾರೆ. ಆದರೆ ಮುಡಾ ವಿಚಾರ ಬಿಜೆಪಿಯವರಿಗೆ ರಾಜಕೀಯಕ್ಕೆ ಉಪಯೋಗ ಆಗುತ್ತಿದೆ ಎನ್ನುವುದು ಖಾತ್ರಿಯಾಗಿದೆ ಎಂದು ತಿಳಿಸಿದ್ದಾರೆ.

# ಹಿರಿಯರ ಜೀವನಾಧಾರಕ್ಕೆ ಸರ್ಕಾರದಿಂದ ಸೌಲಭ್ಯಗಳು

**ಕೋಲಾರ:** ಹಿರಿಯರು ಕುಟುಂಬದಲ್ಲಿ ಯಾರಿಗೂ ಹೊರೆಯಾಗದಂತೆ ಜೀವನ ನಡೆಸಲು ಅನುಕೂಲವಾಗುವಂತೆ ಸರ್ಕಾರವು ಹತ್ತಾರು ಯೋಜನೆಗಳನ್ನು ಜಾರಿಗೊಳಿಸಿದ್ದು, ಇವುಗಳ ಸದುಪಯೋಗಪಡಿಸಿಕೊಂಡು ಸಂತೋಷದಿಂದಿರಬೇಕೆಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಸುನಿಲ ಎಸ್. ಹೊಸಮನಿ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಹಾಗೂ ಸ್ವಯಂ ಸೇವಾ ಸಂಸ್ಥೆಗಳು ಸಂಯುಕ್ತಾಶ್ರಯದಲ್ಲಿ ಪತ್ರಕರ್ತರ ಭವನದಲ್ಲಿ ವಿಶ್ವ ಹಿರಿಯ ನಾಗರೀಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು 2007ರಲ್ಲಿ ಹಿರಿಯ ನಾಗರೀಕರ ಸುರಕ್ಷತೆಗಾಗಿ ಕಾಯ್ದೆಯನ್ನು ಜಾರಿಗೊಳಿಸಿದ್ದು, ಹಿರಿಯರು ಈ ಕಾಯ್ದೆಯ ಪ್ರಯೋಜನ ಪಡೆಯಬೇಕೆಂದರು. ಆಸರೆಯಿಲ್ಲದವರಿಗೆ ಊಟ ಬಟ್ಟೆ ಹಾಗೂ ಜೀವನಾಂಶವನ್ನು ಒದಿಗಿಸಲು ಸಹಾಯವಾಗುತ್ತಿದೆ.

ವಿಭಕ್ತ ಕುಟುಂಬಗಳಲ್ಲಿ ತಂದೆ-ತಾಯಿಯರನ್ನು ನೋಡಿಕೊಳ್ಳದೆ ವೃದ್ಧಾಶ್ರಮಕ್ಕೆ ಸೇರಿಸುತ್ತಿರುವುದರಿಂದ ಸರ್ಕಾರಿ ಹಾಗೂ ಸರ್ಕಾರೇತರ ವೃದ್ಧಾಶ್ರಮಗಳು ಹೆಚ್ಚಾಗುತ್ತಿವೆ. ವೃದ್ಧರನ್ನು ತುಂಬಾ ಜೋಪಾನವಾಗಿ ನೋಡಿಕೊಳ್ಳಬೇಕು, ಹಿರಿಯ ಹಿರಿಯರ ಆಸ್ತಿ-ಪಾಸ್ತಿಗಳನ್ನು ಮಕ್ಕಳು ಪಡೆದುಕೊಂಡು ಅವರ ಯೋಗಕ್ಷೇಮ ನೋಡದೆ ಇರುವವರ ವಿರುದ್ಧ, ಅವರಿಗೆ ಆಸ್ತಿಪಾಸ್ತಿಗಳನ್ನು ಮತ್ತೆ ಕೊಡಿಸುವ ಅಧಿಕಾರವನ್ನು ಆಯಾ ಜಿಲ್ಲಾ ಉಪವಿಭಾಗಾಧಿಕಾರಿಗಳಿಗೆ ನೀಡಲಾಗಿದೆ ಎಂದು ಹೇಳಿದರು.

ಹಳೇ ಬೇರು, ಹೊಸ ಚಿಗುರು ಕೂಡಿರಲು ಮರ ಸೊಗಸು ಎನ್ನುವ ಹಾಗೆ ಸಮಾಜದಲ್ಲಿ ಉತ್ತಮ ಪ್ರಜೆಗಳನ್ನು ಸನ್ಮಾರ್ಗದಲ್ಲಿ ನಡೆಸಲು ಹಿರಿಯರ ಮಾರ್ಗದರ್ಶನ ಅತ್ಯವಶ್ಯಕವಾಗಿ ಬೇಕಾಗಿದೆ. ಅವರ ನೆರಳಿನಲ್ಲಿ ನಾವು ಉತ್ತಮ ಜೀವನ ಕಟ್ಟಿಕೊಳ್ಳಲು ಸಾಧ್ಯವಾಗುತ್ತದೆ. ಹಿರಿಯ ನಾಗರೀಕರ ಸಹಾಯಕ್ಕಾಗಿ ಕೇಂದ್ರ ಸರ್ಕಾರದಿಂದ 14567, ರಾಜ್ಯ ಸರ್ಕಾರದಿಂದ 1090 ಸಹಾಯವಾಣಿಯನ್ನು ನೀಡಿದ್ದು, ಇದರಿಂದ ತಮ್ಮ ವೃದ್ಧಾಪ್ಯ ಸಮಸ್ಯೆಗಳಿಗೆ ಪರಿಹಾರ ಪಡೆಯಬಹುದಾಗಿದೆ. ಇತ್ತೀಚಿಗೆ ಕಾನೂನು ಸೇವೆಗಳ ಪ್ರಾಧಿಕಾರದಿಂದ ಉಚಿತ ಕಾನೂನು ಸೇವೆ ಪಡೆಯಲು 15100 ಸಹಾಯವಾಣಿ ತೆರೆಯಲಾಗಿದೆ. ಬಸ್-ರೈಲ್ವೆ ನಿಲ್ದಾಣಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಈ ಉಚಿತ ಸಹಾಯವಾಣಿ ಸಂಖ್ಯೆಯನ್ನು ಪ್ರದರ್ಶಿಸಬೇಕೆಂದು ಸಂಬಂಧಪಟ್ಟ ಅಧಿಕಾರಿಗಳಿಗೆ ನ್ಯಾಯಾಧೀಶರು ಮನವಿ ಮಾಡಿದರು. ರಸ್ತೆ ಬದಿಗಳಲ್ಲಿ, ದೇವಸ್ಥಾನಗಳ ಬಳಿ ನಿರಾಶ್ರಿತ ಹಿರಿಯ ನಾಗರಿಕರು ಕಂಡು ಬಂದರೆ ಕೂಡಲೇ ಕರೆ ಮಾಡಿ ಮಾಹಿತಿ ತಿಳಿಸುವುದು ಸಾಮಾಜಿಕ ಜವಾಬ್ದಾರಿಯಾಗಿದೆ ಎಂದರು. ಪಾಲಸಂದ್ರ ಲೇಔಟ್ ನಿವಾಸಿ ನಾರಾಯಣಸ್ವಾಮಿ ಮಾತನಾಡಿ, ಹಿರಿಯರು ಶ್ರವಣನ ಪಿತೃಭಕ್ತಿ ಕಥೆ ಕೇಳಿರುವ ಮಕ್ಕಳು ಯಾವತ್ತೂ ತಂದೆ ತಾಯಿ ಸೇವೆಯನ್ನು ಮಾಡುತ್ತಾರೆ. ನೆಮ್ಮದಿಯ ಜೀವನಕ್ಕೆ ತಮ್ಮ ಸಮಯವನ್ನು ಯೋಗ, ಜ್ಞಾನ ಹಾಗೂ ಧ್ಯಾನಗಳಲ್ಲಿ ತೊಡಗಿಸಿಕೊಳ್ಳಬೇಕು. ಆರೋಗ್ಯವಂತ ನಡಿಗೆ, ವ್ಯಾಯಾಮ ಹಾಗೂ ಉತ್ತಮ ಕ್ರೀಡೆಗಳು, ಸ್ನೇಹಿತರೊಂದಿಗೆ ಸಂತೋಷ ಕೂಟಗಳು ನೆಮ್ಮದಿಗೆ ದಾರಿಯಾಗುತ್ತವೆ ಎಂದರು. ಶತಾಯಿಶುಗಳಾದ ಗದ್ದೆಕಣ್ಣೂರು ಸಂಗಪ್ಪ, ತಲಗುಂದ ಚೌಡಪ್ಪ ಅವರಿಗೆ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಹಿರಿಯರಿಗೆ ಸನ್ಮಾನಿಸಲಾಯಿತು. ವಿವಿಧ ಕ್ರೀಡೆಗಳಲ್ಲಿ ಭಾಗವಹಿಸಿದ ಹಿರಿಯರಿಗೆ ಪ್ರಶಸ್ತಿ ವಿತರಿಸಲಾಯಿತು. ನಗರಸಭೆ ಅಧ್ಯಕ್ಷರಾದ ಲಕ್ಷ್ಮೀದೇವಮ್ಮ, ಇಲಾಖಾಧಿಕಾರಿ ರಮ್ಯ. ಎಂ., ಹಾಗೂ ಹಿರಿಯ ನಾಗರೀಕರು ಭಾಗವಹಿಸಿದ್ದರು.

# ಕೋಲಾರದಲ್ಲಿ ಸ್ವಚ್ಛತಾ ಕಾರ್ಯಕ್ರಮ

**ಕೋಲಾರ:** ಪರಿಸರವನ್ನು ಉಳಿಸಿ, ಬೆಳೆಸಬೇಕು ಆ ನಿಟ್ಟಿನಲ್ಲಿ ಪ್ರತಿಯೊಬ್ಬರು ಒಂದೊಂದು ಗಿಡ ನೆಡುವ ಮೂಲಕ ಪರಿಸರ ಬೆಳವಣಿಗೆಗೆ ಸಹಕರಿಸಬೇಕೆಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಮಂಜುನಾಥ ಜಿ.ಎ ತಿಳಿಸಿದರು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ನ್ಯಾಯಾಂಗ ಇಲಾಖೆ, ವಕೀಲರ ಸಂಘ ಹಾಗೂ ನಗರಸಭೆ ಕೋಲಾರ ಇವರ ಸಂಯುಕ್ತಾಶ್ರಯದಲ್ಲಿ ಸ್ವಚ್ಚತಾ ಹೇ ಸೇವಾ ಅಂಗವಾಗಿ ಸ್ವಚ್ಛತಾ ಕಾರ್ಯಕ್ರಮವನ್ನು ಜಿಲ್ಲಾ ನ್ಯಾಯಾಲಯ ಆವರಣದಲ್ಲಿ ಹಮ್ಮಿಕೊಳ್ಳಲಾಯಿತು. ಅಕ್ಟೋಬರ್ 02 ರಂದು ಮಹಾತ್ಮ ಗಾಂಧಿಜಯಂತಿ ಪ್ರಯುಕ್ತ, ಸೆಪ್ಟೆಂಬರ್ 14 ರಿಂದ ಅಕ್ಟೋಬರ್ 01, 2024 ನಾವು ಕೆಲಸ ಮಾಡುವ ಸ್ಥಳವನ್ನು ಸ್ವಚ್ಛವಾಗಿ ಇಟ್ಟುಕೊಳ್ಳಬೇಕು ಹಾಗೂ ಪ್ಲಾಸ್ಟಿಕ್ ಬಳಕೆಯನ್ನು ನಿಲ್ಲಿಸಬೇಕು. ಪ್ಲಾಸ್ಟಿಕ್ ಮುಕ್ತ ಕೋಲಾರ ಜಿಲ್ಲೆಯನ್ನಾಗಿ ಮಾಡಲು ಎಲ್ಲರೂ ಪಣತೊಡಬೇಕು ಎಂದರು. 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಬಿ.ಎಸ್. ಜಯಶ್ರೀ, 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ದಿವ್ಯಾ ಪಿ.ಕೆ, ಪೋಕ್ಸೋ ನ್ಯಾಯಾಲಯದ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಪ್ರಸಾದ್.ಕೆ.ಬಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಸುನಿಲ ಎಸ್. ಹೊಸಮನಿ, ಸಿ.ಜೆ.ಎಂ ಮತ್ತು ಹಿರಿಯ ಸಿವಿಲ್ ನ್ಯಾಯಾಧೀಶರಾದ ಶಕುಂತಲ ಎಸ್, ಸಿ.ಜೆ.ಎಂ ಮತ್ತು 1ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರಾದ ಆರ್. ನಟೇಶ್, ಸಿ.ಜೆ.ಎಂ ಮತ್ತು 2ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರಾದ ರೆಹಾನ ಸುಲ್ತಾನ, ಜೆ.ಎಂ.ಎಫ್.ಸಿ ಹಾಗೂ ಪ್ರಧಾನ ಸಿವಿಲ್ ನ್ಯಾಯಾಧೀಶರಾದ ಶ್ರೀನಿವಾಸ ಪಾಟೀಲ್, ಜೆ.ಎಂ.ಎಫ್.ಸಿ ಮತ್ತು 1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರಾದ ಚೇತನ ಅರಿಕಟ್ಟಿ, ಜೆ.ಎಂ.ಎಫ್.ಸಿ ಹಾಗೂ 3ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರಾದ ಹರ್ಷ.ಜಿ ಇದ್ದರು.

# ಕ್ರೀಡೆಯಲ್ಲಿ ಸೋಲು ಗೆಲುವುಗಳಿಗಿಂತ ಭಾಗವಹಿಸುವಿಕೆ ಮುಖ್ಯ; ಗೋಪಾಲಗೌಡ

**ವಿಜಯಪುರ:** ಕ್ರೀಡಾಕೂಟಗಳಲ್ಲಿ ಹೆಚ್ಚು ಹೆಚ್ಚು ಭಾಗವಹಿಸುವುದರಿಂದ ಉನ್ನತ ಮಟ್ಟದ ಸಾಧನೆ ಮಾಡಲು ಸಾಧ್ಯವಾಗುತ್ತದೆ ಎಂದು ಅದಕ್ಕಾಗಿ ಸೋಲು ಗೆಲುವುಗಳ ಬಗ್ಗೆ ಆದ್ಯತೆ ನೀಡದೆ ಭಾಗವಹಿಸುವ ಬಗ್ಗೆ ಹೆಚ್ಚು ಗಮನ ಹರಿಸಬೇಕೆಂದು ಎಸ್‌ಎಲ್‌ವಿ ಇಂಟರ್ನ್ಯಾಷನಲ್ ಶಾಲೆಯ ಸಂಸ್ಥಾಪಕ ಅಧ್ಯಕ್ಷರಾದ ಗೋಪಾಲಗೌಡ ರವರು ತಿಳಿಸಿದರು. ಮಂಗಳವಾರದಂದು ಇಲ್ಲಿನ ಚನ್ನರಾಯಪಟ್ಟಣ ರಸ್ತೆಯಲ್ಲಿರುವ ಎಸ್ ಎಲ್ ವಿ ಇಂಟರ್ನ್ಯಾಷನಲ್ ಶಾಲಾ ಆವರಣದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಶಿಕ್ಷಣ ಇಲಾಖೆ, ಮತ್ತು ಎಸ್ ಎಲ್ ವಿ ಇಂಟರ್ನ್ಯಾಷನಲ್ ಸ್ಕೂಲ್ ಸಹಯೋಗದಲ್ಲಿ ಆಯೋಜಿಸಿದ್ದ 14 ರಿಂದ 17ನೇ ವಯೋಮಾನದ ಬಾಲಕ ಬಾಲಕಿಯರ ಬ್ಯಾಸ್ಕೆಟ್ ಬಾಲ್ ಪಂದ್ಯಾವಳಿ 2024-25ನೇ ಸಾಲಿನ ಕ್ರೀಡಾಕೂಟವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು. ಶಿಕ್ಷಣದೊಂದಿಗೆ ಶಾಲೆಗಳಲ್ಲಿ ಕ್ರೀಡಾ ಕೂಟಗಳಿಗೆ ಹೆಚ್ಚು ಆದ್ಯತೆ ನೀಡುವ ಮೂಲಕ ವಿದ್ಯಾರ್ಥಿಗಳ ಉತ್ತಮ ಭವಿಷ್ಯ ನಿರ್ಮಿಸಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು. ಎಸ್ ಎಲ್ ವಿ ಇಂಟರ್ನ್ಯಾಷನಲ್ ಶಾಲೆಯ ಪ್ರಾಂಶುಪಾಲೆ ಅನುರಾಧ, ಶಾಲಾ ನಿರ್ದೇಶಕರಾದ ದಿಲೀಪ್ ಶರ್ಮ, ಕಾರ್ಯದರ್ಶಿ ರೂಪಾದೇವಿ, ಜಿಲ್ಲಾ ಶಿಕ್ಷಣ ಇಲಾಖೆ ವತಿಯಿಂದ ಆಗಮಿಸಿದ್ದ ತೀರ್ಪುಗಾರರಾದ ಮುನೇಗೌಡ, ದೈಹಿಕ ಶಿಕ್ಷಕರುಗಳಾದ ಹೊಸಕೋಟೆ ರಾಜಕುಮಾರ್, ದೊಡ್ಡಬಳ್ಳಾಪುರದ ಹೇಮಂತ್, ದಯಾನಂದ ಪಾಟೀಲ್, ಸುಮಿತ್ರ, ಮತ್ತಿತರೆ ಶಿಕ್ಷಕ ವೃಂದದವರು ಉಪಸ್ಥಿತರಿದ್ದರು.



# ಆರೋಗ್ಯಕ್ಕೆ ಗಿಡ ಮೂಲಿಕೆಗಳೇ ಔಷಧಿ

**ಕೋಲಾರ:** ಗಿಡ ಮೂಲಿಕೆಗಳ ಮಹತ್ವವನ್ನು ತಿಳಿದುಕೊಳ್ಳುವುದರಿಂದ ದುಶ್ಚಟಗಳಿಂದ ದೂರವಾಗಬಹುದು ಹಾಗೂ ಆರೋಗ್ಯವಂತರಾಗಬಹುದು ಎಂದು ಪಾರಂಪರಿಕ ವೈದ್ಯರು ಮತ್ತು ಜೀವ ವೈವಿಧ್ಯ ನಿರ್ವಹಣಾ ಸಮಿತಿ ಸದಸ್ಯ ಡಾ. ಹರೀಶ್ ಬಾಬು ಅವರು ತಿಳಿಸಿದರು. ಕೋಲಾರ-ಚಿಕ್ಕಬಳ್ಳಾಪುರ ಜಿಲ್ಲಾ ಹಾಲು ಒಕ್ಕೂಟ ನಿಗಮದ ಸಭಾಂಗಣದಲ್ಲಿ ನಂದಿನಿ ಡೈರಿ ಸಿಬ್ಬಂದಿಗೆ ನಡೆದ ಮನೆಮದ್ದು ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು ಬೇವಿನ ಎಲೆ ಮತ್ತು ಸಗಣಿಯನ್ನು ಮಿಶ್ರಣ ಮಾಡಿ ಒಣಗಿಸಿ ಭರಣಿಯನ್ನು ಮಾಡಿಕೊಂಡು, ಅದನ್ನು ಮನೆಯಲ್ಲಿ ಸುಟ್ಟರೆ ಸೊಳ್ಳೆಗಳು ಬರುವುದಿಲ್ಲ, ಗುಲಗಂಜಿಯ ಎಲೆಯ ರಸವನ್ನು ಸೇವಿಸಿದರೆ ಬಾಯಿ ತೊದಲು ಬರುವುದಿಲ್ಲ ಹಾಗೂ ಗಿಡ ಮೂಲಿಕೆಗಳ ಬಗ್ಗೆ ಸವಿಸ್ತಾರವಾಗಿ ಸುಮಾರು 50 ಗಿಡಗಳಕ್ಕಿಂತ ಹೆಚ್ಚು ಗಿಡಗಳ ಬಗ್ಗೆ ಸಂಪೂರ್ಣ ಮಾಹಿತಿಯನ್ನು ಸಿಬ್ಬಂದಿಗಳಿಗೆ ಅರಿವು ಮೂಡಿಸಿದರು. ಕಾರ್ಯಕ್ರಮದಲ್ಲಿ ಆಡಳಿತ ವ್ಯವಸ್ಥಾಪಕ ನಾಗೇಶ್, ಸಾಮಾನ್ಯ ವ್ಯವಸ್ಥಾಪಕ ಶ್ರೀನಿವಾಸಗೌಡ, ಚೈತ್ರ, ನಾರಾಯಣಸ್ವಾಮಿ, ಮಾಧವ್ ಹಾಗೂ ಡೈರಿ ಸಿಬ್ಬಂದಿಗಳು ಹಾಜರಿದ್ದರು.



**ಕೋಲಾರ ಜಿಲ್ಲಾಧಿಕಾರಿ ಅಧ್ಯಕ್ಷತೆಯಲ್ಲಿ ಹಿಂದುಳಿದ ವರ್ಗಗಳ ಹಾಗೂ ಅಲ್ಪಸಂಖ್ಯಾತರ ಇಲಾಖೆಯ ಕಾನೂನು ಪದವೀಧರರ ಶಿಷ್ಯವೇತನಕ್ಕೆ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಕುರಿತು ಆಯ್ಕೆ ಸಮಿತಿ ಸಭೆಯನ್ನು ನಡೆಸಲಾಯಿತು. ಈ ಸಂದರ್ಭದಲ್ಲಿ ಆಯ್ಕೆ ಸಮಿತಿ ಸದಸ್ಯರು ಹಾಗೂ ಕೆ.ಜಿ.ಎಫ್. ಆರಕ್ಷಕ ಅಧೀಕ್ಷಕರು ಹಾಜರಿದ್ದರು.**

# ದೇವರ ಉತ್ಸವ ಮೆರವಣಿಗೆಯಲ್ಲಿ ಕುಸಿದು ಬಿದ್ದು ವ್ಯಕ್ತಿ ಸಾವು

**ಚಾಮರಾಜನಗರ:** ತಾಲೂಕಿನ ಮೂಡ್ನಾಕೂಡು ಗ್ರಾಮದಲ್ಲಿ ದೇವರ ಉತ್ಸವದ ವೇಳೆ ಡಿಜೆಗೆ ಡ್ಯಾನ್ಸ್ ಮಾಡುತ್ತಿದ್ದ ವ್ಯಕ್ತಿ ನೋಡ ನೋಡುತ್ತಲೇ ಕುಸಿದು ಬಿದ್ದು ಮೃತಪಟ್ಟಿರುವ ಘಟನೆ ನಡೆದಿದೆ. ಚಾಮರಾಜನಗರ ತಾಲ್ಲೂಕಿನ ಮೂಡ್ನಾಕೂಡು ಗ್ರಾಮದ ಬಾಬು (42) ಮೃತ ವ್ಯಕ್ತಿ. ಮೂಡ್ನಾಕೂಡು ಗ್ರಾಮದಲ್ಲಿ ಗೌರಿ ವಿಸರ್ಜನೆ ಅಂಗವಾಗಿ ಕಲ್ಯಾಣ ಬಸವೇಶ್ವರ ಉತ್ಸವ ಹಮ್ಮಿಕೊಳ್ಳಲಾಗಿತ್ತು. ದೇವರ ಉತ್ಸವದ ವೇಳೆ ಡಿಜೆಗೆ ಡ್ಯಾನ್ಸ್ ಮಾಡುತ್ತಿದ್ದ ಬಾಬು ನೋಡ ನೋಡುತ್ತಲೇ ಕುಸಿದು ಬಿದ್ದು ಮೃತಪಟ್ಟಿದ್ದು ಡ್ಯಾನ್ಸ್ ಮಾಡುತ್ತಿದ್ದ ವ್ಯಕ್ತಿ ಕುಸಿದು ಬೀಳುವ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

# ಸೆಸ್ ವಂಚನೆ ತಡೆಗೆ ವಿಜಿಲೆನ್ಸ್

## ಚಾಮರಾಜನಗರ ಎಪಿಎಂಸಿಗೆ ಸಚಿವ ಶಿವಾನಂದ ಪಾಟೀಲ ದಿಢೀರ್ ಭೇಟಿ

**ಚಾಮರಾಜನಗರ:** ಜಿಲ್ಲೆಯಿಂದ ಹೊರರಾಜ್ಯಗಳ ಮಾರುಕಟ್ಟೆಗೆ ಎಷ್ಟು ಪ್ರಮಾಣದಲ್ಲಿ ಎಳನೀರು ಮತ್ತು ಬಾಳೆಕಾಯಿ ರವಾನೆಯಾಗುತ್ತದೆ ಎಂಬ ಮಾಹಿತಿ ಸಂಗ್ರಹ ಮಾಡಲು ಹಾಗೂ ಸೆಸ್ ವಂಚನೆ ತಡೆಗೆ ಜಿಲ್ಲೆಗೆ ವಿಚಕ್ಷಣ ದಳ ಕಳುಹಿಸಿ ಎಂದು ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಪಾಟೀಲ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.ಚಾಮರಾಜನಗರ ಎಪಿಎಂಸಿ ಮತ್ತು ಸಂತೆಮರಹಳ್ಳಿ ಉಪ ಮಾರುಕಟ್ಟೆ ಪ್ರಾಂಗಣಕ್ಕೆ ಭಾನುವಾರ (ಸೆ.29)ದಂದು ಅನಿರೀಕ್ಷಿತ ಭೇಟಿ ನೀಡಿ, ಎಪಿಎಂಸಿ ಸದಸ್ಯರು, ರೈತ ಸಂಘದ ಮುಖಂಡರು ಹಾಗು ವರ್ತಕರ ಅಹವಾಲು ಸ್ವೀಕರಿಸಿದ ಸಚಿವರು, ಮಾರ್ಚ್ ತಿಂಗಳಲ್ಲೇ ಎಪಿಎಂಸಿ ಕಾಯ್ದೆ ಮರುಸ್ಥಾಪನೆಯಾಗಿದೆ. ಆದರೆ ಚಾಮರಾಜನಗರ ಎಪಿಎಂಸಿ ನಿರೀಕ್ಷಿತ ಪ್ರಮಾಣದಲ್ಲಿ ಪ್ರಗತಿ ಸಾಧಿಸಿಲ್ಲ. ಮಾರುಕಟ್ಟೆಗೆ ಕೃಷಿ ಉತ್ಪನ್ನಗಳು ಬರುತ್ತಿಲ್ಲ. ಕಾಯ್ದೆ ಮರುಸ್ಥಾಪನೆ ಉದ್ದೇಶ ಅರ್ಥ ಮಾಡಿಕೊಂಡು ಕೆಲಸ ಮಾಡಿ ಎಂದು ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲೆಯಿಂದ ಎಳನೀರು ಮತ್ತು ಬಾಳೆಕಾಯಿ ಗರಿಷ್ಠ ಪ್ರಮಾಣದಲ್ಲಿ ಹೊರರಾಜ್ಯಗಳ ಮಾರುಕಟ್ಟೆಗೆ ಹೋಗುತ್ತಿದೆ ಎಂದು ಸದಸ್ಯರು ಗಮನಕ್ಕೆ ತಂದಿದ್ದಾರೆ. ರೈತರು ಗರಿಷ್ಠ ಪ್ರಮಾಣದಲ್ಲಿ ತಮ್ಮ ಉತ್ಪನ್ನಗಳನ್ನು ಎಪಿಎಂಸಿ ಆವರಣದಲ್ಲೇ ಮಾರಾಟ ಮಾಡುವಂತೆ ನೋಡಿಕೊಳ್ಳಬೇಕು. ರೈತರ ಹಿತದೃಷ್ಟಿಯಿಂದಲೇ ಎಪಿಎಂಸಿ ಕಾಯ್ದೆ ಮರುಸ್ಥಾಪನೆ ಮಾಡಲಾಗಿದೆ. ರೈತರು, ಖರೀದಿದಾರರು ಹಾಗೂ ಹಮಾಲರಿಗೆ ಶೋಷಣೆಯಾಗದಂತೆ ಕಾಯ್ದೆ ಜಾರಿ ಮಾಡಲಾಗಿದೆ ಎಂದು ಹೇಳಿದರು.

ಪ್ರತಿದಿನ ಜಿಲ್ಲೆಯಿಂದ ಸುಮಾರು 40 ಲಾರಿ ಎಳನೀರು ಹಾಗೆಯೇ ಬಾಳೆಕಾಯಿ ಹೊರರಾಜ್ಯಗಳಿಗೆ ಹೋಗುತ್ತಿದೆ ಎಂಬ ಮಾಹಿತಿ ಇದೆ. ಚೆಕ್‌ಪೋಸ್ಟ್‌ಗಳಲ್ಲಿ ತಪಾಸಣೆ ಮಾಡಿದರೆ ಎಪಿಎಂಸಿಗೆ ವಂಚನೆಯಾಗುತ್ತಿರುವ ಸೆಸ್ ಸಂಗ್ರಹ ಮಾಡಬಹುದು. ಬಾಳೆಕಾಯಿ ಸೇರಿದಂತೆ ಎಲ್ಲ ರೀತಿಯ ತೋಟಗಾರಿಕೆ ಉತ್ಪನ್ನ, ತರಕಾರಿ ಖರೀದಿ ಚಟುವಟಿಕೆಗಳು ಎಪಿಎಂಸಿ ಆವರಣದಲ್ಲೇ ನಡೆಯುವಂತೆ ಪ್ರಯತ್ನ ಮಾಡಿ ಎಂದು ಅಧಿಕಾರಿಳಿಗೆ ಸೂಚನೆ ನೀಡಿದರು. ಶಾಸಕರಾದ ಸಿ. ಪುಟ್ಟರಂಗಶೆಟ್ಟಿ,



ಎ.ಆರ್. ಕೃಷ್ಣಮೂರ್ತಿ ಅವರು ಎಪಿಎಂಸಿಯಲ್ಲಿನ ನ್ಯೂನತೆಗಳನ್ನು ಸಚಿವರ ಗಮನಕ್ಕ ತಂದರು. ಎಳನೀರು ಮತ್ತು ಬಾಳೆಕಾಯಿ ಗರಿ?ಠ ಪ್ರಮಾಣದಲ್ಲಿ ಹೊರರಾಜ್ಯಗಳಿಗೆ ಹೋಗುತ್ತಿರುವುದು ನಿಜ. ಈ ಬಗ್ಗೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿ ಎಂದು ಹೇಳಿದರು. ಎಪಿಎಂಸಿಗೆ ಭೇಟಿ ನೀಡಿದ ಸಚಿವರು ಸಾಕಷ್ಟು ಜಾಗ ಇದ್ದರೂ ಸದುಪಯೋಗಮಾಡಿಕೊಳ್ಳುತ್ತಿಲ್ಲವೇಕೆ? ಎಂದು ಪ್ರಶ್ನಿಸಿದರು.

ಸಂತೇಮರಹಳ್ಳಿ ಉಪಪ್ರಾಂಗಣದಲ್ಲಿ ಪ್ರತಿ ಮಂಗಳವಾರ ಸಂತೆ ನಡೆಯುತ್ತಿರುವುದನ್ನು ಬಿಟ್ಟರೆ ಇತರೆ ದಿನಗಳಲ್ಲಿ ಖರೀದಿ ಚಟುವಟಿಕೆಗಳು ಇರುವುದಿಲ್ಲ ಎಂದು ರೈತ ಸಂಘದ ಮುಖಂಡರು ಸಚಿವರ ಗಮನಕ್ಕೆ ತಂದರು. ಗರಿಷ್ಠ ಪ್ರಮಾಣದಲ್ಲಿ ಬೆಲ್ಲ ಮತ್ತು ಎಳನೀರು ಬೇರೆ ಮಾರುಕಟ್ಟೆಗೆ ಹೋಗುತ್ತಿದೆ. ವಾರದಲ್ಲಿ ಮೂರು ದಿನ ಬೆಲ್ಲ ಮತ್ತು ಎಳನೀರು ವಹಿವಾಟಿಗೆ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು. ಸ್ಥಳದಲ್ಲೇ ಇದ್ದ ಅಧಿಕಾರಿಗಳಿಗೆ ನಿರ್ದೇಶನ ನೀಡಿದ ಸಚಿವರಾದ ಶಿವಾನಂದ ಪಾಟೀಲ ಅವರು ಬೆಲ್ಲ ಮತ್ತು ಎಳನೀರು ವಹಿವಾಟು ಆರಂಭಿಸಿ, ಆರಂಭದಲ್ಲಿ ನಿರೀಕ್ಷಿತ ಮಟ್ಟದಲ್ಲಿ ವಹಿವಾಟು ನಡೆಯದಿದ್ದರೂ ಕ್ರಮೇಣ ಸುಧಾರಣೆಯಾಗಲಿದೆ ಎಂದು ಹೇಳಿದರು.

2023-24ನೇ ಸಾಲಿನಲ್ಲಿ 17.44 ಲಕ್ಷ ರೂ. ಮಾರುಕಟ್ಟೆ ಶುಲ್ಕ ಸಂಗ್ರಹವಾಗಿತ್ತು. ಈ ಬಾರಿ ಏಪ್ರಿಲ್‌ನಿಂದ ಇದುವರೆಗೆ 33.49 ಲಕ್ಷ ರೂ. ಸಂಗ್ರಹವಾಗಿದೆ ಎಂದು ಎಪಿಎಂಸಿ ಕಾರ್ಯದರ್ಶಿ ಟಿ.ವಿ. ಪ್ರಕಾಶ್ ಕುಮಾರ್ ಮಾಹಿತಿ ನೀಡಿದರು. ಶಾಸಕರಾದ ಸಿ. ಪುಟ್ಟರಂಗಶೆಟ್ಟಿ, ಎ.ಆರ್. ಕೃಷ್ಣಮೂರ್ತಿ, ಎಪಿಎಂಸಿ ಅಧ್ಯಕ್ಷರಾದ ಎಚ್.ಎನ್. ಮಹದೇವಸ್ವಾಮಿ, ಉಪಾಧ್ಯಕ್ಷರಾದ ರಾಮಚಂದ್ರ, ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷ ಎಚ್.ವಿ. ಚಂದ್ರು, ಚಾಮುಲ್ ನಿರ್ದೇಶಕ ಕಮರವಾಡಿ ರೇವಣ್ಣ ಮತ್ತಿತರರು ಉಪಸ್ಥಿತರಿದ್ದರು.

### 10 ಕೋಟಿ ರೂ. ಅನುದಾನ

**ಸಂತೆಮರಹಳ್ಳಿ ಉಪಮಾರುಕಟ್ಟೆ ಪ್ರಾಂಗಣದ ಅಭಿವೃದ್ಧಿಗೆ ಹತ್ತು ಕೋಟಿ ರೂ. ಅನುದಾನ ಬಿಡುಗಡೆ ಮಾಡಲಾಗುವುದು ಎಂದು ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಪಾಟೀಲ ತಿಳಿಸಿದರು. ಉಪಪ್ರಾಂಗಣದಲ್ಲಿ ಹಲವಾರು ಸಮಸ್ಯೆಗಳಿವೆ. ಕೃಷಿ ಉತ್ಪನ್ನಗಳ ದಾಸ್ತಾನಿಗೆ ಸೌಲಭ್ಯ ಇಲ್ಲ. ಮೂಲಸೌಕರ್ಯದ ಕೊರತೆ ಇದೆ. ಅಭಿವೃದ್ಧಿಗೆ ಅನುದಾನ ಬಿಡುಗಡೆ ಮಾಡಿ ಎಂದು ಶಾಸಕರಾದ ಕೃಷ್ಣಮೂರ್ತಿ ಅವರು ಸದನದಲ್ಲಿ ಮನವಿ ಮಾಡಿದ್ದರು. ಇಂದು ಉಪಮಾರುಕಟ್ಟೆ ಪ್ರಾಂಗಣಕ್ಕೆ ಭೇಟಿ ನೀಡಿ ಪರಿಶೀಲಿಸಿದ್ದು, ರಸ್ತೆ ಅಭಿವೃದ್ಧಿ, ಕುಡಿಯುವ ನೀರು, ವಿದ್ಯುತ್ ದೀಪ ಸೌಲಭ್ಯ, ಗೋದಾಮುಗಳ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲಾಗುವುದು ಎಂದರು. ಪ್ರಾಂಗಣದಲ್ಲಿ ಖಾಲಿ ಇರುವ ಮಳಿಗೆಗಳನ್ನು ತಕ್ಷಣ ಹಂಚಿಕೆ ಮಾಡಿ ಎಂದು ಕಾರ್ಯದರ್ಶಿಗೆ ಸೂಚಿಸಿದರು. ಸಚಿವರಾದ ಶಿವಾನಂದ ಪಾಟೀಲ ಅವರು ಚಾಮರಾಜನಗರ ಎಪಿಎಂಸಿಯಿಂದ ಸಂತೇಮರಹಳ್ಳಿ ಉಪಪ್ರಾಂಗಣಕ್ಕೆ ಭೇಟಿ ನೀಡಲು ತೆರಳುತ್ತಿರುವ ವೇಳೆ ಲಾರಿಗಳಲ್ಲಿ ಹೊರರಾಜ್ಯಗಳಿಗೆ ಎಳನೀರು ಸಾಗಿಸುತ್ತಿರುವುದು ಗಮನಕ್ಕೆ ಬಂತು. ತಕ್ಷಣ ಅಧಿಕಾರಿಗಳಿಗೆ ಕರೆ ಮಾಡಿದ ಸಚಿವರು, ಎಲ್ಲಿಗೆ ಪೂರೈಕೆಯಾಗುತ್ತಿದೆ. ಮಾರುಕಟ್ಟೆ ಶುಲ್ಕ ಪಾವತಿ ಆಗಿದೆಯಾ? ಪರಿಶೀಲಿಸಿ ಮಾಹಿತಿ ಕೊಡಿ ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ಪ್ರತಿದಿನ ಜಿಲ್ಲೆಯಿಂದ ಎ?ಟ್ಟು ಎಳನೀರು ಮತ್ತು ಬಾಳೆಕಾಯಿ ಹೋಗುತ್ತಿದೆ ಎಂಬ ಮಾಹಿತಿಯೂ ಬೇಕು ಎಂದು ಹೇಳಿದರು.**

# ರಂಭಾಪುರಿ ಜಗದ್ಗುರುಗಳವರ ಪ್ರವಾಸ

**ಶ್ರೀರಂಭಾಪುರಿ ಪೀಠ(ಬಾಳೆಹೊನ್ನೂರು):** ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳವರ 2024ನೇ ಸಾಲಿನ ಅಕ್ಟೋಬರ್ ಮಾಹೆಯ ಪ್ರವಾಸ ಕಾರ್ಯಕ್ರಮ ಈ ಕೆಳಗಿನಂತಿದೆ. ಅಕ್ಟೋಬರ್ 3ರಿಂದ 12ರ ವರೆಗೆ ಗದಗ ಜಿಲ್ಲೆ ರೋಣ ತಾಲೂಕ ಅಬ್ಬಿಗೇರಿಯಲ್ಲಿ ತಮ್ಮ 33ನೇ ವರ್ಷದ ದಸರಾ ಧರ್ಮ ಸಮ್ಮೇಳನದ ಸಾನ್ನಿಧ್ಯ ವಹಿಸುವರು. 16ರಂದು ಬಾಳೆಹೊನ್ನೂರು ಶ್ರೀ ಪೀಠದಲ್ಲಿ ವಾಸ್ತವ್ಯ ಇದ್ದು ಭಕ್ತಾಧಿಗಳಿಗೆ ದರ್ಶನಾಶೀರ್ವಾದ ನೀಡುವರು. 24ರಂದು ಚಿಕ್ಕಮಗಳೂರು ಜಿಲ್ಲೆ ಕಡೂರು ತಾಲೂಕ ಮಾವಿನಹಳ್ಳಿಯಲ್ಲಿ ಇಷ್ಟಲಿಂಗ ಪೂಜಾ, 25ರಂದು ಹರಿಹರ ತಾಲೂಕ ಸಾಲಕಟ್ಟೆ ಗ್ರಾಮದಲ್ಲಿ ಇಷ್ಟಲಿಂಗ ಮಹಾಪೂಜಾ ನಡೆಸುವರು. ದಿನಾಂಕ 26ರಂದು ಕುಷ್ಟಗಿ ತಾಲೂಕ ಚಳಗೇರಿ ಹಿರೇಮಠದಲ್ಲಿ ಲಿಂ.ಶ್ರೀ ವಿರೂಪಾಕ್ಷಲಿಂಗ ಶಿವಾಚಾರ್ಯ ಸ್ವಾಮಿಗಳವರ 10ನೇ ವರ್ಷದ ಪುಣ್ಯಾರಾಧನೆ, 30ರಂದು ಭದ್ರಾವತಿ ತಾಲೂಕ ಬಿಳಕಿ ಹಿರೇಮಠದ ಲಿಂಗೈಕ್ಯ ಶ್ರೀಗಳವರ ಪುಣ್ಯಾರಾಧನಾ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸುವರು.

# ಟಿಎಸ್‌ಆರ್, ಮೊಹರೆ ಹಣಮಂತರಾಯ ಪ್ರಶಸ್ತಿ ಪುರಸ್ಕೃತರಿಗೆ ಅ.3ಕ್ಕೆ ಅಭಿನಂದನೆ

**ಬೆಂಗಳೂರು:** ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘ(ಏಗಘಾಎ) ಮತ್ತು ಪ್ರೆಸ್ ಕ್ಲಬ್ ಆ? ಬೆಂಗಳೂರು(ಕಆಃ) ಇವರ ಸಂಯುಕ್ತಾಶ್ರದಲ್ಲಿ ಟಿಎಸ್‌ಆರ್ ಪತ್ರಿಕೋದ್ಯಮ ಪ್ರಶಸ್ತಿ ಮತ್ತು ಮೊಹರೆ ಹಣಮಂತರಾಯ ಪತ್ರಿಕೋದ್ಯಮ ಪ್ರಶಸ್ತಿಗೆ ಭಾಜನರಾಗಿರುವ ಪುರಸ್ಕೃತರಿಗೆ ಚಹಾಕೂಟ ಮತ್ತು ಅಭಿನಂದನಾ ಕಾರ್ಯಕ್ರಮ ಏರ್ಪಡಿಸಲಾಗಿದೆ. ದಿನಾಂಕ 3.10.2024 ರಂದು ಗುರುವಾರ ಬೆಳಿಗ್ಗೆ 11 ಗಂಟೆಗೆ ಬೆಂಗಳೂರು ಪ್ರೆಸ್ ಕ್ಲಬ್ ಸಭಾಂಗಣದಲ್ಲಿ ಅಭಿನಂದನಾ ಕಾರ್ಯಕ್ರಮ ನಡೆಯಲಿದ್ದು, ಟಿಎಸ್‌ಆರ್ ಪತ್ರಿಕೋದ್ಯಮ ಪ್ರಶಸ್ತಿಗೆ ಆಯ್ಕೆಯಾಗಿರುವ ಶಿವಾಜಿ ಎಸ್. ಗಣೇಶನ್, ಶ್ರೀಕಾಂತಾಚಾರ್ಯ.ಆರ್.ಮಣೂರ, ಡಾ.ಆರ್.ಪೂರ್ಣಿಮಾ, ಪದ್ಮರಾಜ ದಂಡಾವತಿ, ಡಾ.ಸರಜೂ ಕಾಟ್ಕರ್, ಮೊಹರೆ ಹಣಮಂತರಾಯ ಪತ್ರಿಕೋದ್ಯಮ ಪ್ರಶಸ್ತಿಗೆ ಆಯ್ಕೆಯಾಗಿರುವ ರಾಜೀವ್ ಕಿದಿಯೂರ, ಇಂದೂಧರ ಹೊನ್ನಾಪುರ, ಎನ್.ಮಂಜುನಾಥ, ಚಂದ್ರಶೇಖರ್ ಪಾಲೆತ್ತಾಡಿ, ಶಿವಲಿಂಗಪ್ಪ ದೊಡ್ಡಮನಿ ಅವರನ್ನು ಗೌರವಿಸಲಾಗುವುದು. ಇದೇ ಸಂದರ್ಭದಲ್ಲಿ ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷರು ಮತ್ತು ಸದಸ್ಯರುಗಳನ್ನು ಸನ್ಮಾನಿಸಲಾಗುವುದು. ವಿಶ್ವವಾಣಿ ಸಂಪಾದಕರಾದ ವಿಶ್ವೇಶ್ವರ ಭಟ್, ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಪ್ರೆಸ್ ಕ್ಲಬ್ ಅಧ್ಯಕ್ಷ ಆರ್.ಶ್ರೀಧರ್, ಪ್ರಧಾನ ಕಾರ್ಯದರ್ಶಿ ಶಿವಕುಮಾರ ಬೆಳ್ಳಿತಟ್ಟೆ ಅವರು ಭಾಗವಹಿಸಲಿದ್ದಾರೆ ಎಂದು ಕೆಯುಡಬ್ಲ್ಯುಜೆ ಪ್ರಧಾನ ಕಾರ್ಯದರ್ಶಿ ಜಿ.ವಿ.ಲೋಕೇಶ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲಾರಿ ಪಲ್ಟಿ ಸವಾರ ಸಾವು

**ಚಾಮರಾಜನಗರ:** ತಾಲ್ಲೂಕಿನ ಇರಸವಾಡಿ ಗ್ರಾಮದ ಚಾಮರಾಜನಗರ ರಸ್ತೆಯಲ್ಲಿ ಕಬ್ಬು ತುಂಬಿದಲಾರಿ ಹಾಗೂ ಬೈಕ್ ನಡುವೆ ರಸ್ತೆ ಅಪಘಾತ ಸಂಭವಿಸಿ ಓರ್ವ ಮೃತಪಟ್ಟಂತಹ ಪ್ರಸಂಗ ಜರುಗಿದೆ.

ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಶಾಗ್ಯ ಗ್ರಾಮದ ರಾಚಚಾರಿ (53 )ಮ್ರತಪಟ್ಟಂಯಹ ದುರ್ದೇವಿಯಾಗಿದ್ದಾನೆ ಕಬ್ಬು ತುಂಬಿಕೊಂಡು ಚಾಮರಾಜನಗರದ ಕಡೆ ತೆರಳುತ್ತಿದ್ದ ಲಾರಿ ಹಾಗೂ ಬೈಕ್ ನಡುವೆ ಈ ಅವಘಡ ಸಂಬಂವಹಿಸಿ ಲಾರಿ ಪಲ್ಟಿಯಾದರೆ ಬೈಕ್ ಚಾಲಕನಿಗೆ ತೀವ್ರ ಪೆಟ್ಟಾಗಿ ಚಾಮರಾಜನಗರ ಜಿಲ್ಲಾಸ್ಪತ್ರೆಗೆ ಚಿಕಿತ್ಸೆಗಾಗಿ ರವಾನೆ ಮಾಡಿದ್ದರೂ ಕೂಡ ಚಿಕಿತ್ಸೆ ಫಲಕಾರಿಯಾಗದೆ ಸಾವನ್ನಪ್ಪಿದ್ದಾನೆ



# ಸ್ವಾವಲಂಬಿ ಸಾರಥಿ ಯೋಜನೆಯಡಿ ಫಲಾನುಭವಿಗಳ ಆಯ್ಕೆ

**ಕೋಲಾರ:** ಮಾನ್ಯ ಜಿಲ್ಲಾಧಿಕಾರಿಗಳು ಹಾಗೂ ಪ್ರಭಾರ ಮಾನ್ಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಶ್ರೀಯುತ ಅಕ್ರಂ ಪಾಷ ರವರ ಅಧ್ಯಕ್ಷತೆಯಲ್ಲಿ 01.10.2024 ರಂದು ಜರುಗಿದ ಆಯ್ಕೆ ಸಮಿತಿಯಲ್ಲಿ ಫಲಾನುಭವಿಗಳನ್ನು ಲಾಟರಿ ಎತ್ತುವ ಮುಖಾಂತರ ನಿಗಧಿತ ಗುರಿಯಂತೆ ಆಯ್ಕೆ ಮಾಡಲಾಯಿತು.

2023-24ನೇ ಸಾಲಿನಲ್ಲಿ ಸ್ವಾವಲಂಬಿ ಸಾರಥಿ ಯೋಜನೆಯಡಿಯಲ್ಲಿ ಬಂದಿರುವ ಅರ್ಜಿಗಳನ್ನು ಪರಿಗಣಿಸಿ ಬಾಕಿ ಉಳಿದಿರುವ ಅರ್ಜಿಗಳಲ್ಲಿ ನಿಗಧಿತ ಗುರಿ ಭೌತಿಕ 20 ಮತ್ತು ಆರ್ಥಿಕ 60.00 ಲಕ್ಷಗಳನ್ನು ನಿಗಧಿಪಡಿಸಿದ್ದು, ಜಿಲ್ಲೆಯ ವಿಧಾನ ಸಭಾ ಕ್ಷೇತ್ರಗಳನ್ನು ಒಳಗೊಂಡಂತೆ ಒಟ್ಟು 23 ಫಲಾನುಭವಿಗಳನ್ನು ಲಾಟರಿ ಎತ್ತುವ ಮುಖಾಂತರ ಆಯ್ಕೆ ಮಾಡಿ ಒಟ್ಟು 60 ಲಕ್ಷ ಆರ್ಥಿಕ ಸೌಲಭ್ಯವನ್ನು ಮಂಜೂರು ಮಾಡಲು ಸಭೆಯಲ್ಲಿ ಅನುಮೋದಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿಯಾದ ಶ್ರೀ ಜಿ ಮುರಳಿ, ಜಿಲ್ಲಾ ವ್ಯವಸ್ಥಾಪಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ(ನಿ)ದ ಶ್ರೀಮತಿ ಶಿರೀನ್ ತಾಜ್ ಮತ್ತು ಇತರೆ ಆಯ್ಕೆ ಸಮಿತಿಯ ಸದಸ್ಯರು ಉಪಸ್ಥಿರಿದರು.

# ರೇಬೀಸ್ ಮುಂಜಾಗ್ರತೆ ವಹಿಸಿ




**ಹುಳಿಯಾರು:** ರೇಬೀಸ್ ಹುಚ್ಚುನಾಯಿ ರೋಗ. ವೈರಾಣುವಿನಿಂದ ಬರುವಂತಹ ರೋಗ, ಯಾವುದೇ ಸಸ್ತನಿಯು ಇದಕ್ಕೆ ತುತ್ತಾಗಬಹುದು ಎಂದು ಹುಳಿಯಾರು ಪ್ರಾಥಮಿಕ ಆರೋಗ್ಯ ಕೇಂದ್ರದ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಸಿ.ವಿ.ವೆಂಕಟರಾಮಯ್ಯ ಹೇಳಿದರು. ಹುಳಿಯಾರು ಪ್ರಾಥಮಿಕ ಆರೋಗ್ಯ ಕೇಂದ್ರದಿಂದ ವಿಶ್ವ ರೇಬಿಸ್ ದಿನ ಆಚರಿಸಿ ಅವರು ಮಾತನಾಡಿದರು. ರೇಬೀಸ್ ನರಮಂಡಲದ ಸೋಂಕಾಗಿದೆ. 1885 ಜುಲೈ 6 ರಂದು ರೇಬೀಸ್ ವಿರುದ್ಧ ಮೊದಲ ಲಸಿಕೆ ಹಾಕಲಾಯಿತು. ಲೂಯಿ ಪಾಶ್ಚರ್ ವಿಧಿವಶರಾದ ದಿನವನ್ನು ವಿಶ್ವ ರೇಬಿಸ್ ದಿನ ಮಾಡಲಾಯಿತು. ನಾಯಿ, ಬೆಕ್ಕು ಕಚ್ಚಿದರೆ ಮೊದಲು ಗಾಯವನ್ನು ತೊಳೆಯುವುದು, ವೈದ್ಯರನ್ನು ಸಂಪರ್ಕಿಸಿ, ಕಚ್ಚಿದಂತಹ ಪ್ರಾಣಿಯನ್ನು 10 ದಿನಗಳವರೆಗೆ ಗಮನಿಸಿ. ಲಸಿಕೆ ನೀಡುವುದರಿಂದ ಸೋಂಕು ತಡೆಯಬಹುದು.ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ಲಸಿಕೆ ದೊರೆಯುತ್ತದೆ ಎಂದರು. ಹುಷಾರಿಲ್ಲದಿರುವುದು, ಊಟ ಮಾಡದಿರುವುದು, ವಿಚಿತ್ರ ನಡವಳಿಕೆ, ಸಿಕ್ಕ ಸಿಕ್ಕ ವಸ್ತುಗಳನ್ನು ಕಚ್ಚುವುದು, ಸುಮ್ಮನೆ ಬೊಗಳುವುದು, ಕೂಗುವುದು, ಲಾಲಾರಸ ಸುರಿಸುತ್ತಿರುವುದು, ನುಂಗಲು ಕಷ್ಟವಾಗುವುದು, ಧ್ವನಿಯಲ್ಲಿ ಬದಲಾವಣೆ, ತೂಕಡಿಕೆ, ಓಡಾಡಲು ಕಷ್ಟಪಡುವುದು ರೇಬಿಸ್ ರೋಗದ ಲಕ್ಷಣವಾಗಿದೆ ಎಂದು ತಿಳಿಸಿದರು.



**ವಿಜಯಪುರ ಪಟ್ಟಣದ ಶ್ರೀ ಸೌಮ್ಯಕೇಶವ ಸ್ವಾಮಿ ದೇವಾಲಯದಲ್ಲಿ ಸಂಸದ ಬಿ ಎನ್ ಬಚ್ಚೇಗೌಡರವರ 84ನೇ ಹುಟ್ಟುಹಬ್ಬದ ಆಚರಣೆ ಸಂಧರ್ಭದಲ್ಲಿ ದೊಡ್ಡ ತತ್ತಮಂಗಲ ನಾರಾಯಣಸ್ವಾಮಿ,ಮತ್ತಿತರರು ಅಭಿನಂದಿಸುತ್ತಿರುವರು. ಈ ಸಂದರ್ಭದಲ್ಲಿ ಬಚ್ಚೇಗೌಡರ ಪತ್ನಿ ಉಮಾ ಬಚ್ಚೇಗೌಡ ಹಾಗೂ ಗೋಪಾಲಗೌಡರು ಮತ್ತಿತರರು ಉಪಸ್ಥಿತರಿದ್ದರು.**

## 24 ಅರ್ಹ ಫಲಾನುಭವಿ ಅಲೆಮಾರಿಗಳಿಗೆ

# ಮನೆ ಮಂಜೂರಾತಿ ಪತ್ರ ವಿತರಣೆ



**ಹುಳಿಯಾರು:** ಹುಳಿಯಾರಿನ 24 ಅರ್ಹ ಫಲಾನುಭವಿ ಅಲೆಮಾರಿಗಳಿಗೆ ಕರ್ನಾಟಕ ಸರ್ಕಾರದ ವಸತಿ ಇಲಾಖೆಯ ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತದ ಯೋಜನೆಯಡಿಯಲ್ಲಿ ಮನೆ ಮಂಜೂರಾತಿ ಮತ್ತು ಕಾಮಗಾರಿ ಪತ್ರ ನಮೂನೆ- 2 ನ್ನು ಶಾಸಕರಾದ ಸಿ.ಬಿ.ಸುರೇಶ್ ಬಾಬು ವಿತರಿಸಿದರು.

ಹುಳಿಯಾರು ಕೆರೆ ದಡದಲ್ಲಿ ಇವರೆಲ್ಲರೂ ವಾಸವಾಗಿದ್ದು ಹುಳಿಯಾರು ಕೆರೆ ತುಂಬಿದ ಬಳಿಕ ಮಳೆಗಳು ಜಲಾವೃತವಾಗಿ ಬೀದಿಗೆ ಬಿದ್ದಿದ್ದರು. ಇವರಿಗೆ ಹೋಬಳಿ ಕೆಂಕೆರೆ ಗ್ರಾಮ ಪಂಚಾಯತಿ ವ್ಯಾಪ್ತಿಯ ಕಂಪನಹಳ್ಳಿ ಬಳಿ ನಿವೇಶನ ನೀಡಲಾಗಿತ್ತು. ಅಲ್ಲಿ ಶೆಡ್ ಹಾಕಿಕೊಂಡು ಅಲೆಮಾರಿಗಳು ವಾಸಿಸುತ್ತಿದ್ದರಾದರೂ ಮಂಜೂರಾತಿ ಪತ್ರ ನೀಡಿರಲಿಲ್ಲ. ಹಾಗಾಗಿ ಮಂಜೂರಾತಿ ಪತ್ರದ ಜೊತೆಗೆ ಮನೆಗಳನ್ನು ನಿರ್ಮಿಸಿ ಕೊಡುವಂತೆ ಅನೇಕ ಹೋರಾಟ ಸಹ ಮಾಡಿದ್ದರು.

ಈಗ ಇಲ್ಲಿನ ವಸತಿ ಪ್ರದೇಶದಲ್ಲಿ ಎಸ್‌ಸಿ-ಎಸ್‌ಟಿ ಅಲೆಮಾರಿ ಸಮುದಾಯದವರಿಗೆ ಹಂಚಲಾಗಿದ್ದ ನಿವೇಶನಗಳಲ್ಲಿ ಆಗಿರುವ ಮನೆ-ಮಂಜೂರಾತಿ ಹಾಗೂ ಕಾಮಗಾರಿ ಪತ್ರದ ನಮೂನೆ-2 ನ್ನು ತಾಲ್ಲೂಕು ಪಂಚಾಯತ್ ಹಾಗೂ ಕೆಂಕೆರೆ ಗ್ರಾಮ ಪಂಚಾಯತಿ ವತಿಯಿಂದ ಶಾಸಕರ ಮೂಲಕ ಹಕ್ಕುದಾರ ಅಲೆಮಾರಿಗಳಿಗೆ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಉಪಸ್ಥಿತರಿದ್ದ ಅಲೆಮಾರಿ ಬುಡಕಟ್ಟು ಮಹಾಸಭಾದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹಂದಿಜೋಗಿ ರಾಜಣ್ಣ, ಹಳ್ಳಳ್ಳಿ ತಿರುಗಿ ಹೇರ್ ಪಿನ್ನು, ಪ್ಲಾಸ್ಟಿಕ್ ಸಾಮಗ್ರಿ, ಮಕ್ಕಳಾಟಿಕೆ ಮಾರಿಕೊಂಡು ಹೊಟ್ಟೆ ಹೊರೆಯುತ್ತಿದ್ದ ಅಲೆಮಾರಿಗಳು, ಈ ಆನ್'ಲೈನ್ ಶಾಪಿಂಗು ಮತ್ತು ಹೋಮ್ ಡೆಲಿವರಿ ಆಧುನಿಕ ಕಾಲದ ಜೊತೆ ಏಗಲಾಗದೆ ನಿರುದ್ಯೋಗಿಗಳಾಗಿ ನಾಶವಾಗುತ್ತಿರುವುದನ್ನು ಶಾಸಕರ ಬಳಿ ತೋಡಿಕೊಂಡರು.

ಇದಕ್ಕೆ ಪ್ರತಿಕ್ರಿಯಿಸಿದ ಶಾಸಕ ಸಿ.ಬಿ.ಸುರೇಶ್ ಬಾಬು'ರವರು, ಅಲೆಮಾರಿಗಳ ಉದ್ಯೋಗ ಹಾಗೂ ಜೀವನೋಪಾಯಕ್ಕೆ ಸಂಬಂಧಿಸಿದಂತೆ ವಿವರವಾಗಿ ಚರ್ಚಿಸಿ, ಶೀಘ್ರವೇ ಪರಿಹಾರೋಪಾಯಗಳನ್ನು ಕಂಡುಕೊಳ್ಳೋಣ ಎಂದು ಭರವಸೆ ನೀಡಿದರು.

ತಾಲ್ಲೂಕು ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿ ಡಿ.ದೊಡ್ಡಸಿದ್ಧಯ್ಯನವರು ಪ್ರತಿಕ್ರಿಯಿಸಿ, ತಾಲ್ಲೂಕು ಯೋಜನಾಧಿಕಾರಿಗಳ ಜೊತೆ ಕೂಡಲೇ ಚರ್ಚಿಸಿ, ಅಲೆಮಾರಿ ಸಮುದಾಯದವರಿಗೆ ಕೌಶಲ್ಯ ತರಬೇತಿ, ಸ್ವಸಹಾಯ ಗುಂಪು ಮತ್ತು ನಿರ್ದಿಷ್ಟವಾದ ಯಾವುದಾದರೂ ಒಂದು ಉತ್ಪಾದಕ ಸಾಮಗ್ರಿ, ಕೌಶಲ್ಯಾಧಾರಿತ ಕಸುಬುದಾರಿಕೆಯ ತರಬೇತಿ ಕಾರ್ಯಾಗಾರಗಳಿಗೆ ಒತ್ತು ಕೊಡುವ ಯೋಜನೆಯನ್ನು ಶೀಘ್ರವೇ ರೂಪಿಸಲು ಸೂಚಿಸಿದರು.

ಈ ಸಂದರ್ಭದಲ್ಲಿ ತಹಸೀಲ್ದಾರ್ ಕೆ ಪುರಂದರ್, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಡಾ.ಡಿ.ದೊಡ್ಡಸಿದ್ಧಯ್ಯ, ಕೆಂಕೆರೆ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ತಿಪ್ಪೇಸ್ವಾಮಿ ಸೇರಿದಂತೆ ಮನೆ ಮಂಜೂರಾತಿ ಪತ್ರ ಪಡೆದ ಅಲೆಮಾರಿ ಸಮುದಾಯದ ಮಹಿಳೆಯರು ಉಪಸ್ಥಿತರಿದ್ದರು.

**ಜಿಲ್ಲಾ ಪಂಚಾಯತ್ ಕೋಲಾರ**

**ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ**

ಕಾರ್ಯಪಾಲಕ ಅಭಿಯಂತರರವರ ಕಛೇರಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕೋಲಾರ-563101. ದೂರವಾಣಿ ಸಂಖ್ಯೆ: 08152-222570, ಇ-ಮೇಲ್ ವಿಳಾಸ: eepredkolar1@gmail.com

**ಅಲ್ಪಾವಧಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಟೆಂಡರ್ ಪ್ರಕಟಣೆ ಸಂಖ್ಯೆ:06/2024-25 ದಿ: 30.09.2024**

**ಸ್ಟ್ಯಾಂಡರ್ಡ್ ಟೆಂಡರ್ ಡಾಕ್ಯೂಮೆಂಟ್ KW-I & KW II ರ ನಿಬಂಧನೆಗೊಳಪಟ್ಟಂತೆ ಟೆಂಡರ್‌ಗಳಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.**

ಕರ್ನಾಟಕ ರಾಜ್ಯದ ರಾಜ್ಯಪಾಲರ ಪರವಾಗಿ ಕರ್ನಾಟಕ ಪಾರದರ್ಶಕತೆ ಅಧಿನಿಯಮ 2000ರ ಪ್ರಕಾರ ಐಟಂವಾರು ಕೆ.ಪಿ.ಪಿ ಏಕ-ಲಕೋಟೆ ಪದ್ಧತಿಯಲ್ಲಿ (Single Cover System) ಸೂಕ್ತ ದರ್ಜೆಯಲ್ಲಿ, ಲೋಕೋಪಯೋಗಿ ಇಲಾಖೆಯಲ್ಲಿ ನೊಂದಾಯಿಸಿರುವ ಅಧಿಕೃತ ಗುತ್ತಿಗೆದಾರರಿಂದ ಕೋಲಾರ ಜಿಲ್ಲೆ ಕೋಲಾರ, ಮಾಲೂರು, ಬಂಗಾರಪೇಟೆ, ಕೆಜಿಎಫ್ ಮತ್ತು ಶ್ರೀನಿವಾಸಪುರ ತಾಲ್ಲೂಕುಗಳಿಗೆ ಸಂಬಂಧಪಟ್ಟಂತೆ ಒಟ್ಟು **14 ಸಂಖ್ಯೆ** ಕಾಮಗಾರಿಗಳಿಗೆ ಟೆಂಡರುಗಳನ್ನು ಆಹ್ವಾನಿಸುತ್ತಿದ್ದು, ಟೆಂಡರ್‌ಗಿಟ್ಟ ಮೊತ್ತ ಸರಾಸರಿ: ರೂ. 4.45 ರಿಂದ 50.00 ಲಕ್ಷಗಳು ಆಗಿರುತ್ತದೆ. (ಪರಿಶಿಷ್ಟ ಜಾತಿ ಗುತ್ತಿಗೆದಾರರಿಗೆ 05 ಸಂಖ್ಯೆ, ಪರಿಶಿಷ್ಟ ಪಂಗಡ ಗುತ್ತಿಗೆದಾರರಿಗೆ 01 ಕಾಮಗಾರಿ & ಸಾಮಾನ್ಯ ಗುತ್ತಿಗೆದಾರರಿಗೆ 08 ಸಂಖ್ಯೆ ಕಾಮಗಾರಿಗಳು) ಹಾಗೂ ಇ.ಎಂ.ಡಿ ಮತ್ತು ಕಾಮಗಾರಿ ಪೂರ್ಣಗೊಳಿಸುವ ಕಾಲಾವಧಿ ಮುಂತಾದ ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಸರ್ಕಾರದ ಅಧಿಕೃತ ವೆಬ್‌ಸೈಟ್ **https://kppp.karnataka.gov.in** ಮುಖಾಂತರ ಪಡೆದು ಟೆಂಡರ್‌ಗಳಲ್ಲಿ ಭಾಗವಹಿಸಲು ಕೋರಲಾಗಿದೆ. ಕೆ.ಪಿ.ಪಿ.ಪೋರ್ಟಾಲ್ ಮುಖಾಂತರ ಟೆಂಡರ್ ಅರ್ಜಿ ಸಲ್ಲಿಸುವ ಹಾಗೂ ಷೆಡ್ಯೂಲ್-ಬಿಗಳನ್ನು ವೆಬ್‌ಸೈಟ್‌ನಲ್ಲಿ ಭರ್ತಿ ಮಾಡಿ ಆರೋಹಿಸಿ ಸಲ್ಲಿಸಲು **ಕೊನೆಯ ದಿನಾಂಕ: 16.10.2024ರ ಸಂಜೆ: 4:00 ಗಂಟೆವರೆಗೆ.** **(2)** ಟೆಂಡರ್‌ಗಳನ್ನು ಕೆ.ಪಿ.ಪಿ.ಪೋರ್ಟಾಲ್‌ನಲ್ಲಿ ತೆರೆಯುವ **ದಿನಾಂಕ: 18.10.2024 ರಂದು ಬೆಳಿಗ್ಗೆ: 11:30** ಗಂಟೆಗೆಂದು ನಿಗದಿಪಡಿಸಲಾಗಿದೆ. ಸದರಿ ಟೆಂಡರ್ ಅಧಿಸೂಚನೆಯ ವಿವರಗಳನ್ನು ಪಡೆಯಲು ಈ ವಿಭಾಗ ಕಛೇರಿಯ ಕೆಲಸದ ದಿನಗಳಂದು ಕೆಲಸದ ವೇಳೆಯಲ್ಲಿ ಸಂಪರ್ಕಿಸಲು ಕೋರಲಾಗಿದೆ. ಟೆಂಡರ್ ಡೌನ್‌ಲೋಡ್ ಮತ್ತು ಅಪ್‌ಲೋಡ್‌ಗೆ ಸಂಬಂಧಿಸಿದಂತೆ ಕೆ.ಪಿ.ಪಿ **ಸಹಾಯವಾಣಿ ದೂರವಾಣಿ ಸಂಖ್ಯೆ: +91-8046010000, +91-8068948777** ಅನ್ನು ಸಂಪರ್ಕಿಸಲು ಕೋರಲಾಗಿದೆ.

**ಸಹಿ/- ಕಾರ್ಯಪಾಲಕ ಅಭಿಯಂತರರು,**
**ಪಂ.ರಾ.ಇಂ. ವಿಭಾಗ, ಕೋಲಾರ**

ವಾಸಾಸಂಇ/ಕೋಲಾರ/ಆರ್.ಓ.ಸಂಖ್ಯೆ:264/ಕೆಎಸ್‌ಎಂಸಿಎ/2024-25

# ಸಂಜೆ ಟಿಪ್ಸ್

## ನೋಕಿಯಾ ನೆಟ್‌ಗಾರ್ಡ್ ಎಂಡಾಯಿಂಟ್ ಡಿಟೆಕ್ಷನ್

ಭಾರತದ ಅತಿದೊಡ್ಡ ದೂರಸಂಪರ್ಕ ಸೇವಾ ಸಂಸ್ಥೆಗಳಲ್ಲಿ ಒಂದಾಗಿರುವ ವೊಡಾಫೋನ್ ಐಡಿಯಾ, ತನ್ನ ಗ್ರಾಹಕರ ಮತ್ತು ಉದ್ಯಮ ಗ್ರಾಹಕರಿಗೆ ಹೆಚ್ಚುತ್ತಿರುವ ಸೈಬರ್ ಬೆದರಿಕೆಗಳು ಮತ್ತು ಭದ್ರತಾ ಲೋಪಗಳ ವಿರುದ್ಧ ಸಂಪರ್ಕಜಾಲ ಸುರಕ್ಷತೆಯನ್ನು ಬಲಪಡಿಸಲು ನೋಕಿಯಾ ನೆಟ್ಗಾರ್ಡ್ ಎಂಡ್ಪಾಯಿಂಟ್ ಡಿಟೆಕ್ಷನ್ ಮತ್ತು ರೆಸ್ಪಾನ್ಸ್ (ಇಡಿಆರ್) ಸೌಲಭ್ಯ ಅಳವಡಿಸಿಕೊಂಡಿದೆ. ನೆಟ್ಗಾರ್ಡ್ ಇಡಿಆರ್, ದೂರಸಂಪರ್ಕ ಸೌಲಭ್ಯದ ನಿರ್ದಿಷ್ಟ ಬೆದರಿಕೆಯನ್ನು ಪತ್ತೆಹಚ್ಚುವ ಸೌಲಭ್ಯವಾಗಿದ್ದು, ವೊಡಾಫೋನ್ ಐಡಿಯಾಗೆ ಎಂಡ್ ಪಾಯಿಂಟ್ಗೆ ಸಂಬಂಧಿಸಿದ ಸುರಕ್ಷತಾ ದೋಷಗಳನ್ನು ನೈಜ-ಸಮಯದಲ್ಲಿ ಸ್ವಯಂಚಾಲಿತ ಮೇಲ್ವಿಚಾರಣೆ ನೆರವಿನಿಂದ ತ್ವರಿತವಾಗಿ ಪತ್ತೆಹಚ್ಚಲು ಮತ್ತು ದೋಷಗಳ ತೀವ್ರತೆ ತಗ್ಗಿಸಲು ಅವಕಾಶ ನೀಡಲಿದೆ. ಇದು ಸಂಪೂರ್ಣ ಕಾರ್ಯನಿರ್ವಹಣಾ ತಂತ್ರಜ್ಞಾನ (ಒಟಿ) ಸಂಪರ್ಕಜಾಲದಲ್ಲಿ ನಿರಂತರ ಸೇವಾ ಲಭ್ಯತೆ ಮತ್ತು ಸಂರಕ್ಷಿತ ಎಂಡ್ಪಾಯಿಂಟ್ಗಳ ಕಾರ್ಯಕ್ಷಮತೆಯನ್ನು ಕಾಪಾಡಿಕೊಳ್ಳುವಾಗ ಭದ್ರತಾ ಲೋಪ ಹಾಗೂ ವ್ಯಾಪಕವಾದ ಪರೀಕ್ಷೆಯ ಅಗತ್ಯವನ್ನು ಕಡಿಮೆ ಮಾಡುತ್ತದೆ ಮತ್ತು ಕಾರ್ಯಾಚರಣೆಯ ವೆಚ್ಚಗಳನ್ನು ಕಡಿಮೆಗೊಳಿಸುತ್ತದೆ. ನೆಟ್ಗಾರ್ಡ್ ಇಡಿಆರ್-ನ ಸಾಮರ್ಥ್ಯಗಳು ವೊಡಾಫೋನ್ ಐಡಿಯಾ ದ ಅಸ್ತಿತ್ವದಲ್ಲಿರುವ ಭದ್ರತಾ ಪರಿಕರಗಳು ಮತ್ತು ಪ್ರಕ್ರಿಯೆಗಳೊಂದಿಗೆ ಪರಿಪೂರ್ಣವಾಗಿ ಹೊಂದಿಕೊಳ್ಳುತ್ತವೆ. ದೂರಸಂಪರ್ಕ ಸೇವಾಸಂಸ್ಥೆಯ ಸಂಪರ್ಕಜಾಲದ ಭದ್ರತೆಯನ್ನು ಬಲಪಡಿಸುತ್ತವೆ. ಅತ್ಯಾಧುನಿಕ ಸುರಕ್ಷತಾ ಕಾರ್ಯಾಚರಣೆ ಕೇಂದ್ರವನ್ನು ನಿರ್ಮಿಸುವ ವೊಡಾಫೋನ್ ಐಡಿಯಾ-ದ ಕೆಲಸವನ್ನು ಮತ್ತಷ್ಟು ಹೆಚ್ಚಿಸುತ್ತದೆ. ನೆಟ್ಗಾರ್ಡ್ ಇಡಿಆರ್ ಅಳವಡಿಕೆಯ ಆರಂಭದಲ್ಲಿ ವೊಡಾಫೋನ್ ಐಡಿಯಾದ 4ಜಿ ಸಂಪರ್ಕಜಾಲವನ್ನು ಮತ್ತು ಅಂತಿಮವಾಗಿ ಸೇವಾಸಂಸ್ಥೆಯ 5ಜಿ ಸಂಪರ್ಕಜಾಲವನ್ನು ಒಳಗೊಂಡಿದೆ. ವೊಡಾಫೋನ್ ಐಡಿಯಾದ ಮುಖ್ಯ ತಂತ್ರಜ್ಞಾನ ಅಧಿಕಾರಿ (ಸಿಟಿಒ) ಜಗ್ಬೀರ್ ಸಿಂಗ್ ಅವರು ಮಾತನಾಡಿ, ''ನಮ್ಮ ಸುಧಾರಿತ ಪರಿಹಾರಗಳು ಸರಿಸಾಟಿಯಿಲ್ಲದ ಸಂಪರ್ಕ ಮತ್ತು ಸುರಕ್ಷತೆ ಎರಡನ್ನೂ ಒದಗಿಸುವುದನ್ನು ಖಚಿತಪಡಿಸಿಕೊಳ್ಳುವ ಮುಂದಿನ ಹಂತದ ಸಂಪರ್ಕಜಾಲ ಅಳವಡಿಕೆಗೆ ಚಾಲನೆ ನೀಡುವುದಕ್ಕೆ ವೊಡಾಫೋನ್ ಐಡಿಯಾ ಸಂಪೂರ್ಣವಾಗಿ ಬದ್ಧವಾಗಿದೆ. ನೋಕಿಯಾ ಜೊತೆಗೆ ನಾವು ಈ ಪಯಣ ಕೈಗೊಳ್ಳುವಾಗ, ಡಿಜಿಟಲ್ ಬದಲಾವಣೆಯ ಹೆಚ್ಚಿದ ಸುರಕ್ಷತಾ ಅಪಾಯಗಳು ಸೇರಿದಂತೆ ನಿರಂತರವಾಗಿ ಬೆಳೆಯುತ್ತಿರುವ ಬೇಡಿಕೆಗಳನ್ನು ಬೆಂಬಲಿಸುವ ಸಾಮರ್ಥ್ಯವಿರುವ ಸಂಪರ್ಕಜಾಲಗಳನ್ನು ನಿರ್ಮಿಸುವುದರತ್ತ ನಾವು ಗಮನಹರಿಸಿದ್ದೇವೆ ಎಂದು ಹೇಳಿದ್ದಾರೆ.

## ಬ್ರೊಕೋಲಿ ಪಲಾವ್

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಮೊದಲಿಗೆ ಕುಕ್ಕರ್'ಗೆ ಒಂದು ಚಮಚ ತುಪ್ಪವನ್ನು ಹಾಕಿ, ಅದಕ್ಕೆ ಜೀರಿಗೆ, ಚಕ್ಕೆ, ಲವಂಗ, ಶುಂಠಿ, ಬೆಳ್ಳುಳ್ಳಿ ಪೇಸ್ಟ್, ಪಲಾವ್ ಎಲೆ, ಎಲಕ್ಕಿ ಹಾಕಿ ಚೆನ್ನಾಗಿ ಹುರಿದುಕೊಳ್ಳಬೇಕು.ನಂತರ ಈರುಳ್ಳಿ ಹಾಕಿ ಚೆನ್ನಾಗಿ ಕೆಂಪಗೆ ಹುರಿದುಕೊಂಡ ಬಳಿಕ ಖಾರದ ಪುಡಿ, ದನಿಯಾ ಪುಡಿ ಉಪ್ಪು, ಬಟಾಣಿ, ಬ್ರೊಕೋಲಿ ಹಾಕಿ ಚೆನ್ನಾಗಿ ಹುರಿದುಕೊಳ್ಳಬೇಕು. ನಂತರ ನೆನೆಸಿದ ಅಕ್ಕಿ, 2 ಬಟ್ಟಲು ನೀರು ಹಾಗೂ ನಿಂಬೆ ಹಣ್ಣಿನ ರಸವನ್ನು ಹಾಕಿ 3 ಕೂಗು ಕೂಗಿಸಿಕೊಂಡರೆ ರುಚಿಕರವಾದ ಬಟಾಣಿ, ಬ್ರೊಕೋಲಿ ಪಲಾವ್ ಸವಿಯಲು ಸಿದ್ಧ.

### ಮಾಡುವ ವಿಧಾನ

ತುಪ್ಪ- 1 ಚಮಚ, ಜೀರಿಗೆ - 1 ಚಮಚ, ಚಕ್ಕೆ, ಲವಂಗ- ಸ್ವಲ್ಪ, ಶುಂಠಿ, ಬೆಳ್ಳುಳ್ಳಿ ಪೇಸ್ಟ್- ಅರ್ಧ ಚಮಚ, ಅಚ್ಚ ಖಾರದ ಪುಡಿ- 1 ಚಮಚ, ದನಿಯಾ ಪುಡಿ- ಅರ್ಧ ಚಮಚ, ಪಲಾವ್ ಎಲೆ - 2-3, ಎಲಕ್ಕಿ- 2, ಬಟಾಣಿ - ಒಂದು ಚಿಕ್ಕ ಬಟ್ಟಲು , ಬ್ರೊಕೋಲಿ- ಸಣ್ಣದಾಗಿ ಕತ್ತರಿಸಿಕೊಂಡಿದ್ದು 1 ಚಿಕ್ಕ ಬಟ್ಟಲು, ಉಪ್ಪು- ರುಚಿಗೆ ತಕ್ಕಷ್ಟು, ಕೊತ್ತಂಬರಿ ಸೊಪ್ಪು- ಸಣ್ಣಗೆ ಹೆಚ್ಚಿದ್ದು ಸ್ವಲ್ಪ, ಅಕ್ಕಿ- ನೆನೆಸಿದ್ದು 1 ಬಟ್ಟಲು, ನಿಂಬೆಹಣ್ಣಿನ ರಸ - 1 ಚಮಚ

## ಚಳಿಗಾಲದಲ್ಲಿ ಕಾಡುವ ಶೀತ, ಜ್ವರಕ್ಕೆ ಮನೆಮದ್ದು



### ಹೆಲ್ತ್ ಟಿಪ್ಸ್

ಋತು ಬದಲಾದಂತೆ ಶೀತ ಮತ್ತು ಜ್ವರದಂತ ಅನಾರೋಗ್ಯಕ್ಕೆ ತುತ್ತಾಗುವುದು ಸಾಮಾನ್ಯ. ಈ ಅನಾರೋಗ್ಯ ಸಮಸ್ಯೆಗಳಿಂದ ಹೊರಬರಲು ಕೆಲವು ಮನೆಮದ್ದುಗಳನ್ನು ಬಳಸಬಹುದು.

ಮೂಗು ಕಟ್ಟುವುದು, ಪದೇಪದೇ ಸೀನುವುದು ಮತ್ತು ಕೆಮ್ಮುವುದು ಚಳಿಗಾಲದಲ್ಲಿ ಕಾಡುವ ಸಮಸ್ಯೆ. ಕೊರೊನಾ ಪ್ರಕರಣಗಳೂ ಹೆಚ್ಚಾಗ್ತಿರುವ ಕಾರಣ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸುವುದು ಬಹಳ ಮುಖ್ಯ.

ಶೀತ ಅಥವಾ ಜ್ವರದ ಲಕ್ಷಣಗಳು ಕಂಡುಬಂದರೆ ಶುಂಠಿಯ ಸೇವನೆ ಮಾಡಿ. ಶುಂಠಿ ಚಹಾ ಮತ್ತು ಶುಂಠಿ ಹಾಲು ಇಂತಹ ಸಮಸ್ಯೆಗಳಿಗೆ ರಾಮಬಾಣ. ಶುಂಠಿಯನ್ನು ಒಂದು ಕಪ್ ಬಿಸಿ ನೀರು ಅಥವಾ ಹಾಲಿಗೆ ಹಾಕಿ ಚೆನ್ನಾಗಿ ಕುದಿಸಬೇಕು. ಈ ವಿಧಾನ ಶೀತ ಮತ್ತು ಸಾಮಾನ್ಯ ಜ್ವರದಿಂದ ಬೇಗ ಪರಿಹಾರವನ್ನು ನೀಡುತ್ತದೆ.

ಅರಿಶಿನ ಹಾಲು ಶೀತಕ್ಕೆ ಪರಿಹಾರವನ್ನು ನೀಡುವುದಷ್ಟೇ ಅಲ್ಲದೆ, ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ. ಬಿಸಿ ಹಾಲಿಗೆ ಒಂದು ಚಮಚ ಅರಿಶಿನವನ್ನು ಹಾಕಿ ಕುದಿಸಿ ಕುಡಿಯಬೇಕು. ಇದರಿಂದ ಶೀತಕ್ಕೆ ಶೀಘ್ರ ಪರಿಹಾರ ದೊರೆಯುತ್ತದೆ. ಅರಿಶಿನವು ಆಯಂಟಿಬಯೋಟಿಕ್ ಗುಣಗಳನ್ನು ಹೊಂದಿದೆ. ಸೂರ್ಯನ ಬೆಳಕು ದೇಹಕ್ಕೆ ಅಗತ್ಯ. ಸ್ವಲ್ಪ ಸಮಯದವರೆಗೆ ಬಿಸಿಲಿನಲ್ಲಿ ಕುಳಿತುಕೊಳ್ಳಬೇಕು.

ಚಳಿಗಾಲದಲ್ಲಿ ನೀರಿನ ಬಳಕೆ ಹೆಚ್ಚು ಮಾಡಿ. ಚಳಿಗಾಲದಲ್ಲಿ ದೇಹ ಬೆವರುವುದು ಕಡಿಮೆ. ದೇಹದಲ್ಲಿ ನೀರಿನಂಶ ಕಡಿಮೆಯಾಗುತ್ತದೆ. ದೇಹದ ನೀರಿನಂಶ ಸಮತೋಲನದಲ್ಲಿಡಲು ಬಿಸಿ ನೀರು ಅಥವಾ ಬೆಚ್ಚಗಿನ ನೀರನ್ನು ಸಾಧ್ಯವಾದಷ್ಟು ಕುಡಿಯಬೇಕು. ತರಕಾರಿಯ ಬಿಸಿ ಸೂಪ್ ಕೂಡ ಉತ್ತಮ ಮನೆಮದ್ದಾಗಿದೆ. ಗಂಟಲು ಉರಿ ಅಥವಾ ನಾಲಿಗೆ ರುಚಿಸದೆ ಇರುವಾಗ ಬಿಸಿ ಸೂಪ್ ಕುಡಿಯಿರಿ. ಸ್ವಲ್ಪ ಬ್ಲ್ಯಾಕ್ ಪೆಪ್ಪರ್ ಹಾಕಿ ಮಾಡಿದ ಸೂಪ್ ಸೇವಿಸುವುದರಿಂದ ಗಂಟಲು ಉರಿ ಮತ್ತು ಶೀತ ಬಹುಬೇಗ ಕಡಿಮೆ ಆಗುತ್ತದೆ.

## ಡ್ರೈ ಪ್ರೂಟ್ಸ್‌ನಿಂದ ವೃದ್ಧಿಯಾಗುತ್ತೆ ಸೌಂದರ್ಯ

### ಬ್ಯೂಟಿ ಟಿಪ್ಸ್



ಡ್ರೈ ಪ್ರೂಟ್ಸ್ ಗಳು ಆರೋಗ್ಯಕ್ಕೆ ತುಂಬಾ ಉತ್ತಮ ಎಂಬುದು ಎಲ್ಲರಿಗೂ ತಿಳಿದೇ ಇದೆ. ಹಾಗೇ ಇದರಿಂದ ಅಂದವನ್ನು ಕೂಡ ಹೆಚ್ಚಿಸಿಕೊಳ್ಳಬಹುದು. ಹೌದು, ಡ್ರೈ ಪ್ರೂಟ್ಸ್ ಗಳನ್ನು ನಿಯಮಿತವಾಗಿ ಸೇವಿಸಿದರೆ ಅದರಿಂದ ತೂಕ ಕೂಡ ಇಳಿಸಿಕೊಳ್ಳಬಹುದು. ಬಾದಾಮಿಯಲ್ಲಿ ವಿಟಮಿನ್ ಇ ಇರುವ ಕಾರಣ ಚರ್ಮಕ್ಕೆ ಯಾವಾಗಲೂ ತೇವಾಂಶ ನೀಡುವುದು. ಕೆಲವು ಬಾದಾಮಿಯನ್ನು ರಾತ್ರಿ ನೀರಿನಲ್ಲಿ ಹಾಕಿ ನೆನೆಸಿಡಬೇಕು. ಮೊದಲಿಗೆ ಬಾದಾಮಿಯ ಸಿಪ್ಪೆ ತೆಗೆದು, ಬಳಿಕ ಅದನ್ನು ಬಾಳೆಹಣ್ಣಿನ ಜೊತೆಗೆ ಸೇರಿಸಿಕೊಂಡು ರುಬ್ಬಿ ಪೇಸ್ಟ್ ಮಾಡಬೇಕು. 4-5 ನಿಮಿಷ ಕಾಲ ಈ ಮಿಶ್ರಣ ಬಳಸಿಕೊಂಡು ಮುಖಕ್ಕೆ ಸ್ಕಬ್ ಮಾಡಿಕೊಳ್ಳಿ. ಬಳಿಕ ಮುಖವನ್ನು ತಣ್ಣಗಿನ ನೀರಿನಿಂದ ತೊಳೆಯಿರಿ. ಚರ್ಮದ ಸತ್ತಕೋಶವನ್ನು ಇದು ತೆಗೆಯುವುದು ಮತ್ತು ಚರ್ಮದಲ್ಲಿನ ಧೂಳು ಹಾಗೂ ಕಲ್ಮಷ ನಿವಾರಣೆ ಮಾಡಿ ಮುಖಕ್ಕೆ ಕಾಂತಿ ನೀಡುವುದು.

ನಾಲ್ಕು ವಾಲ್ ನಟ್ ನ್ನು ರುಬ್ಬಿಕೊಳ್ಳಿ ಮತ್ತು ಇದಕ್ಕೆ ಒಂದು ಚಮಚ ಜೇನುತುಪ್ಪ ಬೆರೆಸಿಕೊಳ್ಳಿ. ಇದನ್ನು ಸರಿಯಾಗಿ ಮಿಶ್ರಣ ಮಾಡಿಕೊಂಡು ದಪ್ಪಗಿನ ಪೇಸ್ಟ್ ಮಾಡಿ. ಇದನ್ನು ಮುಖಕ್ಕೆ ಮಾಸ್ಕ್ ರೀತಿ ಹಚ್ಚಿಕೊಳ್ಳಿ. 10-15 ನಿಮಿಷ ಕಾಲ ಹಾಗೆ ಬಿಡಿ. ಇದರ ಬಳಿಕ ಫ್ರಿಡ್ಜ್ ನಲ್ಲಿಟ್ಟಿರುವ ನೀರಿನಿಂದ ಮುಖ ತೊಳೆಯಿರಿ. ಇದು ಚರ್ಮದ ಸತ್ತ ಕೋಶಗಳನ್ನು ತೆಗೆದುಹಾಕುವುದು ಮತ್ತು ವಯಸ್ಸಾಗುವಂತಹ ಲಕ್ಷಣಗಳು ಬರದಂತೆ ತಡೆಯುವುದು. ಚರ್ಮದಲ್ಲಿರುವಂತಹ ವಿಷಕಾರಿ ಅಂಶವನ್ನು ತೆಗೆದುಹಾಕಲು ಒಣದ್ರಾಕ್ಷಿಯನ್ನು ನೇರವಾಗಿ ಮುಖಕ್ಕೆ ಹಚ್ಚಿಕೊಳ್ಳಬಹುದು. ಕೆಲವು ಒಣದ್ರಾಕ್ಷಿಯನ್ನು ಪೇಸ್ಟ್ ಮಾಡಿಕೊಂಡು, ಅದಕ್ಕೆ ಸ್ವಲ್ಪ ಹಾಲು ಹಾಕಿ. ಈ ಪೇಸ್ಟ್ ನಿಂದ ಮುಖಕ್ಕೆ ಕೆಲವು ನಿಮಿಷಗಳ ಕಾಲ ವೃತ್ತಾಕಾರದಲ್ಲಿ ಮಸಾಜ್ ಮಾಡಿ ಬಳಿಕ ನೀರಿನಿಂದ ತೊಳೆಯಿರಿ.

## ಕ್ಯಾಂಡಲ್ಲೈಟ್ ಕಾನ್ಸರ್ಟ್ಸ್‌ನ ಸಂಗೀತ



ಲೈವ್ ಮ್ಯೂಸಿಕ್ ಕಾರ್ಯಕ್ರಮ ನೀಡುವ ಮೂಲಕ ವಾತಾವರಣವನ್ನು ಬೆಳಗಿಸುವ, ಸಂಗೀತ ಪ್ರಿಯರನ್ನು ಮೋಡಿಮಾಡುವ ಜಾಗತಿಕ ಮಟ್ಟದ ಪ್ರತಿಷ್ಠಿತ ಕ್ಯಾಂಡಲ್ಲೈಟ್ ಕಾನ್ಸರ್ಟ್ಸ್ ತಂಡವು ಬೆಂಗಳೂರಿನಲ್ಲಿ ಸಂಗೀತ ಕಾರ್ಯಕ್ರ ಆಯೋಜಿಸುವ ಮೂಲಕ ದಕ್ಷಿಣ ಭಾರತಕ್ಕೆ ಆಗಮಿಸಿದೆ. ಕೋಲ್ಡ್ ಪ್ಲೇ ಗೆ ಗೌರವ ಸಮರ್ಪಿಸುವ ಸಲುವಾಗಿ ನಡೆದ ಉದ್ಘಾಟನಾ ಕಾರ್ಯಕ್ರಮವು ಸೆಪ್ಟೆಂಬರ್ 29ರಂದು ಬೆಂಗಳೂರಿನ ಬ್ರಿಗೇಡ್ ಗೇಟ್ ವೇಯಲ್ಲಿರುವ ಪ್ರತಿಷ್ಠಿತ ಶೆರಟನ್ ಗ್ರ್ಯಾಂಡ್ ಹೋಟೆಲ್ ನಲ್ಲಿ ನಡೆಯಿತು. ಈ ಕಾರ್ಯಕ್ರಮವು ಭಾರತದ ಕಾನ್ಸರ್ಟ್ ಸರಣಿಯಲ್ಲಿ ಮಹತ್ವದ ಮೈಲಿಗಲ್ಲಾಗಿದೆ.

ಬೆಂಗಳೂರಿನಲ್ಲಿ ನಡೆದ ಸಂಗೀತ ಕಾರ್ಯಕ್ರಮವು ಅಗಾಧ ಮೆಚ್ಚುಗೆಯನ್ನು ಪಡೆಯಿತು. ಸಂಗೀತ ಪ್ರಿಯರು ಈ ಕಾರ್ಯಕ್ರಮದ ಕುರಿತು ಅತೀವ ಆಸಕ್ತಿಯನ್ನು ತೋರಿದ್ದು ಎಲ್ಲಾ ಶೋಗಳು ಸೋಲ್ಡ್ ಔಟ್ ಆದವು. ಈ ಹಿಂದೆ ಮುಂಬೈ, ದೆಹಲಿ, ಅಹಮದಾಬಾದ್, ಪುಣೆ ಮತ್ತು ಜೈಪುರದಲ್ಲಿ ನಡೆದ ಯಶಸ್ವಿ ಸಂಗೀತ ಕಾರ್ಯಕ್ರಮದ ಬೆನ್ನಲ್ಲಿಯೇ ದಕ್ಷಿಣ ಭಾರತದಲ್ಲಿ ಸಂಗೀತ ಕಾರ್ಯಕ್ರಮ ಆಯೋಜಿಸಲಾಗಿದೆ. ಪ್ರೇಕ್ಷಕರಿಂದ ಸಿಕ್ಕ ಅಭೂತಪೂರ್ವ ಪ್ರತಿಕ್ರಿಯೆಯಿಂದ ಇದು ಭಾಗವಹಿಸಲೇಬೇಕಾದ ಸಂಗೀತ ಕಾರ್ಯಕ್ರಮ ಎಂಬ ಹೆಗ್ಗಳಿಕೆಯನ್ನು ಈ ಕಾನ್ಸರ್ಟ್ ಮತ್ತಷ್ಟು ಬಲಪಡಿಸಿದೆ.

ಈ ಕುರಿತು ಮಾತನಾಡಿದ ಲೀವ್ ಯುವರ್ ಸಿಟಿ ಇಂಡಿಯಾದ ಕಂಟ್ರಿ ಮ್ಯಾನೇಜರ್ ದೀಪಾ ಬಜಾಜ್ ಅವರು, ಬೆಂಗಳೂರಿನಲ್ಲಿ ಕ್ಯಾಂಡಲ್ಲೈಟ್ ಕಾನ್ಸರ್ಟ್ ಗೆ ದೊರೆ ಅಭೂತಪೂರ್ವ ಪ್ರತಿಕ್ರಿಯೆಯಿಂದ ನಾವು ಅಪಾರ ಸಂತೋಷ ಹೊಂದಿದ್ದೇವೆ. ಭಾರತದ ವಿವಿಧ ಭಾಗಗಳ ಸಂಗೀತ ಪ್ರಿಯರಿಗೆ ಸಂಗೀತ ಕಾರ್ಯಕ್ರಮವನ್ನು ಆಯೋಜಿಸುವ ನಮ್ಮ ಉದ್ದೇಶದ ಭಾಗವಾಗಿ ದಕ್ಷಿಣ ಭಾರತದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದ್ದು, ಈ ಯಶಸ್ವಿ ಕಾರ್ಯಕ್ರಮವು ಆ ಪ್ರಯಾಣದ ಆರಂಭವಾಗಿದೆ. ವಿವಿಧ ಭಾಗಗಳ ಪ್ರೇಕ್ಷಕರು ಸಂಗೀತ ಧಾರೆಯಲ್ಲಿ ಮಂತ್ರಮುಗ್ಧರಾಗುವ ಪ್ರಾದೇಶಿಕ ಮತ್ತು ಅಂತಾರಾಷ್ಟ್ರೀಯ ಸಂಗೀತ ಸುಧೆಯನ್ನು ಹರಿಸಲು ನಾವು ಯೋಜನೆಯನ್ನು ರೂಪಿಸಿದ್ದೇವೆ ಎಂದು ಹೇಳಿದರು.

ಮೊದಲ ಸಂಗೀತ ಕಾರ್ಯಕ್ರಮದ ಯಶಸ್ಸಿನ ಬೆನ್ನಲ್ಲಿಯೇ ಕ್ಯಾಂಡಲ್ಲೈಟ್ ಕಾನ್ಸರ್ಟ್ ಬೆಂಗಳೂರಿನಲ್ಲಿ ಬೇರೆ ಬೇರೆ ಸ್ಥಳಗಳಲ್ಲಿ ಸಂಗೀತ ಕಾರ್ಯಕ್ರಮ ನೀಡುವ ಯೋಜನೆ ಹಾಕಿಕೊಂಡಿದೆ. ಅಕ್ಟೋಬರ್ 27ರಂದು ಸರ್ ಎಂ ವಿ ಆಡಿಟೋರಿಯಂನಲ್ಲಿ ಪ್ರೇಕ್ಷಕರಿಗೆ ಮೋಡಿಮಾಡುವ ಸಂಗೀತ ಸಂಜೆ ನಡೆಯಲಿದೆ. ನಂತರ ನವೆಂಬರ್ 9 ರಂದು ಬೆಂಗಳೂರು ಹೆಬ್ಬಾಳದಲ್ಲಿರುವ ಹಯಾತ್ ಸೆಂಟ್ರಿಕ್ ನಲ್ಲಿ ಆಕರ್ಷಕ ಸಂಗೀತ ಪ್ರದರ್ಶನ ನಡೆಯಲಿದೆ. ಈ ಅತ್ಯುತ್ತಮ ಸಂಗೀತ ಕಾರ್ಯಕ್ರಮಗಳನ್ನು ದಿ ಬೀಟಲ್ಸ್, ಮೊಜಾರ್ಟ್, ಚಾಪಿನ್ ಮತ್ತು ಇತ್ಯಾದಿಯವರಿಗೆ ಟ್ರಿಬ್ಯೂಟ್ ನೀಡಲು ಆಯೋಜಿಸಲಾಗಿದೆ ಮತ್ತು ಈ ಭಾಗದ ಸಂಗೀತ ಪ್ರಿಯರಿಗೆ ಅದ್ಭುತವಾದ ಸಂಗೀತ ಅನುಭವವನ್ನು ದೊರಕಿಸಿಕೊಡಲು ನಡೆಸಲಾಗುತ್ತಿದೆ.

ಫೀವರ್ ಲ್ಯಾಬ್ಸ್ ಇಂಕ್ ನ ವಿಭಾಗವಾದ ಲೈವ್ ಯುವರ್ ಸಿಟಿಯಿಂದ ಆಯೋಜಿಸಲ್ಪಟ್ಟಿರುವ ಕ್ಯಾಂಡಲ್ಲೈಟ್ ಕಾನ್ಸರ್ಟ್ ಗಳು ಪ್ರತೀ ನಗರದ ಸಾಂಸ್ಕೃತಿಕ ಪರಂಪರೆಯನ್ನು ಸಾರುವ ಸ್ಥಳಗಳಲ್ಲಿ ಆಯೋಜಿಸಲಾಗಿದ್ದು, ಆ ಮೂಲಕ ಶಾಸ್ತ್ರೀಯ ಸಂಗೀತವನ್ನು ಹೆಚ್ಚು ಜನರು ಆನಂದಿಸುವಂತೆ ಮಾಡುವ ಗುರಿಯನ್ನು ಹೊಂದಿದೆ. ಭಾರತೀಯ ಚಲನಚಿತ್ರ, ಧ್ವನಿಮುದ್ರಿಕೆಗಳಿಗೆ ಗೌರವ ಸಲ್ಲಿಸುವ ಹಾಡುಗಳು, ಮರುರೂಪಿಸಿದ ಜನಪ್ರಿಯ ಪಂಜಾಬಿ ಸಂಗೀತ ಮತ್ತು ಪಾಪ್ ಹಿಟ್ ಹಾಡುಗಳು, ಕೋಲ್ಡ್ ಪ್ಲೇ ಮತ್ತು ದಿ ಬೀಟಲ್ಸ್ ನಂತಹ ಅಂತರಾಷ್ಟ್ರೀಯ ಕಲಾವಿದರಿಗೆ ಗೌರವ ಸಲ್ಲಿಸುವ ಗೀತೆಗಳು ಮತ್ತು ಮೊಜಾರ್ಟ್ ಹಾಗೂ ಚಾಪಿನ್ ಅವರ ಕಾಲಾತೀತ ಶಾಸ್ತ್ರೀಯ ಸಂಗೀತ ಸಂಯೋಜನೆಗಳು ಇತ್ಯಾದಿಗಳನ್ನು ಪ್ರಸ್ತುತ ಪಡಿಸಲಾಗುತ್ತಿದ್ದು, ಈ ಸರಣಿಯಲ್ಲಿ ಸ್ಥಳೀಯ ಕಲಾವಿದರಿಂದ ಹಿಡಿದು ಅಂತಾರಾಷ್ಟ್ರೀಯ ಕಲಾವಿದರವರೆಗೆ ಎಲ್ಲರೂ ವಿವಿಧ ಪ್ರಕಾರದ ಸಂಗೀತ ಕಾರ್ಯಕ್ರಮಗಳನ್ನು ಪ್ರಸ್ತುತ ಪಡಿಸಲಿದ್ದಾರೆ. ಈ ವೈವಿಧ್ಯಮಯ ಸಂಗೀತ ಸಂಗ್ರಹವನ್ನು ವಿಶಾಲವಾದ ಸಂಖ್ಯೆಯ ಪ್ರೇಕ್ಷಕರನ್ನು ಆಕರ್ಷಿಸಲು ವಿನ್ಯಾಸಗೊಳಿಸಲಾಗಿದೆ.

ಬೆಂಗಳೂರಿನಲ್ಲಿ ಯಶಸ್ವಿ ಕಾರ್ಯಕ್ರಮ ಆಯೋಜಿಸುವ ಮೂಲಕ ಕ್ಯಾಂಡಲ್ಲೈಟ್ ಕಾನ್ಸರ್ಟ್ ದಕ್ಷಿಣ ಭಾರತದಲ್ಲಿ ಮತ್ತಷ್ಟು ಸಂಗೀತ ಕಾರ್ಯಕ್ರಮಗಳನ್ನು ಆಯೋಜಿಸಲು ಸಿದ್ದವಾಗಿದೆ,. ಸಂಗೀತ ಪ್ರಿಯರು ಮುಂಬರುವ ದಿನಗಳಲ್ಲಿ ನಡೆಯಲಿರುವ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಮೂಲಕ ಸಂಗೀತ ಸುಧೆಯಲ್ಲಿ ಕಳೆದು ಹೋಗಬಹುದಾಗಿದೆ.

**ಬೆಂಗಳೂರಿನಲ್ಲಿ ಕಾರ್ಯಕ್ರಮಗಳ ಪಟ್ಟಿ:**

**ಕ್ಯಾಂಡಲ್ಲೈಟ್: ಟ್ರಿಬ್ಯೂಟ್ ಟು ದಿ ಬೀಟಲ್ಸ್**
**ಸ್ಥಳ: ಸರ್ ಎಂವಿ ಆಡಿಟೋರಿಯಂ**
**ದಿನಾಂಕ ಮತ್ತು ಸಮಯ: ಅಕ್ಟೋಬರ್ 27 (ಸಮಯ- 17:00)**

**ಕ್ಯಾಂಡಲ್ಲೈಟ್: ಎ ಟ್ರಿಬ್ಯೂಟ್ ಟು ಕೋಲ್ಡ್ ಪ್ಲೇ**
**ಸ್ಥಳ: ಸರ್ ಎಂವಿ ಆಡಿಟೋರಿಯಂ**
**ದಿನಾಂಕ ಮತ್ತು ಸಮಯ: ಅಕ್ಟೋಬರ್ 27 (ಸಮಯ- 19:00 ಮತ್ತು 21:00)**

**ಕ್ಯಾಂಡಲ್ಲೈಟ್: ಬೆಸ್ಟ್ ಮೂವೀ ಸೌಂಡ್ ಟ್ರ್ಯಾಕ್ಸ್**
**ಸ್ಥಳ: ಹಯಾತ್ ಸೆಂಟ್ರಿಕ್ ಬೆಂಗಳೂರು ಹೆಬ್ಬಾಳ**
**ದಿನಾಂಕ ಮತ್ತು ಸಮಯ: ಡಿಸೆಂಬರ್ 9 (ಸಮಯ- 19:00 ಮತ್ತು 21:00)**

**ಕ್ಯಾಂಡಲ್ಲೈಟ್: ಬೆಸ್ಟ್ ಮೂವಿ ಸೌಂಡ್ ಟ್ರ್ಯಾಕ್ಸ್**
**ಸ್ಥಳ: ಸರ್ ಎಂವಿ ಒಗಿ ಆಡಿಟೋರಿಯಂ**
**ದಿನಾಂಕ ಮತ್ತು ಸಮ: ನವೆಂಬರ್ 23 (ಸಮಯ- 21:00)**

**ಕ್ಯಾಂಡಲ್ಲೈಟ್: ಫ್ರಮ್ ಮೊಜಾರ್ಟ್ ಟು ಚಾಪಿನ್**
**ಸ್ಥಳ: ಸರ್ ಎಂವಿ ಆಡಿಟೋರಿಯಂ**
**ದಿನಾಂಕ ಮತ್ತು ಸಮಯ: ನವೆಂಬರ್ 23 (ಸಮಯ- 17:00 ಮತ್ತು 19:00)**

**ಕ್ಯಾಂಡಲ್ಲೈಟ್: ಟ್ರಿಬ್ಯೂಟ್ ಟು ಆರ್ ಡಿ ಬರ್ಮನ್**
**ಸ್ಥಳ: ಹಯಾತ್ ಸೆಂಟ್ರಿಕ್ ಬೆಂಗಳೂರು ಹೆಬ್ಬಾಳ**
**ದಿನಾಂಕ ಮತ್ತು ಸಮಯ: ಡಿಸೆಂಬರ್ 7 (ಸಮಯ- 21:00)**

**ಕ್ಯಾಂಡಲ್ಲೈಟ್: ಫ್ರಮ್ ಮೊಜಾರ್ಟ್ ಟು ಚಾಪಿನ್**
**ಸ್ಥಳ: ಬೆಂಗಳೂರು ಬ್ರಿಗೇಡ್ ಗೇಟ್ ವೇನಲ್ಲಿರುವ ಶೆರಟನ್ ಗ್ರ್ಯಾಂಡ್ ಹೋಟೆಲ್. ದಿನಾಂಕ ಮತ್ತು ಸಮಯ: ಡಿಸೆಂಬರ್ 28 (ಸಮಯ- 17:00)**

**ಕ್ಯಾಂಡಲ್ಲೈಟ್: ಎ ಟ್ರಿಬ್ಯೂಟ್ ಟು ಕೋಲ್ಡ್ ಪ್ಲೇ**
**ಸ್ಥಳ: ಬೆಂಗಳೂರು ಬ್ರಿಗೇಡ್ ಗೇಟ್ ವೇನಲ್ಲಿರುವ ಶೆರಟನ್ ಗ್ರ್ಯಾಂಡ್ ಹೋಟೆಲ್,. ದಿನಾಂಕ ಮತ್ತು ಸಮಯ: ಡಿಸೆಂಬರ್ 28 (ಸಮಯ- 19:00 ಮತ್ತು 21:00**

## ಸೂಪರ್ ಸ್ಟಾರ್ ರಜನಿಕಾಂತ್ ಗೆ ಹೃದಯದ ಸಮಸ್ಯೆ, ಸ್ಟೆಂಟ್ ಅಳವಡಿಕೆ





ಸೂಪರ್ ಸ್ಟಾರ್ ರಜನಿಕಾಂತ್ ಗೆ ಹೃದಯದ ಸಮಸ್ಯೆ, ಸ್ಟೆಂಟ್ ಅಳವಡಿಕೆ

ಸೂಪರ್ ಸ್ಟಾರ್ ರಜನಿಕಾಂತ್ ಅವರ ಅನಾರೋಗ್ಯದ ಹಿನ್ನೆಲೆಯಲ್ಲಿ ಅವರನ್ನು ಚೆನ್ನೈನ ಆಸ್ಪತ್ರೆಗೆ ದಾಖಲು ಮಾಡಲಾಗಿತ್ತು. ಏಕಾಏಕಿ ನೆಚ್ಚಿನ ನಟನನ್ನು ಅಡ್ಮಿಟ್ ಮಾಡಿದ್ದು ತಿಳಿದು ಅಭಿಮಾನಿಗಳು ಕಂಗಾಲಾಗಿದ್ದರು. ಇದೀಗ ಆಸ್ಪತ್ರೆ ಮೂಲಗಳು ರಜನಿಕಾಂತ್ ಅವರಿಗೆ ಏನಾಗಿದೆ ಎಂಬುದನ್ನು ತಿಳಿಸಿದ್ದಾರೆ. 'ಸೂಪರ್ ಸ್ಟಾರ್' ರಜನಿಕಾಂತ್ ಅವರಿಗೆ ಹೃದಯ ಸಂಬಂಧಿ ಸಮಸ್ಯೆ ಕಾಣಿಸಿಕೊಂಡಿದೆ. ಅದಕ್ಕೆ ಚೆನ್ನೈನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ರಕ್ತನಾಳ ಉಬ್ಬಿದ್ದರಿಂದ ಸ್ಟೆಂಟ್ ಹಾಕಲಾಗಿದೆ ಎಂಬ ಮಾಹಿತಿ ಲಭ್ಯವಾಗಿದೆ. ಸೆ.30ರಂದು ರಜನಿಕಾಂತ್ ಅವರನ್ನು ಅಪೋಲೋ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಅವರ ರಕ್ತನಾಳದಲ್ಲಿ ಊತ ಕಾಣಿಸಿಕೊಂಡಿತ್ತು. ಅದಕ್ಕೆ ಚಿಕಿತ್ಸೆ ನೀಡಲಾಗಿದೆ. ಹಿರಿಯ ವೈದ್ಯ ಡಾ. ಸಾಯಿ ಸತೀಶ್ ಅವರು ರಜನಿಕಾಂತ್ ಅವರಿಗೆ ಸ್ಟೆಂಟ್ ಹಾಕಿದ್ದು ಸದ್ಯ ರಜನಿಕಾಂತ್ ಆರೋಗ್ಯ ಸುಧಾರಿಸುತ್ತಿದೆ ಎಂದು ಆಸ್ಪತ್ರೆಯ ಕಡೆಯಿಂದ ಹೆಲ್ತ್ ಅಪ್ಡೇಟ್ ನೀಡಲಾಗಿದೆ. ಆದಷ್ಟು ಬೇಗ ರಜನಿಕಾಂತ್ ಅವರು ಗುಣಮುಖರಾಗಲಿ ಎಂದು ಅಭಿಮಾನಿಗಳು, ಆಪ್ತರು, ಸೆಲೆಬ್ರಿಟಿಗಳು ಪ್ರಾರ್ಥಿಸುತ್ತಿದ್ದಾರೆ. 'ರಜನಿಕಾಂತ್ ಆರೋಗ್ಯ ಸ್ಥಿರವಾಗಿದೆ. ಅವರು ಚೇತರಿಸಿಕೊಳ್ಳುತ್ತಿದ್ದಾರೆ. ಇನ್ನು ಎರಡು ದಿನಗಳಲ್ಲಿ ಅವರು ಮನೆಗೆ ತೆರಳಲಿದ್ದಾರೆ' ಎಂದು ಕೂಡ ಆಸ್ಪತ್ರೆಯ ಕಡೆಯಿಂದ ಮಾಹಿತಿ ಹಂಚಿಕೊಳ್ಳಲಾಗಿದೆ. ವಿಷಯ ತಿಳಿದು ಅಭಿಮಾನಿಗಳು ನಿಟ್ಟುಸಿರು ಬಿಟ್ಟಿದ್ದಾರೆ. ರಜನಿಕಾಂತ್ ಅವರಿಗೆ ಈಗ 73 ವರ್ಷ ವಯಸ್ಸು. ವಯೋ ಸಹಜವಾಗಿ ಅವರು ಒಂದಷ್ಟು ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಈ ಸಂದರ್ಭದಲ್ಲಿ ಅವರು ದಿಢೀರ್ ಅಂತ ಆಸ್ಪತ್ರೆಗೆ ದಾಖಲಾಗಿದ್ದರಿಂದ ಎಲ್ಲರಿಗೂ ಆತಂಕ ಹೆಚ್ಚಿತ್ತು. ಸದ್ಯ ಕೆಲವು ದಿನಗಳ ಕಾಲ ರಜನಿಕಾಂತ್ ಅವರು ಸಿನಿಮಾದ ಕೆಲಸಗಳಿಗೆ ಬ್ರೇಕ್ ನೀಡಲಿದ್ದಾರೆ. ಸಂಪೂರ್ಣ ಗುಣಮುಖರಾದ ನಂತರವೇ ಅವರು ಸಿನಿಮಾದ ಕೆಲಸಗಳತ್ತ ಮರಳಿದ್ದಾರೆ.

'ವೆಟ್ಟಯ್ಯನ್', 'ಕೂಲಿ' ಸಿನಿಮಾದಲ್ಲಿ ರಜನಿಕಾಂತ್ ನಟಿಸಿದ್ದಾರೆ. ಅಕ್ಟೋಬರ್ 10ರಂದು 'ವೆಟ್ಟಯ್ಯನ್' ಸಿನಿಮಾ ಬಿಡುಗಡೆ ಆಗಲಿದೆ. ಇನ್ನೇನು ಅವರು ಈ ಚಿತ್ರದ ಪ್ರಚಾರದಲ್ಲಿ ಪಾಲ್ಗೊಳ್ಳಬೇಕು ಎನ್ನುವಾಗಲೇ ಆರೋಗ್ಯದಲ್ಲಿ ಸಮಸ್ಯೆ ಕಾಣಿಸಿಕೊಂಡಿದ್ದೆ. ಸದ್ಯ ವಿಶ್ರಾಂತಿಯಲ್ಲಿರೋ ರಜನಿಕಾಂತ್ ಸದ್ಯದಲ್ಲೇ ಮತ್ತೆ ಸಿನಿಮಾಗಳ ಕೆಲಸಗಳಲ್ಲಿ ತೊಡಗಿಕೊಳ್ಳಲಿದ್ದಾರೆ.

## ರಾಶಿ ಭವಿಷ್ಯ



**ಜಯಶ್ರೀ.ಬಿ.ಆರ್**
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಹಿರಿಯರ ಮಾತಿಗೆ ಗೌರವ, ಆಕಸ್ಮಿಕ ದೂರ ಪ್ರಯಾಣ, ಮಹಿಳೆಯರಿಗೆ ಮನಶಾಂತಿ, ದೇವತಾ ಕಾರ್ಯ.

**ವೃಷಭ:** ಸ್ವಯಂಕೃತ ಅಪರಾಧ, ವಿದೇಶ ಯಾನ, ಶೀತ ಸಂಬಂಧ ಕಾಯಿಲೆ, ಕೆಲಸಗಳಲ್ಲಿ ಮುನ್ನಡೆ, ಅಧಿಕ ಖರ್ಚು.

**ಮಿಥುನ:** ಯತ್ನ ಕಾರ್ಯಗಳಲ್ಲಿ ವಿಳಂಬ, ಬಂಧು ಮಿತ್ರರ ಆಗಮನ, ಆರೋಗ್ಯದಲ್ಲಿ ಏರುಪೇರು,

**ಕಟಕ:** ನಾನಾ ವಿಚಾರಗಳಲ್ಲಿ ಆಸಕ್ತಿ, ಮನಸ್ಸಿನಲ್ಲಿ ಹಲವು ಆಲೋಚನೆ, ಶತ್ರು ಕಾಟ, ಚಂಚಲ ಮನಸ್ಸು

**ಸಿಂಹ :** ಸಾಧಾರಣ ಪ್ರಗತಿ, ಉದ್ಯೋಗದಲ್ಲಿ ವರ್ಗಾವಣೆ ಆತಂಕ, ಶತ್ರು ಭಾದೆ, ಸುಖ ಭೋಜನ, ಅನಿರೀಕ್ಷಿತ ಖರ್ಚು.

**ಕನ್ಯಾ:** ವ್ಯವಹಾರಗಳಲ್ಲಿ ಲಾಭ, ಕುಟುಂಬದಲ್ಲಿ ಕಿರಿಕಿರಿ, ಹೆತ್ತವರಲ್ಲಿ ದ್ವೇಷ, ಸಜ್ಜನ ಸಹವಾಸದಿಂದ ಕೀರ್ತಿ

**ತುಲಾ:** ಮನಸ್ಸಿನಲ್ಲಿ ಭಯ, ಸಂಕಟಗಳು ಹೆಚ್ಚು, ಆತುರದ ನಿರ್ಧಾರ ಬೇಡ,

**ವೃಶ್ಚಿಕ:** ಅಮೂಲ್ಯ ವಸ್ತುಗಳ ಖರೀದಿ, ಯಾರನ್ನು ಹೆಚ್ಚಾಗಿ ನಂಬಬೇಡಿ, ಕೋಪ ಜಾಸ್ತಿ, ಅನಾರೋಗ್ಯ.

**ಧನಸ್ಸು:** ಕೆಲಸದಲ್ಲಿ ಏಕಾಗ್ರತೆ, ಪರಿಶ್ರಮದಿಂದ ಕಾರ್ಯ ಪ್ರಗತಿ, ದುಷ್ಟರಿಂದ ದೂರವಿರಿ,

**ಮಕರ:** ಸಾಲ ಮರುಪಾವತಿ, ಆರೋಗ್ಯದಲ್ಲಿ ತೊಂದರೆ, ತಾಳ್ಮೆ ಇರಲಿ, ದೂರ ಪ್ರಯಾಣಗುರಿ ಸಾಧಿಸಲು ಸುಸಮಯ

**ಕುಂಭ:** ಆತ್ಮೀಯರೊಂದಿಗೆ ಮಾತುಕತೆ, ಉನ್ನತ ವಿದ್ಯಾಭ್ಯಾಸ, ಸ್ತ್ರೀ ಸೌಖ್ಯ, ರೋಗಭಾದೆ,

**ಮೀನ:** ವಿಪರೀತ ಖರ್ಚು, ಕಾರ್ಯಕ್ಷೇತ್ರದಲ್ಲಿ ಗೌರವ, ಶರೀರದಲ್ಲಿ ಆಯಾಸ, ವಿವಾಹ ಯೋಗ, ಪಿತ್ರಾರ್ಜಿತ ಆಸ್ತಿಗಾಗಿ ಕಲಹ.

## ಗಾಂಧಿ ಜಯಂತೋತ್ಸವ



ಅಕ್ಟೋಬರ್ 2 ನೇ ತಾರೀಖಿನಂದು ಪ್ರತಿವರ್ಷ ಗಾಂಧಿ ಜಯಂತೋತ್ಸವವನ್ನು ಆಚರಣೆ ಮಾಡಲಾಗುತ್ತದೆ. ಈ ದಿನದಂದು ಗಾಂಧಿಯವರ ಕೊಡುಗೆಗಳನ್ನು ನೆನೆದು, ಅವರಿಗೆ ಗೌರವವನ್ನು ಅರ್ಪಿಸಲಾಗುತ್ತದೆ. ಶಾಲಾ, ಕಾಲೇಜುಗಳಲ್ಲಿ ಈ ದಿನದಂದು ವಿದ್ಯಾರ್ಥಿಗಳು ಈ ದಿನದ ಮಹತ್ವದ ಕುರಿತು ಭಾಷಣವನ್ನು ಮಾಡುವುದು ಸಾಮಾನ್ಯವಾಗಿದೆ. ಅಷ್ಟೇ ಅಲ್ಲದೇ ಗಾಂಧೀಜಿ ರವರ ಕುರಿತು ಭಾಷಣ ಸ್ಪರ್ಧೆ, ಪ್ರಬಂಧ ಸ್ಪರ್ಧೆಯನ್ನು ಏರ್ಪಡಿಸಿ, ವಿದ್ಯಾರ್ಥಿಗಳಿಗೆ ಬಹುಮಾನವನ್ನು ವಿತರಣೆ ಮಾಡುವ ಚಟುವಟಿಕೆಗಳು ಇವೆ.

ಗಾಂಧೀಜಿ ರವರ ಹಿನ್ನೆಲೆ ಬಗ್ಗೆ ಹೇಳುವುದಾದಲ್ಲಿ - ಅವರು ಅಕ್ಟೋಬರ್ 02, 1869 ರಂದು ಭಾರತದ ಗುಜರಾತ್ ರಾಜ್ಯದ ಪೋರಬಂದರ್‌ನಲ್ಲಿ ಜನಿಸಿದರು. ಮೋಹನದಾಸ್ ಕರಮಚಂದ್ ಗಾಂಧಿ ಅವರ ಪೂರ್ಣ ಹೆಸರು. ಆದರೆ ಅವರನ್ನು ನಾವೆಲ್ಲ ಮಹಾತ್ಮ ಗಾಂಧಿಯಾಗಿ / ಭಾರತ ದೇಶದ ರಾಷ್ಟ್ರಪಿತನಾಗಿ ಸ್ಮರಿಸುತ್ತಿದ್ದೇವೆ. ನಾವು ಇಂದು ಗಾಂಧೀಜಿ ರವರ 155ನೇ ಜನ್ಮ ದಿನವನ್ನು ಆಚರಿಸುತ್ತಿದ್ದೇವೆ. ಇಂದು ಅವರ ಮಹತ್ವ, ಅವರ ಇತಿಹಾಸ, ಅವರನ್ನು ವಿಶೇಷವಾಗಿ ನೆನೆಯುವುದೇ ತಮ್ಮ ಕರ್ತವ್ಯ. ಕಾರಣ ಅವರ ಎಲ್ಲ ಕೊಡುಗೆಗಳೇ ಆಗಿವೆ. ಗಾಂಧೀಜಿಯವರ ತತ್ವಗಳಿಗೆ ಮುಖ್ಯ ಸ್ಪೂರ್ತಿ ಭಗವದ್ಗೀತೆ ಮತ್ತು ರಷ್ಯಾದ ಪ್ರಸಿದ್ಧ ಸಾಹಿತಿ ಲಿಯೋ ಟಾಲ್ ಸ್ಟಾಯ್ ರವರ ಬರಹಗಳು. ವಿದ್ಯಾರ್ಥಿಗಳಾದ ನಾವು ಈ ಹಂತದಲ್ಲೇ ಪುಸ್ತಕಗಳನ್ನು ಓದುವುದರಿಂದ ಹೆಚ್ಚಿನ ಜ್ಞಾನ ಮಾತ್ರವಲ್ಲದೇ ಸತ್ಯ, ಪ್ರಮಾಣಿಕತೆ, ಒಳ್ಳೆಯ ಗುಣಗಳು ನಮ್ಮಲ್ಲಿ ಅಳವಡಿಸಲ್ಪಡುತ್ತವೆ ಎಂಬುದನ್ನು. ವಿಶೇಷ ಅಂದ್ರೆ ಗಾಂಧೀಜಿಯನ್ನು ಶಾಂತಿ ಅಹಿಂಸೆಗಳ ಹರಿಕಾರ, ಸತ್ಯದ ಸರದಾರ, ಭಾರತ ದೇಶದ ರಾಷ್ಟ್ರಪಿತ ಎಂದು ಕರೆಯಲಾಗುತ್ತದೆ.ಗಾಂಧೀಜಿ ರವರ ಮುಖ್ಯ ತತ್ವಗಳಲ್ಲಿ ಸತ್ಯ ಸಹ ಒಂದು. ನಿಜ ಅಥವಾ ಸತ್ಯದ ಪರಿಶೋಧನೆ ಎಂಬ ವಿಸ್ತೃತ ಉದ್ದೇಶಕ್ಕಾಗಿ ಗಾಂಧೀಜಿಯವರು ತಮ್ಮ ಜೀವನವನ್ನೇ ಮುಡಿಪಾಗಿಟ್ಟವರು. ತಮ್ಮ ತಪ್ಪುಗಳಿಂದಲೇ ಕಲಿತು, ತಮ್ಮ ಮೇಲೆಯೇ ಪ್ರಯೋಗಗಳನ್ನು ಮಾಡಿಕೊಂಡು ಸತ್ಯದ ಮಾರ್ಗವನ್ನು ಸಾಧಿಸಲು ಪ್ರಯತ್ನಿಸಿದವರು ಗಾಂಧಿ. ಆದ್ದರಿಂದ ಅವರು ತಮ್ಮ ಆತ್ಮಚರಿತ್ರೆಯನ್ನು ' ದಿ ಸ್ಟೋರಿ ಆಫ್ ಮೈ ಎಕ್ಸ್‌ಪರಿಮೆಂಟ್ ವಿತ್ ಟ್ರುತ್' ಎಂದು ಕರೆದುಕೊಂಡಿದ್ದಾರೆ. ಅಹಿಂಸೆಯ ಮಾರ್ಗದಲ್ಲಿಯೇ ಬ್ರಿಟಿಷರಿಂದ ಸ್ವಾತಂತ್ರ್ಯ ಪಡೆಯಬೇಕು ಎಂದು ಪಣ ತೊಟ್ಟ ಮೊದಲ ಸ್ವಾತಂತ್ರ್ಯ ಹೋರಾಟಗಾರ ಎಂಬ ಹೆಗ್ಗಳಿಕೆ ಗಾಂಧೀಜಿ ಯವರಿಗಿದೆ. ಮುಯ್ಯಿಗೆ ಮುಯ್ಯಿ ತೀರಿಸಿಕೊಳ್ಳುತ್ತಲೇ ಹೋದರೆ ಇಡೀ ಪ್ರಪಂಚವೇ ನಾಶವಾಗುವುದು ಎಂದು ಅವರು ನಂಬಿದ್ದರು. ಈ ದೃಢ ನಿರ್ಧಾರವನ್ನೇ ಬ್ರಿಟಿಷರಿಂದ ದೇಶಕ್ಕೆ ಸ್ವತಂತ್ರ ಪಡೆಯುವವರೆಗೂ ಪ್ರತಿಪಾದಿಸಿದರು. ನನ್ನ ಸಹಪಾಠಿಗಳೇ ಗಾಂಧಿ ಕೇವಲ ಭಾರತದಲ್ಲಿ ಮಾತ್ರವಲ್ಲದೇ ದಕ್ಷಿಣ ಆಫ್ರಿಕಾದಲ್ಲಿ ವರ್ಣಭೇದ ನೀತಿಯ ವಿರುದ್ಧ ಹೋರಾಡಿ ಅಲ್ಲಿಯೂ ಮಹಾತ್ಮ ಎನಿಸಿಕೊಂಡವರು.ಬ್ರಿಟಿಷರ ವಿರುದ್ಧ ಘೋಷಣೆಗಳನ್ನು ಕೂಗುತ್ತ ಅವರ ವಸ್ತುಗಳಿಗೆ ಬಹಿಷ್ಕಾರ ಮಾಡಿ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದರು. ಈ ಸಂದರ್ಭದಲ್ಲಿ ದೇಶದ ಪ್ರಜೆಗಳಿಗೆ ಮಾಡು ಇಲ್ಲವೆ ಮಡಿ ಎಂಬ ಕರೆಯನ್ನು ನೀಡಿದ್ದರು.ಅವರ ಹಲವು ಹೇಳಿಕೆಗಳು, ತತ್ವಗಳೇ ಇಂದು ಸಹ ಪ್ರಜೆಗಳಲ್ಲಿ ಸ್ವಾತಂತ್ರ್ಯಕ್ಕಾಗಿ, ಹಕ್ಕಿಗಾಗಿ, ಶಿಕ್ಷಣಕ್ಕಾಗಿ, ಸಮಾನತೆಗಾಗಿ, ಭಷ್ಟಾಚಾರದ ವಿರುದ್ಧವಾಗಿ, ಶೋಷಣೆಯ ವಿರುದ್ಧವಾಗಿ ಹೋರಾಡುವ ಭಾವನೆ, ಸ್ಪೂರ್ತಿ ಹೆಚ್ಚಿಸಿದೆ ಎಂದರೆ ತಪ್ಪಾಗಲಾರದು.ಇವರ ನಿರಂತರ ಹೋರಾಟ, ಸತ್ಯಾಗ್ರಹಗಳು, ಹಲವು ಘಟನೆಗಳಿಂದ 1947 ರಂದು ಭಾರತಕ್ಕೆ ಸ್ವಾತಂತ್ರ್ಯ ದೊರಕಿದ್ದು ಎಂಬುದನ್ನು ಯಾರು ಮರೆಯಬಾರದು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಜ್ಯೂ.ಎನ್‌ಟಿಆರ್‌ಗೆ ರುಕ್ಮಿಣಿ ವಸಂತ್ ನಾಯಕಿ



ಕನ್ನಡದ ನಟಿ ರುಕ್ಮಿಣಿ ವಸಂತ್‌ಗೆ ಸೌತ್‌ನಲ್ಲಿ ಬೇಡಿಕೆ ಹೆಚ್ಚಾಗಿದೆ. ಸದ್ಯ ಕನ್ನಡ ಸಿನಿಮಾಗಳ ಜೊತೆ ಕಾಲಿವುಡ್‌ನಲ್ಲಿ ಬ್ಯುಸಿಯಿರುವ ಬೆಡಗಿ ಈಗ ತೆಲುಗಿನಿಂದ ಬುಲಾವ್ ಬಂದಿದೆ. ಟಾಲಿವುಡ್‌ನ ಸ್ಟಾರ್ ನಟನಿಗೆ ರುಕ್ಮಿಣಿ ವಸಂತ್ ನಾಯಕಿಯಾಗಿ ಆಯ್ಕೆಯಾಗಿದ್ದಾರೆ.



ಸದ್ಯ ಹರಿದಾಡುತ್ತಿರುವ ಸುದ್ದಿ ಏನಪ್ಪಾ ಅಂದರೆ, ಜ್ಯೂ.ಎನ್‌ಟಿಆರ್ ನಟಿಸುತ್ತಿರುವ ಹೊಸ ಸಿನಿಮಾಗೆ ರುಕ್ಮಿಣಿ ವಸಂತ್ ಹೀರೋಯಿನ್ ಆಗಿ ಆಯ್ಕೆಯಾಗಿದ್ದಾರೆ ಎನ್ನಲಾದ ಸುದ್ದಿ ಇದೀಗ ಸೋಶಿಯಲ್ ಮೀಡಿಯಾದಲ್ಲಿ ಚರ್ಚೆಗೆ ಗ್ರಾಸವಾಗಿದೆ. ಈ ಚಿತ್ರವನ್ನು ಡೈರೆಕ್ಟರ್ ಪ್ರಶಾಂತ್ ನೀಲ್ ಆಕ್ಷನ್ ಕಟ್ ಹೇಳಲಿದ್ದಾರೆ.

ಇತ್ತೀಚೆಗಷ್ಟೇ ಪ್ರಶಾಂತ್ ನೀಲ್ ಮತ್ತು ತಾರಕ್ ಕಾಂಬಿನೇಷನ್‌ನ ಹೊಸ ಸಿನಿಮಾದ ಮುಹೂರ್ತ ನೆರವೇರಿದೆ. ಈ ಚಿತ್ರಕ್ಕೆ ಕನ್ನಡದ ನಟಿಗೆ ಮಣೆ ಹಾಕಿದೆ ಎನ್ನಲಾಗಿದೆ. ಈ ವಿಚಾರ ಅದೆಷ್ಟರ ಮಟ್ಟಿಗೆ ಸತ್ಯ ಎಂಬುದನ್ನು ಚಿತ್ರತಂಡ ಅಧಿಕೃತವಾಗಿ ತಿಳಿಸುವವರೆಗೂ ಕಾದುನೋಡಬೇಕಿದೆ. ಅಂದಹಾಗೆ, ಶ್ರೀಮುರಳಿ ಜೊತೆ ಬಘೀರ, ಶಿವಣ್ಣ ಜೊತೆ ಭೈರತಿ ರಣ್‌ಗಲ್, ವಿಜಯ್ ಸೇತುಪತಿ ಜೊತೆಗಿನ ಸಿನಿಮಾ, ಶಿವಕಾರ್ತಿಕೇಯನ್ ಜೊತೆಗಿನ ಹೊಸ ಚಿತ್ರ ಸೇರಿದಂತೆ ಹಲವು ಸಿನಿಮಾಗಳು ಅವರ ಕೈಯಲ್ಲಿವೆ.



# ನೆಗೆಟಿವ್ ವಿಮರ್ಶೆಗಳ ನಡುವೆಯೂ ಮುಂದುವರೆದ 'ದೇವರ' ಅಬ್ಬರ




ಜೂ.ಎನ್ ಟಿಆರ್ ನಟನೆಯ 'ದೇವರ' ಸಿನಿಮಾ ಕೆಲ ದಿನಗಳ ಹಿಂದಷ್ಟೆ ವಿಶ್ವದಾದ್ಯಂತ ಬಿಡುಗಡೆ ಆಗಿದೆ. ಕೊರಟಾಲ ಶಿವ ನಿರ್ದೇಶನದ ಈ ಸಿನಿಮಾ ಬಿಡುಗಡೆ ಆದ ದಿನದಿಂದಲೂ ಸಿನಿಮಾ ಬಗ್ಗೆ ಋಣಾತ್ಮಕ ವಿಮರ್ಶೆಗಳೇ ಕೇಳಿ ಬರುತ್ತಿವೆ. ಎನ್ ಟಿಆರ್ ಅಭಿಮಾನಿಗಳೂ ಸಹ ಕೆಲವರು ಸಿನಿಮಾದ ಬಗ್ಗೆ ಮಿಶ್ರ ಪ್ರತಿಕ್ರಿಯೆಯನ್ನೇ ವ್ಯಕ್ತಪಡಿಸಿದ್ದಾರೆ. ಋಣಾತ್ಮಕ ವಿಮರ್ಶೆಗಳ ನಡುವೆಯೂ ಸಹ ಸಿನಿಮಾ ಉತ್ತಮ ಕಲೆಕ್ಷನ್ ಅನ್ನೇ ಮಾಡುತ್ತಿದೆ. ಇದೀಗ ಸಿನಿಮಾ ಬಿಡುಗಡೆ ಆಗಿ ನಾಲ್ಕು ದಿನ ಆಗಿದ್ದು, ಕಲೆಕ್ಷನ್ ಧಾರುಣವಾಗಿ ಏನೂ ಕುಸಿದಿಲ್ಲ.

'ದೇವರ' ಸಿನಿಮಾ ಮಂಗಳವಾರ ಸುಮಾರು 12 ಕೋಟಿ ರೂಪಾಯಿಗಳನ್ನು ಗಳಿಕೆ ಮಾಡಿದೆ. ಸೋಮವಾರದ ಕಲೆಕ್ಷನ್ ಗೆ ಹೋಲಿಸಿದರೆ ಮಂಗಳವಾರ ತುಸು ಕಲೆಕ್ಷನ್ ಹೆಚ್ಚಾಗಿಯೇ ಆಗಿದೆ. ಇದು ಚಿತ್ರತಂಡದಲ್ಲಿ ಭರವಸೆ ಮೂಡಿಸಿದ್ದು, ಸಿನಿಮಾದ 500 ಕೋಟಿ ಕಲೆಕ್ಷನ್ ಕನಸನ್ನು ಜೀವಂತವಾಗಿರಿಸಿದೆ. ಮಂಗಳವಾರ ಕಲೆಕ್ಷನ್ ಆದ 12 ಕೋಟಿ ಹಣದಲ್ಲಿ ನಾಲ್ಕು ಕೋಟಿ ಹಿಂದಿ ಡಬ್ ಆವೃತ್ತಿಯಿಂದಲೇ ಬಂದಿದೆ. ಉತ್ತರ ಭಾರತದಲ್ಲಿ ಕಲೆಕ್ಷನ್ ಉತ್ತಮಗೊಂಡಿದ್ದು, ಮಂಗಳವಾರ ದಿನ ನಾಲ್ಕು ಕೋಟಿಗೂ ಹೆಚ್ಚು ಹಣ ಗಳಿಕೆ ಆಗಿದೆ.

ನಾಲ್ಕು ದಿನಗಳಲ್ಲಿ 'ದೇವರ' ಸಿನಿಮಾದ ಅಂತರಾಷ್ಟ್ರೀಯ ಬಾಕ್ಸ್ ಆಫೀಸ್ ಕಲೆಕ್ಷನ್ 300 ಕೋಟಿ ರೂಪಾಯಿ ದಾಟಿದೆ. ಕೆಲವೇ ದಿನಗಳಲ್ಲಿ 350 ಕೋಟಿ ಕಲೆಕ್ಷನ್ ದಾಟಲಿದ್ದು, ಸಿನಿಮಾದ ಲೈಫ್ ಟೈಮ್ ಕಲೆಕ್ಷನ್ 500 ಕೋಟಿ ಆಗಲಿದೆಯಾ ಎಂಬ ಅನುಮಾನ ಇದೀಗ ಮೂಡಿದೆ. 'ದೇವರ' ಸಿನಿಮಾ ವಿಜಯ್ ನಟನೆಯ 'ವಾರಿಸು' ಸಿನಿಮಾದ ಓವರ್ ಆಲ್ ಕಲೆಕ್ಷನ್ ಅನ್ನು ಈಗಾಗಲೇ ಮೀರಿಸಿದ್ದು, 500 ಕೋಟಿ ಕಲೆಕ್ಷನ್ ಗುರಿ ತಲುಪುವ ನಿರೀಕ್ಷೆಯಲ್ಲಿದೆ. ಆದರೆ ಅದು ಅಷ್ಟು ಸುಲಭ ಅಲ್ಲ ಎಂದಿದ್ದಾರೆ ಬಾಕ್ಸ್ ಆಫೀಸ್ ವಿಶ್ಲೇಷಕರು.

'ದೇವರ' ಸಿನಿಮಾ, ಆರು ವರ್ಷಗಳ ಬಳಿಕ ಬಿಡುಗಡೆ ಆಗುತ್ತಿರುವ ಜೂ ಎನ್ ಟಿಆರ್ ಅವರ ಸೋಲೊ ಸಿನಿಮಾ ಆಗಿದೆ. 'ಆರ್ ಆರ್ ಆರ್' ಸಿನಿಮಾ ಬಿಡುಗಡೆ ಆಗಿತ್ತಾದರೂ ಆ ಸಿನಿಮಾದಲ್ಲಿ ಜೂ ಎನ್ ಟಿಆರ್ ಜೊತೆಗೆ ರಾಮ್ ಚರಣ್ ಸಹ ಇದ್ದರು. 'ದೇವರ' ಸಿನಿಮಾವನ್ನು ಕೊರಟಾಲ ಶಿವ ನಿರ್ದೇಶನ ಮಾಡಿದ್ದು, ಸಿನಿಮಾದಲ್ಲಿ ನಾಯಕಿಯಾಗಿ ಜಾನ್ವಿ ಕಪೂರ್ ನಟಿಸಿದ್ದಾರೆ. ಸೈಫ್ ಅಲಿ ಖಾನ್ ವಿಲನ್. ಸಿನಿಮಾದ ಮೊದಲ ಭಾಗವಷ್ಟೆ ಈಗ ಬಿಡುಗಡೆ ಆಗಿದ್ದು, ಮುಂದಿನ ಭಾಗ ಮುಂದಿನ ವರ್ಷ ತೆರೆಗೆ ಬರಲಿದೆ.

# ಹುಟ್ಟುಹಬ್ಬಕ್ಕೆ ಬ್ರೇಕ್ ಹಾಕಿದ ರಚಿತಾ ರಾಮ್ ಫ್ಯಾನ್ಸ್ ಬೇಸರ

ಡಿಂಪಲ್ ಕ್ವೀನ್ ರಚಿತಾ ರಾಮ್ ಅಭಿಮಾನಿಗಳಿಗೆ ಕಹಿ ಸುದ್ದಿ ಕೊಟ್ಟಿದ್ದಾರೆ. ಈ ಬಾರಿ ಹುಟ್ಟುಹಬ್ಬ ಆಚರಿಸಿಕೊಳ್ಳುತ್ತಿಲ್ಲ ಎಂದು ಫ್ಯಾನ್ಸ್‌ಗೆ ರಚಿತಾ ರಾಮ್ ಸೋಶಿಯಲ್ ಮೀಡಿಯಾದಲ್ಲಿ ಮಾಹಿತಿ ನೀಡಿದ್ದಾರೆ. ಇದು ಅಭಿಮಾನಿಗಳಿಗೆ ಬೇಸರ ಮೂಡಿಸಿದೆ.



ಎಲ್ಲರಿಗೂ ನಮಸ್ಕಾರ, ಎಲ್ಲರೂ ಚೆನ್ನಾಗಿದ್ದೀರಿ ಎಂದು ಭಾವಿಸುತ್ತೇನೆ. ಈ ಬಾರಿ ಚಿತ್ರೀಕರಣ ಇರುವುದರಿಂದ ನನ್ನ ಹುಟ್ಟುಹಬ್ಬ (ಅ.3) ಆಚರಣೆಯನ್ನು ಮಾಡಿಕೊಳ್ಳುತ್ತಿಲ್ಲ ಎಂದು ಹೇಳಲು ಇಚ್ಚಿಸುತ್ತೇನೆ. ಎಲ್ಲರಿಗೂ ಕ್ಷಮೆಯಾಚಿಸುತ್ತಾ ಎಂದಿನಂತೆ ಪ್ರತಿ ಭಾನುವಾರ ಚಿತ್ರೀಕರಣ ಮುಗಿಸಿ ಬಂದ ನಂತರ ಸಿಗುತ್ತೇನೆ ಎಂದು ನಟಿ ಮನವಿ ಮಾಡಿದ್ದಾರೆ.

ಅಂದಹಾಗೆ, ಶ್ರೀನಗರ ಕಿಟ್ಟಿ ಜೊತೆಗಿನ 'ಸಂಜು ವೆಡ್ಸ್ ಗೀತಾ 2'ನಲ್ಲಿ ನಾಯಕಿಯಾಗಿ ರಚಿತಾ ರಾಮ್ ನಟಿಸಿದ್ದಾರೆ. ಈ ಸಿನಿಮಾದ ಜೊತೆ ಹಲವು ಚಿತ್ರಗಳು ಅವರ ಕೈಯಲ್ಲಿವೆ.

# ರಿಷಬ್ ಶೆಟ್ಟಿ ತಂದೆ ಪಾತ್ರದಲ್ಲಿ ಮೋಹನ್‌ಲಾಲ್?



ರಾಷ್ಟ್ರ ಪ್ರಶಸ್ತಿ ವಿಜೇತ ನಟ ರಿಷಬ್ ಶೆಟ್ಟಿ ಸದ್ಯ 'ಕಾಂತಾರ ಚಾಪ್ಟರ್ 1'ರಲ್ಲಿ ಬ್ಯುಸಿಯಾಗಿದ್ದಾರೆ. ಸದ್ಯ ಈ ಸಿನಿಮಾದ ಬಗ್ಗೆ ಇಂಟರೆಸ್ಟಿಂಗ್ ಅಪ್‌ಡೇಟ್‌ವೊಂದು ಸಿಕ್ಕಿದೆ. 'ಕಾಂತಾರ' ಪಾರ್ಟ್ 1ರಲ್ಲಿ ರಿಷಬ್ ತಂದೆಯ ಪಾತ್ರದಲ್ಲಿ ಮೋಹನ್‌ಲಾಲ್ ನಟಿಸಲಿದ್ದಾರೆ ಎನ್ನಲಾದ ಸುದ್ದಿಯೊಂದು ಸೋಶಿಯಲ್ ಮೀಡಿಯಾದಲ್ಲಿ ಚರ್ಚೆಗೆ ಗ್ರಾಸವಾಗಿದೆ. ಕೆಲ ತಿಂಗಳುಗಳ ಹಿಂದೆ ರಿಷಬ್ ಅವರು ಮೋಹನ್ ಲಾಲ್‌ರನ್ನು ಭೇಟಿಯಾಗಿದ್ದರು. ಅದೀಗ ಚಿತ್ರದಲ್ಲಿ ರಿಷಬ್ ತಂದೆ ಪಾತ್ರದಲ್ಲಿ ನಟಿಸಲು ಮೋಹನ್‌ಲಾಲ್‌ರನ್ನು ಭೇಟಿಯಾಗಿದ್ದರು ಎಂದೇ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗುತ್ತಿದೆ. ಆದರೆ ಚಿತ್ರತಂಡದ ಕಡೆಯಿಂದ ಅಧಿಕೃತ ಘೋಷಣೆ ಆಗಿಲ್ಲ. ಈ ವಿಚಾರ ಅದೆಷ್ಟರ ಮಟ್ಟಿಗೆ ನಿಜ ಎಂಬುದನ್ನು ಚಿತ್ರತಂಡ ಪ್ರತಿಕ್ರಿಯೆ ನೀಡಬೇಕಿದೆ. ಅಂದಹಾಗೆ, ರಿಷಬ್ 'ಕಾಂತಾರ ಚಾಪ್ಟರ್ 1'ರ ಕೆಲಸದಲ್ಲಿ ತೊಡಗಿಸಿಕೊಂಡಿದ್ದಾರೆ. ಅಕ್ಟೋಬರ್‌ನಿಂದ 50 ದಿನಗಳ ಸುದೀರ್ಘವಾಗಿ ಚಿತ್ರೀಕರಣ ನಡೆಯಲಿದೆ. ಕುಂದಾಪುರದಲ್ಲಿ ಇಡೀ ಚಿತ್ರತಂಡ ಬೀಡು ಬಿಟ್ಟಿದೆ.

# ಟೆಸ್ಟ್‌ನಲ್ಲಿ ಟಿ20 ಆಟ

## ಕ್ಲೀನ್‌ಸ್ವೀಪ್‌ನೊಂದಿಗೆ ಸರಣಿ ಗೆದ್ದ ಭಾರತ



ಮಳೆಯಿಂದ ರದ್ದಾಗಬಹುದೆಂಬ ಭೀತಿಯಲ್ಲಿದ್ದ ಪಂದ್ಯವನ್ನು ಭಾರತ ಗೆದ್ದುಕೊಂಡಿದೆ. ಬಾಂಗ್ಲಾ ವಿರುದ್ಧದ ಎರಡನೇ ಟೆಸ್ಟ್ ಪಂದ್ಯವನ್ನು ಭಾರತ 7 ವಿಕೆಟ್‌ಗಳಿಂದ ಜಯಗಳಿಸಿದೆ.

ಎರಡನೇ ಇನ್ನಿಂಗ್ಸ್‌ನಲ್ಲಿ ಗೆಲ್ಲು 95 ರನ್‌ಗಳ ಸುಲಭ ಸವಾಲನ್ನು ಪಡೆದ ಭಾರತ 17.2 ಓವರ್‌ಗಳಲ್ಲಿ 3 ವಿಕೆಟ್ ನಷ್ಟಕ್ಕೆ 98 ರನ್ ಹೊಡೆಯುವ ಮೂಲಕ ಜಯ ಸಾಧಿಸಿ ಎರಡು ಪಂದ್ಯಗಳ ಸರಣಿಯನ್ನು ಕ್ಲೀನ್‌ಸ್ವೀಪ್ ಮಾಡಿಕೊಂಡಿದೆ.

ಭಾರತದ ಪರ ಆರಂಭಿಕ ಆಟಗಾರ ಯಶಸ್ವಿ ಜೈಸ್ವಾಲ್ 51 ರನ್ (45 ಎಸೆತ, 8 ಬೌಂಡರಿ, 1 ಸಿಕ್ಸರ್) ಹೊಡೆದರೆ ವಿರಾಟ್ ಕೊಹ್ಲಿ ಔಟಾಗದೇ 29 ರನ್ (37 ಎಸೆತ, 4 ಬೌಂಡರಿ) ಹೊಡೆದರು.

ಇದಕ್ಕೂ ಮೊದಲು ಬ್ಯಾಟ್ ಮಾಡಿದ ಬಾಂಗ್ಲಾ 47 ಓವರ್ ಗಳಲ್ಲಿ 146 ರನ್‌ಗಳಿಗೆ ಆಲೌಟ್ ಆಯ್ತು. ಬುಮ್ರಾ, ಅಶ್ವಿನ್, ಜಡೇಜಾ ತಲಾ ಮೂರು ವಿಕೆಟ್ ಪಡೆದರೆ ಆಕಾಶ್ ದೀಪ್ 1 ವಿಕೆಟ್ ಪಡೆದರು.

**ಭಾರತ ಗೆದ್ದಿದ್ದು ಹೇಗೆ?:** ಮೊದಲ ದಿನ ಕೇವಲ 35 ಓವರ್ ಮಾತ್ರ ಬೌಲ್ ಮಾಡಲು ಸಾಧ್ಯವಾಗಿತ್ತು. 2 ಮತ್ತು 3ನೇ ದಿನ ಒಂದು ಎಸೆತ ಹಾಕಲು ಸಾಧ್ಯವಾಗಿರಲಿಲ್ಲ. 4 ದಿನದಿಂದ ಪಂದ್ಯ ಸರಿಯಾಗಿ ಆರಂಭವಾಗಿತ್ತು. ಭಾರತ ಟಿ20 ಮಾದರಿಯಲ್ಲಿ ಬ್ಯಾಟ್ ಬೀಸಿತ್ತು. ಪರಿಣಾಮ ವೇಗದ 50, 100, 200, 250 ರನ್ ಹೊಡೆದ ತಂಡ ಎಂಬ ವಿಶ್ವದಾಖಲೆ ಬರೆದಿತ್ತು. ಈ ಮೂಲಕ ಟೆಸ್ಟ್ ಇನ್ನಿಂಗ್ಸ್‌ನಲ್ಲಿ ಅತಿ ಹೆಚ್ಚು ರನ್ ರೇಟ್ ಹೊಂದಿದ್ದ ತಂಡ ಎಂಬ ಹೆಗ್ಗಳಿಕೆಗೆ ಪಾತ್ರವಾಗಿತ್ತು.

ಈ ಪಂದ್ಯವನ್ನು ಗೆಲ್ಲುವುದರ ಮೂಲಕ ಜನವರಿ 2016ರ ನಂತರ ಅತಿ ಹೆಚ್ಚು ಟೆಸ್ಟ್ ಪಂದ್ಯವನ್ನು ಗೆದ್ದ ತಂಡ ಎಂಬ ಸಾಧನೆ ಮಾಡಿದೆ. ಭಾರತ 86 ಪಂದ್ಯವಾಡಿ 53 ಪಂದ್ಯ ಗೆದ್ದುಕೊಂಡಿದೆ. 21 ಪಂದ್ಯವನ್ನು ಸೋತರೆ 12 ಪಂದ್ಯವನ್ನು ಡ್ರಾ ಮಾಡಿಕೊಂಡಿದೆ.

ಎರಡನೇ ಸ್ಥಾನದಲ್ಲಿರುವ ಇಂಗ್ಲೆಂಡ್ 111 ಪಂದ್ಯವಾಡಿ 52 ಪಂದ್ಯವನ್ನು ಗೆದ್ದುಕೊಂಡಿದೆ. 44 ಪಂದ್ಯವನ್ನು ಸೋತು 15 ಪಂದ್ಯವನ್ನು ಡ್ರಾ ಮಾಡಿಕೊಂಡಿದೆ.

### ಗೆದ್ದ ಬಳಿಕ ರೋಹಿತ್ ಶರ್ಮಾ ಹೇಳಿದ್ದೇನು?

ಐದು ದಿನಗಳ ಟೆಸ್ಟ್ ಪಂದ್ಯ ಅದರರಲ್ಲಿ ಎರಡುವರೆ ದಿನದಾಟಗಳು ಮಳೆಗೆ ಆಹುತಿ. 4ನೇ ದಿನದಾಟದಲ್ಲೂ ಮೊದಲ ಇನಿಂಗ್ಸ್ ಮುಂದುವರೆಸಿದ್ದ ಎದುರಾಳಿ ತಂಡ ಇಂತಹದೊಂದು ಸನ್ನಿವೇಶ ಕಂಡು ಬಂದರೆ ಈ ಪಂದ್ಯ ಡ್ರಾನಲ್ಲಿ ಕೊನೆಗೊಳ್ಳುವುದು ಸಾಮಾನ್ಯ. ಆದರೆ ಭಾರತ ತಂಡ ಅಂತಹ ಡ್ರಾಗೆ ಸಿದ್ಧವಾಗಿರಲಿಲ್ಲ. ಸಿಕ್ಕ ಕೆಲವೇ ಕೆಲವು ಓವರ್‌ಗಳಲ್ಲಿ ಇಡೀ ಪಂದ್ಯದ ಚಿತ್ರಣ ಬದಲಿಸಿಬಿಟ್ಟರು.



ನಾಲ್ಕನೇ ದಿನದಾಟದಲ್ಲಿ ಮೊದಲ ಇನಿಂಗ್ಸ್ ಆಡುತ್ತಿದ್ದ ಬಾಂಗ್ಲಾದೇಶ್ ತಂಡವನ್ನು ಕೇವಲ 233 ರನ್‌ಗಳಿಗೆ ಆಲೌಟ್ ಮಾಡಿದ ಟೀಮ್ ಇಂಡಿಯಾ ಅದೇ ದಿನ ಕೇವಲ 33.4 ಓವರ್‌ಗಳಲ್ಲಿ 285/9 ರನ್‌ಗಳಿಸಿ ಡಿಕ್ಲೇರ್ ಘೋಷಿಸಿತು. ಇದರ ಬೆನ್ನಲ್ಲೇ ದ್ವಿತೀಯ ಇನಿಂಗ್ಸ್ ಆರಂಭಿಸಿದ ಬಾಂಗ್ಲಾದೇಶ್ ತಂಡವನ್ನು ಐದನೇ ದಿನದಾಟದಲ್ಲಿ 146 ರನ್‌ಗಳಿಗೆ ಆಲೌಟ್ ಮಾಡಿತು. ಈ ಮೂಲಕ 95 ರನ್‌ಗಳ ಗುರಿ ಪಡೆದು ಟೀಮ್ ಇಂಡಿಯಾ ಅಂತಿಮ ದಿನದಾಟದಲ್ಲಿ ವಿಜಯಲಕ್ಷ್ಮಿಯನ್ನು ಒಲಿಸಿಕೊಂಡಿತು.

ಇಂತಹದೊಂದು ಅಮೋಘ ಗೆಲುವಿನ ಬಳಿಕ ಮಾತನಾಡಿದ ಟೀಮ್ ಇಂಡಿಯಾ ನಾಯಕ ರೋಹಿತ್ ಶರ್ಮಾ, ಈ ಫಲಿತಾಂಶಕ್ಕಾಗಿ ಮಾಡಿಕೊಂಡ ಸಿದ್ಧತೆಗಳನ್ನು ಬಹಿರಂಗಪಡಿಸಿದ್ದಾರೆ. ನಮ್ಮ ಮೊದಲ ಪ್ಲ್ಯಾನ್ ಬಾಂಗ್ಲಾದೇಶ್ ತಂಡವನ್ನು ನಾಲ್ಕನೇ ದಿನದಾಟದಲ್ಲೇ ಆಲೌಟ್ ಮಾಡುವುದಾಗಿತ್ತು. ಇದಕ್ಕಾಗಿ ನಾವು ಸಿದ್ಧತೆಗಳನ್ನು ಮಾಡಿಕೊಂಡಿದ್ದೆವು.

ಕೋಚ್ ಗೌತಮ್ ಗಂಭೀರ್ ಅವರೊಂದಿಗೆ ನಾನು ಸಹ ಕ್ರಿಕೆಟ್ ಆಡಿದ್ದೇನೆ. ಹೀಗಾಗಿ ಅವರ ಮನಸ್ಥಿತಿ ಏನು? ಏನು ಮಾಡಬೇಕು ಎಂಬುದು ನನಗೆ ಚೆನ್ನಾಗಿ ಗೊತ್ತಿತ್ತು. ಹೀಗಾಗಿಯೇ ನಾಲ್ಕನೇ ದಿನದಾಟದಲ್ಲಿ ಬಾಂಗ್ಲಾ ತಂಡವನ್ನು ಆಲೌಟ್ ಮಾಡಿ ಪಂದ್ಯದ ಮೇಲೆ ಹಿಡಿತ ಸಾಧಿಸಲು ಪ್ಲ್ಯಾನ್ ರೂಪಿಸಿದೆವು ಎಂದು ರೋಹಿತ್ ಶರ್ಮಾ ಹೇಳಿದ್ದಾರೆ.

ಬಾಂಗ್ಲಾದೇಶ್ ತಂಡವನ್ನು 233 ರನ್‌ಗಳಿಗೆ ಆಲೌಟ್ ಆದಾಗ ನಾವು ಈ ಸ್ಕೋರ್ ಬಗ್ಗೆ ಯೋಚಿಸಿರಲಿಲ್ಲ. ಬದಲಾಗಿ ನಮಗೆ ಎಷ್ಟು ಓವರ್‌ಗಳನ್ನು ಆಡಲು ಸಿಗಲಿದೆ ಎಂಬುದರ ಲೆಕ್ಕಾಚಾರವನ್ನು ಹಾಕಲಾಗಿತ್ತು. ಹೀಗಾಗಿ ತ್ವರಿತ ಗತಿಯಲ್ಲಿ ರನ್‌ಗಳಿಸಲು ಪ್ಲ್ಯಾನ್ ರೂಪಿಸಿದ್ದೆವು. ಆದರೆ ಈ ಪಿಚ್‌ನಲ್ಲಿ ಬ್ಯಾಟ್ ಮಾಡುವುದು ಕೂಡ ಸುಲಭವಾಗಿರಲಿಲ್ಲ. ಹೀಗಾಗಿ ಏನು ಬೇಕಾದರೂ ಆಗಬಹುದು ಎಂಬ ಎಚ್ಚರಿಕೆ ನಮ್ಮಲ್ಲಿತ್ತು ಎಂದು ರೋಹಿತ್ ಶರ್ಮಾ ಹೇಳಿದರು.

ಪಿಚ್ ಬ್ಯಾಟಿಂಗ್‌ಗೆ ಸಹಕಾರಿಯಲ್ಲದಿದ್ದರೂ ನಾವು ರಿಸ್ಕ್ ತೆಗೆದುಕೊಳ್ಳಲು ನಿರ್ಧರಿಸಿದ್ದೆವು. ಈ ಪ್ರಯತ್ನದಲ್ಲಿ ನಾವು 100-150ಕ್ಕೆ ಔಟಾದರೂ ಅದಕ್ಕೆ ಸಿದ್ಧರಿದ್ದೆವು. ಒಟ್ಟಿನಲ್ಲಿ ಡ್ರಾ ಆಗುವ ಪಂದ್ಯದಲ್ಲಿ ಗೆಲ್ಲುವ ಪ್ರಯತ್ನ ಮಾಡುವುದು ನಮ್ಮ ಮುಖ್ಯ ಉದ್ದೇಶವಾಗಿತ್ತು. ಈ ಪ್ರಯತ್ನದಲ್ಲಿ ಇದೀಗ ನಾವು ಸಫಲರಾಗಿದ್ದೇವೆ ಎಂದು ರೋಹಿತ್ ಶರ್ಮಾ ಖುಷಿ ವ್ಯಕ್ತಪಡಿಸಿದ್ದಾರೆ.



ಸ್ವಚ್ಛ ಭಾರತ ಅಭಿಯಾನ ಶುರುವಾಗಿ 10 ವರ್ಷಗಳು ಕಳೆದಿದ್ದು, ಇಂದು ಗಾಂಧಿ ಜಯಂತಿ ಹಿನ್ನೆಲೆ ಪ್ರಧಾನಿ ಮೋದಿ ಮಕ್ಕಳೊಂದಿಗೆ ಸೇರಿ ಸ್ವಚ್ಛತಾ ಕಾರ್ಯ ನಡೆಸಿದರು. ಇಂದು ನಿಮ್ಮ ಸುತ್ತಮುತ್ತಲಿನ ಪ್ರದೇಶವನ್ನು ಸ್ವಚ್ಛವಾಗಿರಿಸುವಂತೆ ಕೇಳಿಕೊಳ್ಳುತ್ತೇನೆ, ಈ ಕ್ರಮವು ಸ್ವಚ್ಛ ಭಾರತದ ಉತ್ಸಾಹವನ್ನು ಮತ್ತಷ್ಟು ಬಲಪಡಿಸುತ್ತದೆ ಎಂದರು.

# 'ಸ್ವಚ್ಛ ಭಾರತ್ ಮಿಷನ್'ಗೆ ದಶಕದ ಸಂಭ್ರಮ

## ಮೋದಿ ವಿಡಿಯೋ ಹಂಚಿಕೊಂಡ ಹೆಚ್‌ಡಿ ಕುಮಾರಸ್ವಾಮಿ

**ಬೆಂಗಳೂರು:** ದೇಶವನ್ನು ಸ್ವಚ್ಛವಾಗಿಡುವ ಉದ್ದೇಶದಿಂದ ಪ್ರಧಾನಿ ನರೇಂದ್ರ ಮೋದಿ 2014ರಲ್ಲಿ ಅಧಿಕಾರಕ್ಕೆ ಬಂದಿದ್ದ ಸಂದರ್ಭದಲ್ಲಿ ಜಾರಿಗೊಳಿಸಲಾಗಿದ್ದ 'ಸ್ವಚ್ಛ ಭಾರತ್ ಮಿಷನ್' ಯೋಜನೆ ಜಾರಿಯಾಗಿ ಇಂದಿಗೆ (ಅ.2) 10 ವರ್ಷಗಳು ಪೂರ್ಣಗೊಂಡಿವೆ. ಈ ಸಂಬಂಧ ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿಯವರು ತಮ್ಮ ಎಕ್ಸ್ ಖಾತೆಯಲ್ಲಿ ಪ್ರಧಾನಿ ನರೇಂದ್ರ ಮೋದಿಯವರು ಸ್ವಚ್ಛತಾ ಕಾರ್ಯದಲ್ಲಿ ಭಾಗಿಯಾಗಿರುವ ವಿಡಿಯೋವನ್ನು ಹಂಚಿಕೊಂಡಿದ್ದಾರೆ. ಭವಿಷ್ಯದ ಪೀಳಿಗೆಗಾಗಿ ಸ್ವಚ್ಛ, ಸುಂದರ ಮತ್ತು ಸಮರ್ಥ ಭಾರತಕ್ಕಾಗಿ ಕೆಲಸ ಮಾಡುತ್ತಲೇ ಇರೋಣ ಎಂದು ಬರೆದುಕೊಂಡಿದ್ದಾರೆ.



ನಾವು ಸ್ವಚ್ಛ ಭಾರತ್ ಮಿಷನ್‌ನ 10 ವರ್ಷಗಳನ್ನು ಮತ್ತು ಮಹಾತ್ಮ ಗಾಂಧಿಯವರ 155 ನೇ ಜನ್ಮ ವಾರ್ಷಿಕೋತ್ಸವವನ್ನು ಆಚರಿಸುತ್ತಿದ್ದೇವೆ, ನಾವು ಪ್ರಧಾನ ಮಂತ್ರಿ ನರೇಂದ್ರ ಮೋದಿಯವರು ತಂದ ಪರಿವರ್ತನೆಯನ್ನು ಗೌರವಿಸುತ್ತೇವೆ. ಮೋದಿಯವರ ದೃಷ್ಟಿ. ಅವರ ನಾಯಕತ್ವವು ಗಾಂಧೀಜಿಯವರ ಸ್ವಚ್ಛ, ಸ್ವಾವಲಂಬಿ ಭಾರತದ ಕನಸನ್ನು ನನಸಾಗಿಸಿದೆ.

ರಾಷ್ಟ್ರದಾದ್ಯಂತ ಲಕ್ಷಾಂತರ ಜನರನ್ನು ಸಬಲೀಕರಣಗೊಳಿಸಿದೆ. ಭವಿಷ್ಯದ ಪೀಳಿಗೆಗಾಗಿ ಸ್ವಚ್ಛ, ಸುಂದರ ಮತ್ತು ಸಮರ್ಥ ಭಾರತಕ್ಕಾಗಿ ಕೆಲಸ ಮಾಡುತ್ತಲೇ ಇರೋಣ ಎಂದು ಹೆಚ್ ಡಿ ಕುಮಾರಸ್ವಾಮಿಯವರು ಎಕ್ಸ್ ನಲ್ಲಿ ಬರೆದುಕೊಂಡಿದ್ದಾರೆ.

ಮೋದಿ ಅವರು ಇಂದು ನವದೆಹಲಿಯ ವಿಜ್ಞಾನ ಭವನದಲ್ಲಿ ಬೆಳಿಗ್ಗೆ 10 ಗಂಟೆಗೆ ನಡೆಯಲಿರುವ 155 ನೇ ಗಾಂಧಿ ಜಯಂತಿಯ ಸಂದರ್ಭದಲ್ಲಿ ಹಮ್ಮಿಕೊಂಡಿರುವ ''ಸ್ವಚ್ಛ ಭಾರತ್ ದಿವಸ 2024'' ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಈ ಕಾರ್ಯಕ್ರಮದಲ್ಲಿ ಮೋದಿಯವರು 9,600 ಕೋಟಿ ರೂಪಾಯಿಗೂ ಹೆಚ್ಚು ಮೌಲ್ಯದ ನೈರ್ಮಲ್ಯ ಮತ್ತು ಸ್ವಚ್ಛತೆಗೆ ಸಂಬಂಧಿಸಿದ ಹಲವಾರು ನೂತನ ಯೋಜನೆಗಳಿಗೆ ಚಾಲನೆ ಮತ್ತು ಶಿಲಾನ್ಯಾಸ ನೆರವೇರಿಸಲಿದ್ದಾರೆ. ಇದು ಅಮೃತ್ ಮತ್ತು ಅಮೃತ್ 2.0 ಅಡಿಯಲ್ಲಿ 6,800 ಕೋಟಿ ರೂಪಾಯಿ ಮೌಲ್ಯದ ನಗರ ನೀರು ಮತ್ತು ಒಳಚರಂಡಿ ವ್ಯವಸ್ಥೆಯನ್ನು ಉತ್ತಮಗೊಳಿಸುವ/ಹೆಚ್ಚಿಸುವ ಗುರಿಯನ್ನು ಹೊಂದಿರುವ ಯೋಜನೆಗಳನ್ನು ಕೂಡ ಒಳಗೊಂಡಿದೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com

## ತಿರುಪತಿ ಬೆಟ್ಟ ಹತ್ತುವಾಗ ಕುಸಿದುಬಿದ್ದ ಪವರ್ ಸ್ಟಾರ್ ಪವನ್ ಕಲ್ಯಾಣ್ !



**ಆಂಧ್ರ:** ಆಂಧ್ರಪ್ರದೇಶದ ಉಪಮುಖ್ಯಮಂತ್ರಿ ಪವನ್ ಕಲ್ಯಾಣ್ ಅವರು ತಿರುಪತಿ ದೇವಸ್ಥಾನದ ಲಡ್ಡು ವಿವಾದದ ಕುರಿತು ಆರಂಭಿಸಿದ 'ಪ್ರಶ್ಚಿತ್ ದೀಕ್ಷಾ' ಸಂದರ್ಭದಲ್ಲಿ ತಿರುಮಲ ಬೆಟ್ಟವನ್ನು ಹತ್ತುವಾಗ ಅಸ್ವಸ್ಥರಾಗಿದ್ದಾರೆ. ಪವರ್ ಸ್ಟಾರ್, ಆಂಧ್ರಪ್ರದೇಶದ ಉಪಮುಖ್ಯಮಂತ್ರಿ ಪವನ್ ಕಲ್ಯಾಣ್ ಮಂಗಳವಾರ ಸಂಜೆ ಬೆನ್ನು ಮತ್ತು ಕಾಲು ನೋವಿನಿಂದ ಅಸ್ವಸ್ಥಗೊಂಡಿದ್ದಾರೆ. ಅಕ್ಟೋಬರ್ 1ರಂದು ತಿರುಮಲ ಬೆಟ್ಟ ಹತ್ತುವಾಗಪ್ರಶ್ಚಿತ್ ದೀಕ್ಷಾ ಸಮಯದಲ್ಲಿ ಅವರು ಅಸ್ವಸ್ಥರಾಗಿದ್ದಾರೆ. ತಿರುಪತಿ ತಿರುಮಲ ಬೆಟ್ಟ ಹತ್ತುವಾಗ ಪವನ್ ಕಲ್ಯಾಣ್ ತೀವ್ರ ಬೆನ್ನು ಮತ್ತು ಕಾಲು ನೋವನ್ನು ಅನುಭವಿಸಿದ್ದಾರೆ. ಅಲಿಪಿರಿ ಪಡಲ ಮಂಟಪದಲ್ಲಿ ಪವನ್ ಕಲ್ಯಾಣ್ ಕಾಲ್ನಡಿಗೆಯಲ್ಲಿ ಬೆಟ್ಟ ಹತ್ತಲು ಶುರು ಮಾಡಿದ್ರು. ಅರ್ಧಕ್ಕೆ ತೆರಳುತ್ತಿದ್ದಂತೆ ಬಹಳ ಆಯಾಸಗೊಂಡು ಕುಳಿತುಬಿಟ್ಟಿದ್ದಾರೆ. ನಂತರ ಸಾವರಿಸಿಕೊಂಡು ಪವರ್ ಸ್ಟಾರ್ ಮುಂದುವರೆದಿದ್ದಾರೆ.

## ಅಧಿಕಾರಕ್ಕೆ ಬಂದ್ರೆ ಪ್ರತಿ ಗ್ಯಾಸ್ ಸಿಲಿಂಡರ್‌ಗೆ ಕೇವಲ 500 ರೂ: ರಾಗಾ

**ಚಂಡೀಗಢ:** ನಾವು ಅಧಿಕಾರಕ್ಕೆ ಬಂದರೆ 1200 ರೂ.ಗೆ ಮಾರಾಟವಾಗುತ್ತಿರುವ ಎಲ್ಪಿಜಿ, ಪ್ರತಿ ಗ್ಯಾಸ್ ಸಿಲಿಂಡರ್ಗೆ ಕೇವಲ 500 ರೂ.ಗೆ ಲಭ್ಯವಾಗಲಿದೆ ಎಂದು ಕಾಂಗ್ರೆಸ್ ಸಂಸದ ಮತ್ತು ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಭರವಸೆ ನೀಡಿದ್ದಾರೆ.

ಹರಿಯಾಣದ ಬಹದ್ದೂರ್ಗಢದಲ್ಲಿ ಚುನಾವಣಾ ರ್ಯಾಲಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಹರಿಯಾಣದ ರೈತರಿಗೆ ಕನಿಷ್ಠ ಬೆಂಬಲ ಬೆಲೆಯನ್ನೂ ನೀಡುತ್ತೇವೆ.

ಹರಿಯಾಣದ ಜನರು ಸೇನೆಗೆ ಸೇರುತ್ತಿದ್ದರು, ಆದರೆ ನರೇಂದ್ರ ಮೋದಿ ಅವರು 'ಅಗ್ನಿವೀರ್ ಯೋಜನೆ' ತರುವ ಮೂಲಕ ಈ ಹಾದಿಯನ್ನು ಮುಚ್ಚಿದ್ದಾರೆ ಎಂದು ಮೋದಿ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ಭಾರತದ ದಲಿತರು, ಹಿಂದುಳಿದವರು ಮತ್ತು ಬಡವರು ಏನನ್ನು ಪಡೆದಿದ್ದರೂ ಅದು ಸಂವಿಧಾನದ ಕೊಡುಗೆಯಾಗಿದೆ. ಆದರೆ ಬಿಜೆಪಿ ಯಾವಾಗಲೂ ಸಂವಿಧಾನದ ಮೇಲೆ ದಾಳಿ ಮಾಡುತ್ತಲೇ ಇರುತ್ತದೆ. ಬಿಜೆಪಿಯವರು ಸಂವಿಧಾನವನ್ನು ಹಾಳು ಮಾಡುತ್ತಾರೆ, ನಾವು ಸಂವಿಧಾನವನ್ನು ರಕ್ಷಿಸುತ್ತೇವೆ ಎಂದು ಹೇಳಿದರು.



ಇಂದಿನ ಭಾರತದಲ್ಲಿ ಎಲ್ಲಾ ಹಣವು ಕೆಲವು ಆಯ್ದ ಬಿಲಿಯನೇರ್ಗಳಿಗೆ ಹೋಗುತ್ತಿದೆ. ಇನ್ನು ಪೆಟ್ರೋಲ್, ಡೀಸೆಲ್ ಮತ್ತು ಈರುಳ್ಳಿಯಂತಹ ವಸ್ತುಗಳ ಬೆಲೆಗಳನ್ನು ಹೆಚ್ಚಿಸುವ ಮೂಲಕ ನಿರಂತರವಾಗಿ ನಿಮ್ಮ ಜೇಬಿನಿಂದ ಹಣವನ್ನು ಲೂಟಿ ಹೊಡೆಯಲಾಗುತ್ತಿದೆ. ಅದಾನಿ-ಅಂಬಾನಿ ಯಾವುದೇ ಒಂದು ವಸ್ತುವಿಗೆ ಪಾವತಿಸುವ ಜಿಎಸ್ಟಿಯಷ್ಟೇ ದೇಶದ ಬಡ ರೈತನೂ ಪಾವತಿಸುತ್ತಾನೆ ಎಂಬುದು ಸತ್ಯ. ಅದಕ್ಕೇ ನಾನು, ನರೇಂದ್ರ ಮೋದಿಯವರು ಅದಾನಿ-ಅಂಬಾನಿಗೆ ಎಷ್ಟು ಹಣ ಕೊಡುತ್ತಾರೋ, ಅಷ್ಟೇ ಹಣವನ್ನು ದೇಶದ ರೈತರಿಗೆ, ಬಡವರಿಗೆ, ಮಹಿಳೆಯರಿಗೆ ಕೊಡುವ ಮನಸ್ಸು ಮಾಡಿದ್ದಾಗಿ ರಾಹುಲ್ ಗಾಂಧಿ ತಿಳಿಸಿದರು.

## ಕೇಂದ್ರ ಹಣಕಾಸು ಸಚಿವೆ ನಿವಾಸದ ಮುಂದೆ ಯುವ ಕಾಂಗ್ರೆಸ್ ದಾಂಧಲೆ

**ನವದೆಹಲಿ:** ಚುನಾವಣಾ ಬಾಂಡ್ ಯೋಜನೆಗೆ ಸಂಬಂಧಿಸಿದಂತೆ ಕೇಂದ್ರ, ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರ ನಿವಾಸದ ಮುಂದೆ ಯುವ ಕಾಂಗ್ರೆಸ್ ಕಾರ್ಯಕರ್ತರು ಇಂದು ಭಾರೀ ಪ್ರತಿಭಟನೆ ನಡೆಸಿದ್ದಾರೆ. ಜಾರಿ ನಿರ್ದೇಶನಾಲಯ ಹಾಗೂ ಚುನಾವಣಾ ಬಾಂಡ್ ಯೋಜನೆಯನ್ನು ದುರುಪಯೋಗಪಡಿಸಿಕೊಂಡು ಕಂಪನಿಗಳಿಂದ ಸಾವಿರಾರು ಕೋಟಿ ರೂಪಾಯಿ ಹಣ ಸುಲಿಗೆ ಮಾಡಿದ ಆರೋಪದ ಮೇಲೆ ಕೇಂದ್ರ, ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮತ್ತು ಇತರರ ವಿರುದ್ಧ ಎಫ್ಐಆರ್ ದಾಖಲಾಗಿತ್ತು. ಆದರೆ ಇದರ ತನಿಖೆಗೆ ಕರ್ನಾಟಕ ಹೈಕೋರ್ಟ್ ಸೋಮವಾರ ತಡೆ ನೀಡಿದೆ. ಸೀತಾರಾಮನ್ ವಿರುದ್ಧ ತನಿಖೆಗೆ ಹೈಕೋರ್ಟ್ ತಡೆ ನೀಡಿರುವ ಹಿನ್ನೆಲೆ ರೊಚ್ಚಿಗೆದ್ದ ಯುತ್ ಕಾಂಗ್ರೆಸ್ ಕಾರ್ಯಕರ್ತರು ಅವರ ನಿವಾಸದ ಮುಂದೆ ಭಾರೀ ಪ್ರತಿಭಟನೆ ನಡೆಸಿದ್ದಾರೆ.



### ಅಮೆರಿಕಾ ಎಚ್ಚರಿಸಿದ ಕೆಲವೇ ಗಂಟೆಗಳಲ್ಲಿ ಇಸ್ರೇಲ್ ಮೇಲೆ ಇರಾನ್ ಭಯಾನಕ ದಾಳಿ

# 200ಕ್ಕೂ ಹೆಚ್ಚು ಕ್ಷಿಪಣಿಗಳಿಂದ ಅಟ್ಯಾಕ್..!

**ಬೈರೂತ್:** ಇರಾನ್ ದಾಳಿ ಮಾಡುವ ಸಮಯ ಸನ್ನಿಹಿತದಲ್ಲಿದೆ ಎಂದು ಅಮೆರಿಕಾ ಎಚ್ಚರಿಕೆ ನೀಡಿದ ಕೆಲವೇ ಗಂಟೆಗಳಲ್ಲಿ ಇಸ್ರೇಲ್ ಮೇಲೆ ಇರಾನ್ ಭಯಾನಕ ದಾಳಿ ನಡೆಸಿದೆ.

ಇಸ್ರೇಲ್ ಮೇಲೆ ಇರಾನ್ ಏಕಕಾಲಕ್ಕೆ 200ಕ್ಕೂ ಹೆಚ್ಚು ಕ್ಷಿಪಣಿಗಳಿಂದ ದಾಳಿ ನಡೆಸಿದೆ. ಇಸ್ರೇಲ್‌ನ ಪ್ರಮುಖ ನಗರಗಳಾದ ಇಸ್ಫಹಾನ್, ತಬ್ರಿಜ್, ಖೋರಮಾಬಾದ್‌ನಿಂದ ಇಸ್ರೇಲ್ ಗುರಿಯಾಗಿಸಿ ಈ ದಾಳಿ ಮಾಡಲಾಗಿದೆ.

ಹಮಾಸ್ ನಾಯಕರ ಹತ್ಯೆಗೆ ಪ್ರತಿಕಾರವಾಗಿ ಈ ದಾಳಿ ನಡೆದಿದೆ ಎಂದು ವರದಿಯಾಗಿದೆ. ಟೆಲ್ ಅವೀವ್‌ನಲ್ಲಿ ಭಾರೀ ಸ್ಫೋಟದ ಸದ್ದು ಕೇಳಿಬಂದಿದ್ದು, ಸುರಕ್ಷಿತ ಸ್ಥಳಗಳಲ್ಲಿ ರಕ್ಷಣೆ ಪಡೆಯುವಂತೆ ಇಸ್ರೇಲ್ ತನ್ನ ದೇಶದ ನಾಗರಿಕರಿಗೆ ತಿಳಿಸಿದೆ.

ಭಾರತೀಯ ಕಾಲಮಾನ ರಾತ್ರಿ 10:08ರ ಸುಮಾರಿಗೆ ಇಸ್ರೇಲ್ ರಕ್ಷಣಾಪಡೆಗಳ ಗುರಿಯಾಗಿಸಿ ಇರಾನ್ ರಾಕೆಟ್ ದಾಳಿ ನಡೆಸಿದೆ ಎಂದು ಇಸ್ರೇಲಿ ವಿದೇಶಾಂಗ ಸಚಿವಾಲಯ ಹೇಳಿಕೊಂಡಿರುವುದಾಗಿ ವರದಿಯಾಗಿದೆ.

ಸದ್ಯ ಯಾವುದೇ ಪ್ರಾಣಹಾನಿಯಾಗಿರುವ ಬಗ್ಗೆ ತಿಳಿದುಬಂದಿಲ್ಲ. ಇಸ್ರೇಲ್‌ನ ಪ್ರಸಿದ್ಧ ಐರನ್ ಡೋಮ್ ಮತ್ತು ಆರೋ ರಕ್ಷಣಾ ವ್ಯವಸ್ಥೆಗಳಿಂದ ಕ್ಷಿಪಣಿಗಳನ್ನು ತಡೆಹಿಡಿಯಲು ಮುಂದಾಗಿದೆ. ಆದರೆ, ಜೆರು ಸಲೇಂ ಮತ್ತು ಇತರೆಡೆಗಳಲ್ಲಿ ಸ್ಫೋಟ ಸಂಭವಿಸಿವೆ.

ಈ ನಡುವೆ ಇಸ್ರೇಲ್ ವಿಮಾನ ನಿಲ್ದಾಣ ಪ್ರಾಧಿಕಾರದ ವಕ್ತಾರರು ಮಾತನಾಡಿ, ಇಸ್ರೇಲಿ ವಾಯುಪ್ರದೇಶವನ್ನು ಮುಚ್ಚಲಾಗಿದ್ದು, ಎಲ್ಲಾ ವಿಮಾನಗಳನ್ನು ಬೇರೆಡೆಗೆ ತಿರುಗಿಸಲಾಗಿದೆ ಎಂದು ತಿಳಿಸಿದ್ದಾರೆ.ಇಸ್ರೇಲ್ ವಾಯುಪಡೆ ಹಿಜ್ಬುಲ್ಲಾ ಮುಖ್ಯಸ್ಥ ಹಸನ್ ನಸ್ರಲ್ಲಾ ಸೇರಿದಂತೆ ಪ್ರಮುಖ ನಾಯಕರನ್ನು ಹತ್ಯೆಗೈದ ಬಳಿಕ ಇಸ್ರೇಲ್-ಇರಾನ್ ನಡುವಿನ ಯುದ್ಧ ಸ್ವರೂಪವು ಮತ್ತಷ್ಟು ತೀವ್ರಗೊಂಡಿದೆ.



ಈ ನಡುವೆ ಇರಾನ್ ಕೂಡ ಟೆಹ್ರಾನ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ವಿಮಾನಗಳನ್ನು ಸ್ಥಗಿತಗೊಳಿಸಿದೆ ಎಂದು ಇರಾನ್ ಮಾಧ್ಯಮಗಳು ಮಂಗಳವಾರ ತಡರಾತ್ರಿ ವರದಿ ಮಾಡಿವೆ. ವಿಮಾನ ನಿಲ್ದಾಣದ ಮುಖ್ಯಸ್ಥ ಸೈದ್ ಚಲಂದರಿ ಅವರು ಮಾತನಾಡಿ, ಸದ್ಯಕ್ಕೆ ನಾವು ಒಳಬರುವ ಮತ್ತು ಹೊರಹೋಗುವ ವಿಮಾನಗಳನ್ನು ಸ್ಥಗಿತಗೊಳಿಸಿದ್ದೇವೆಂದು ತಿಳಿಸಿದ್ದಾರೆ.

ನಮ್ಮ ದಾಳಿ ಹುತಾತ್ಮರ ರಕ್ತಕ್ಕೆ ಪ್ರತೀಕಾರವಾಗಿದೆ. ಕ್ಷಿಪಣಿ ದಾಳಿಗೆ ಇರಾನ್ ಪ್ರತಿದಾಳಿಗೆ ಮುಂದಾಗಿದ್ದೇ ಆದರೆ, ನಮ್ಮ ಮುಂದಿನ ನಡೆ ಕಠಿಣವಾಗಿರುತ್ತದೆ ಎಂದು ಇರಾನ್‌ನ ರೆವಲ್ಯೂಷನರಿ ಗಾರ್ಡ್ಸ್ ಎಚ್ಚರಿಕೆ ನೀಡಿದೆ.

## ಇರಾನ್ ಕ್ಷಿಪಣಿಗಳನ್ನು ಹೊಡೆದುರುಳಿಸಿ

**ಅಮೆರಿಕ :** ಇಸ್ರೇಲ್ ವಾಯುಪಡೆ ಹಿಜ್ಬುಲ್ಲಾ ಮುಖ್ಯಸ್ಥ ಹಸನ್ ನಸ್ರಲ್ಲಾ ಸೇರಿದಂತೆ ಪ್ರಮುಖ ನಾಯಕರನ್ನ ಹತ್ಯೆಗೈದ ಬಳಿಕ ಇಸ್ರೇಲ್-ಇರಾನ್ ನಡುವಿನ ಯುದ್ಧ ಸ್ವರೂಪವು ಮತ್ತಷ್ಟು ತೀವ್ರಗೊಂಡಿದೆ. ಇದರ ಬೆನ್ನಲ್ಲೇ ಈ ಯುದ್ಧಕ್ಕೆ ಯುಎಸ್ ಮಧ್ಯಸ್ಥಿಗೆ ವಹಿಸಿ ಇಸ್ರೇಲ್ ಪರ ನಿಂತಿದೆ.

ಇಸ್ರೇಲ್ ಮೇಲೆ ಸಾಲು ಸಾಲು ಕ್ಷಿಪಣಿ ದಾಳಿಯ ನಂತರ ಇಸ್ರೇಲ್ ಪರ ನಿಂತಿರುವ ಅಮೆರಿಕ ಅಧ್ಯಕ್ಷ ಜೋ ಬೈಡನ್, ಇಸ್ರೇಲ್ ರಕ್ಷಣೆಗೆ ನಾವು ಕೈಜೋಡಿಸುತ್ತೇವೆ ಹಾಗೂ ಇಸ್ರೇಲ್ ಅನ್ನು ಗುರಿಯಾಗಿಸುವ ಎಲ್ಲಾ ಇರಾನಿ ಕ್ಷಿಪಣಿಗಳನ್ನು ಹೊಡೆದುರುಳಿಸಲು ಯುಎಸ್ ಮಿಲಿಟರಿ ಗೆ ಆದೇಶಿಸಿದ್ದಾರೆ.

ಈ ಹಿಂದೆ ಜೋ ಬೈಡನ್, ನಾವು ಇಸ್ರೇಲ್ ಅನ್ನು ರಕ್ಷಿಸಲು ರಕ್ಷಣಾತ್ಮಕ ಸಿದ್ಧತೆಗಳನ್ನು ಸಕ್ರಿಯವಾಗಿ ಬೆಂಬಲಿಸುತ್ತಿದ್ದೇವೆ. ಇಸ್ರೇಲ್ ವಿರುದ್ಧ ಇರಾನ್ನಿಂದ ನೇರ ಮಿಲಿಟರಿ ದಾಳಿಯು ಇರಾನ್ಗೆ ತೀವ್ರ ಪರಿಣಾಮಗಳನ್ನು ಬೀರುತ್ತದೆ ಎಂದು ಹೇಳಿದ್ದರು.



ಇದರ ಬೆನ್ನಲ್ಲೇ ಇರಾನ್ ಇಸ್ರೇಲ್ ಮೇಲೆ ನೂರು ಕ್ಷಿಪಣಿ ದಾಳಿ ನಡೆಸಿತ್ತು. ಈ ದಾಳಿಯಲ್ಲಿ ಸಾಕಷ್ಟು ನಷ್ಟಗಳಾಗಿತ್ತು. ಈ ಬೆನ್ನಲ್ಲೇ ಬೈಡನ್ ಇಸ್ರೇಲ್ ಅನ್ನು ಗುರಿಯಾಗಿಸುವ ಎಲ್ಲಾ ಇರಾನಿ ಕ್ಷಿಪಣಿಗಳನ್ನು ಹೊಡೆದುರುಳಿಸಲು ಯುಎಸ್ ಮಿಲಿಟರಿ ಗೆ ಆದೇಶಿಸಿದ್ದು, ಇಸ್ರೇಲ್ ಪ್ರಜೆಗಳು ಕೊಂಚ ಮಟ್ಟಿಗೆ ನಿಟ್ಟುಸಿರು ಬಿಟ್ಟಿದ್ದಾರೆ.

**ಮೊದಲೇ ಎಚ್ಚರಿಸಿದ ಅಮೆರಿಕಾ?**

**ಇರಾನ್ ಮತ್ತು ಹಿಜ್ಬುಲ್ಲಾ ಸೇರಿದಂತೆ ಮಧ್ಯಪ್ರಾಚ್ಯದಾದ್ಯಂತ ಅವುಗಳನ್ನು ಬೆಂಬಲಿಸುವ ಸೇನಾಪಡೆಗಳ ವಿರುದ್ಧದ ಸರಣಿ ದಾಳಿ ನಡೆದಿತ್ತು. ಇದಕ್ಕೆ ಇಸ್ರೇಲ್ ವಿರುದ್ಧ ಪ್ರತೀಕಾರ ತೀರಿಸಿಕೊಳ್ಳುವುದಾಗಿ ಇರಾನ್? ಪ್ರತಿಜ್ಞೆ ಮಾಡಿತ್ತು. ಇದರ ಬೆನ್ನಲ್ಲೇ ಇಸ್ರೇಲ್ ವಿರುದ್ಧ ಇರಾನ್ ಬ್ಯಾಲಿಸ್ಟಿಕ್ ಕ್ಷಿಪಣಿ ದಾಳಿಯನ್ನು ಪ್ರಾರಂಭಿಸಲು ಸಿದ್ಧತೆ ನಡೆಸುತ್ತಿದೆ ಎಂದು ಅಮೆರಿಕಾ ಎಚ್ಚರಿಕೆ ನೀಡಿತ್ತು. ಈ ದಾಳಿಯ ವಿರುದ್ಧ ಇಸ್ರೇಲ್ ಅನ್ನು ರಕ್ಷಿಸಲು ನಾವು ರಕ್ಷಣಾತ್ಮಕ ಸಿದ್ಧತೆಗಳನ್ನು ಸಕ್ರಿಯವಾಗಿ ಬೆಂಬಲಿಸುತ್ತಿದ್ದೇವೆ ಎಂದು ಹಿರಿಯ ಅಧಿಕಾರಿಯೊಬ್ಬರು ಹೇಳಿಕೆಯಲ್ಲಿ ತಿಳಿಸಿದ್ದಾರೆ, ಅಂತಹ ಕ್ರಮವು ಇರಾನ್‌ಗೆ ತೀವ್ರ ಪರಿಣಾಮಗಳನ್ನು ಬೀರುತ್ತದೆ ಎಂದೂ ಎಚ್ಚರಿಸಿದ್ದರು.**

## ತಿರುಪತಿ ಲಡ್ಡು ವಿವಾದ - ತನಿಖೆಗೆ ತಾತ್ಕಾಲಿಕ ಬ್ರೇಕ್ !

**ಆಂಧ್ರ :** ತಿರುಪತಿ ಲಡ್ಡುವಿನಲ್ಲಿ ಪ್ರಾಣಿಯ ಕೊಬ್ಬಿನ ಅಂಶ ಪತ್ತೆಯಾದ ವಿವಾದಕ್ಕೆ ಸಂಬಂಧಪಟ್ಟಂತೆ ಈ ಪ್ರಕರಣದ ತನಿಖೆಯನ್ನು ಆಂಧ್ರ ಸರ್ಕಾರ ಎಸ್ಐಟಿ ಹೆಗಲಿಗೆ ನೀಡಿತ್ತು. ಆದ್ರೆ ಇದೀಗ ತನಿಖೆಗೆ ತಾತ್ಕಲಿತವಾಗಿ ಬ್ರೇಕ್ ಹಾಕಲಾಗಿದೆ. ಸುಪ್ರೀಂ ಕೋರ್ಟ್ ನಲ್ಲಿ ಈ ಪ್ರಕರಣದ ವಿಚಾರಣೆ ನಡೆಯುತ್ತಿದ್ದು, ಅಕ್ಟೋಬರ್ 3ರಂದು ನ್ಯಾಯಾಲಯ ಆದೇಶ ಕಾಯ್ದಿರಿಸಿದೆ. ಹೀಗಾಗಿ ಸುಪ್ರೀಂ ಕೋರ್ಟ್ ಆದೇಶ ಹೊರಬರುವ ವರೆಗೂ ತನಿಖೆಗೆ ಸರ್ಕಾರ ಬ್ರೇಕ್ ಹಾಕಿದೆ. ಈ ಹಿಂದೆ ತಿರುಪತಿ ಲಡ್ಡು ವಿವಾದದ ಪ್ರಕರಣದಲ್ಲಿ ಸುಪ್ರಿಮೆಕ್ ಕೋರ್ಟ್ ಬೇಸರ ವ್ಯಕ್ತಪಡಿಸಿತ್ತು. ನಿಮ್ಮ ನಿಮ್ಮ ರಾಜಕಾರಣಕ್ಕೆ ದೇವರನ್ನು ಎಳೆದು ತರಬೇಡಿ ಎಂದು ಸರ್ಕಾರಕ್ಕೆ ನಯವಾಗಿ ಚಾಟಿ ಬೀಸಿತ್ತು. ಹೀಗಾಗಿ ಕೋರ್ಟ್ ಆದೇಶ ಬಾಕಿ ಇರುವ ಹಿನ್ನಲೆ ತನಿಖೆ ಸದ್ಯಕ್ಕೆ ನಿಲ್ಲಿಸಲಾಗಿದೆ.



## ಶಾಲಾ ಬಸ್ಸಿಗೆ ಬೆಂಕಿ, 20 ವಿದ್ಯಾರ್ಥಿಗಳು, 3 ಶಿಕ್ಷಕರು ಸಾವು

**ಬ್ಯಾಂಕಾಕ್:** ಥೈಲ್ಯಾಂಡ್ನಲ್ಲಿ ಶಾಲಾ ಪ್ರವಾಸಕ್ಕಾಗಿ 44 ಮಂದಿಯನ್ನು ಕರೆದೊಯ್ಯುತ್ತಿದ್ದ ಬಸ್ಸಿಗೆ ಬೆಂಕಿ ಹೊತ್ತಿಕೊಂಡಿದ್ದು, 20 ವಿದ್ಯಾರ್ಥಿಗಳು, 3 ಶಿಕ್ಷಕರು ಸುಟ್ಟು ಕರಕಲಾಗಿದ್ದಾರೆ. ಗಾಯಗೊಂಡಿರುವ ಇತರ 19 ಮಂದಿಯನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಬಸ್ಸಿಗೆ ಬೆಂಕಿ ಹತ್ತಿಕೊಂಡಿರುವ ಕಾರಣ ಇನ್ನೂ ಸ್ಪಷ್ಟವಾಗಿಲ್ಲ ಎಂದು ಅಲ್ಲಿನ ಸರ್ಕಾರ ತಿಳಿಸಿದೆ. ದುರ್ಘಟನೆಯ ಬಳಿಕ ಚಾಲಕ ಪರಾರಿಯಾಗಿದ್ದು, ಆತನಿಗಾಗಿ ಶೋಧ ಕಾರ್ಯ ನಡೆಸಲಾಗುತ್ತಿದೆ. ಬ್ಯಾಂಕಾಕ್ ಹೊರವಲಯದಲ್ಲಿ ಬಸ್ಗೆ ಬೆಂಕಿ ಹತ್ತಿಕೊಂಡಿದೆ. ದುರಂತಕ್ಕೀಡಾದ ಬಸ್ ಸಿಎನ್ಜಿಯನ್ನು ಇಂಧನವಾಗಿ ಬಳಕೆ ಮಾಡುತ್ತಿದ್ದು, ಅಪಘಾತ ಸಂಭವಿಸಿ ಇಂಧನ ಸೋರಿಕೆಯಾಗಿ ಬೆಂಕಿ ಹೊತ್ತಿರಬಹುದು ಸರ್ಕಾರ ತಿಳಿಸಿದೆ.



## ಇಸ್ರೇಲ್ ಪ್ರಧಾನಿ ಜೊತೆ ನರೇಂದ್ರ ಮೋದಿ ಮಾತುಕತೆ



ಪಶ್ಚಿಮ ಏಷ್ಯಾದಲ್ಲಿನ ಇತ್ತೀಚಿನ ಬೆಳವಣಿಗೆ ಬಗ್ಗೆ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಜೊತೆಗೆ ಪ್ರಧಾನಿ ನರೇಂದ್ರ ಮೋದಿ ಮಾತುಕತೆ ನಡೆಸಿದ್ದು ಈ ವೇಳೆ ನಮ್ಮ ಜಗತ್ತಿನಲ್ಲಿ ಭಯೋತ್ಪಾದನೆಗೆ ಸ್ಥಾನವಿಲ್ಲ ಎಂದಿದ್ದಾರೆ. ನೆತನ್ಯಾಹು ಅವರೊಂದಿಗಿನ ಮಾತುಕತೆಯ ವಿವರಗಳನ್ನು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪ್ರಧಾನಿ ಮೋದಿ ಹಂಚಿಕೊಂಡಿದ್ದಾರೆ. ಪಶ್ಚಿಮ ಏಷ್ಯಾದಲ್ಲಿನ ಇತ್ತೀಚಿನ ಬೆಳವಣಿಗೆಗಳ ಬಗ್ಗೆ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರೊಂದಿಗೆ ಮಾತನಾಡಿದ್ದೇನೆ. ನಮ್ಮ ಜಗತ್ತಿನಲ್ಲಿ ಭಯೋತ್ಪಾದನೆಗೆ ಸ್ಥಾನವಿಲ್ಲ ಎಂಬುದನ್ನು ಸ್ಪಷ್ಟಪಡಿಸಲಾಗಿದೆ. ಪ್ರಾದೇಶಿಕ ಉದ್ವಿಗ್ನ ಸ್ಥಿತಿಯನ್ನು ತಡೆಗಟ್ಟುವುದು ಮತ್ತು ಎಲ್ಲಾ ಒತ್ತೆಯಾಳುಗಳ ಸುರಕ್ಷಿತ ಬಿಡುಗಡೆಯನ್ನು ಖಚಿತಪಡಿಸಿಕೊಳ್ಳುವುದು ಬಹಳ ಮುಖ್ಯ ಎಂದಿದ್ದಾರೆ. ಶಾಂತಿ ಸ್ಥಾಪಿಸುವ ಪ್ರಯತ್ನಗಳನ್ನು ಬೆಂಬಲಿಸಲು ಭಾರತ ಬದ್ಧ ಎಂದು ಮೋದಿ ಹೇಳಿದ್ದಾರೆ. ಆದರೆ ಮೋದಿ ಯಾವುದೇ ನಿರ್ದಿಷ್ಟ ಘಟನೆಯನ್ನು ಉಲ್ಲೇಖಿಸಿಲ್ಲ. ಕಳೆದ ವಾರ ಲೆಬನಾನ್ನಲ್ಲಿ ನಡೆದ ಇಸ್ರೇಲ್ ವೈಮಾನಿಕ ದಾಳಿಯಲ್ಲಿ ಇಸ್ರೇಲಿ ಹಿಜ್ಬುಲ್ಲಾ ಉಗ್ರಗಾಮಿ ಸಂಘಟನೆಯ ನಾಯಕ ಹಸನ್ ನಸ್ರಲ್ಲಾ ಸೇರಿದಂತೆ ಏಳು ಉನ್ನತ ಶ್ರೇಣಿಯ ಕಮಾಂಡರ್ಗಳು ಮತ್ತು ಅಧಿಕಾರಿಗಳನ್ನು ಹತ್ಯೆ ಮಾಡಲಾಗಿದೆ.

## ಸಾರ್ವಜನಿಕ ಸ್ಥಳಗಳಲ್ಲಿರುವ ದೇವಸ್ಥಾನ, ಮಸೀದಿ, ಚರ್ಚ್ ನೆಲಸಮ ಮಾಡಬೇಕು: ಸುಪ್ರೀಂ ಕೋರ್ಟ್

**ನವದೆಹಲಿ:** ಆಸ್ತಿ ಧ್ವಂಸ ವಿಚಾರದಲ್ಲಿ ಯಾವುದೇ ನಿರ್ದಿಷ್ಟ ಸಮುದಾಯಕ್ಕೆ ಮೀಸಲಾಗಿರದೆ ಎಲ್ಲಾ ಧರ್ಮದ ನಾಗರಿಕರಿಗೆ ಅನ್ವಯವಾಗುವ ಮಾರ್ಗಸೂಚಿಗಳನ್ನು ರೂಪಿಸುವುದಾಗಿ ಸುಪ್ರೀಂ ಕೋರ್ಟ್ ಮಂಗಳವಾರ ಹೇಳಿದೆ.

ಕೋರ್ಟ್ ನಿರ್ದೇಶನಗಳು ಭಾರತದಾದ್ಯಂತ ಅನ್ವಯಿಸುತ್ತವೆ ಹೊರತು ಒಬ್ಬ ವ್ಯಕ್ತಿ ಆರೋಪಿ ಅಥವಾ ಅಪರಾಧಿ ಎಂಬ ಕಾರಣಕ್ಕೆ ಅದು ಆಸ್ತಿ ಧ್ವಂಸಕ್ಕೆ ಆಧಾರವಾಗುವುದಿಲ್ಲ ಎಂದು ಸ್ಪಷ್ಟವಾಗಿ ಹೇಳಿದೆ.

ನಮ್ಮದು ಜಾತ್ಯತೀತ ರಾಷ್ಟ್ರ. ಇಲ್ಲಿ ನ್ಯಾಯಾಲಯ ಹೊರಡಿಸುವ ಆದೇಶ ಎಲ್ಲಾ ನಾಗರಿಕರಿಗೂ, ಸಂಸ್ಥೆಗಳಿಗೂ ಅನ್ವಯವಾಗುತ್ತವೆ ಹೊರತು ನಿರ್ದಿಷ್ಟ ಸಮುದಾಯಕ್ಕೆ ಅಲ್ಲ ಎಂದು ನ್ಯಾಯಮೂರ್ತಿಗಳಾದ ಬಿ ಆರ್ ಗವಾಯಿ ಮತ್ತು ಕೆ ವಿ ವಿಶ್ವನಾಥನ್ ಅವರನ್ನೊಳಗೊಂಡ ನ್ಯಾಯಪೀಠ ಹೇಳಿದೆ.

ಒಂದು ನಿರ್ದಿಷ್ಟ ಧರ್ಮಕ್ಕೆ ವಿಭಿನ್ನ ಕಾನೂನು ಇರಬಾರದು ಎಂದು ಗಮನಿಸಿದ ನ್ಯಾಯಪೀಠ, ಸಾರ್ವಜನಿಕ ರಸ್ತೆಗಳು, ಸರ್ಕಾರಿ ಭೂಮಿ ಅಥವಾ ಅರಣ್ಯಗಳಲ್ಲಿ ಯಾವುದೇ ಅನಧಿಕೃತ ನಿರ್ಮಾಣಗಳು ತಲೆಯೆತ್ತುವಂತಿಲ್ಲ ಮತ್ತು ಅವುಗಳನ್ನು ರಕ್ಷಿಸಲೂಬಾರದು ಎಂದು ಹೇಳಿದೆ.

ಸಾರ್ವಜನಿಕ ಸುರಕ್ಷತೆಯು ಅತ್ಯುನ್ನತವಾಗಿದೆ. ರಸ್ತೆ, ಜಲಮೂಲಗಳು ಅಥವಾ ರೈಲು ಹಳಿಗಳನ್ನು ಅತಿಕ್ರಮಿಸುವ ಯಾವುದೇ ಧಾರ್ಮಿಕ ರಚನೆಯನ್ನು ಸುಮ್ಮನೆ ಬಿಡಬಾರದು ಕೆಡವಿ ಹಾಕಬೇಕು ಎಂದು ಸುಪ್ರೀಂ ಕೋರ್ಟ್ ಮಹತ್ತರ ಆದೇಶ ನೀಡಿದೆ.

ಬುಲ್ಡೋಜರ್ ಕಾರ್ಯಾಚರಣೆ ಮತ್ತು ಅತಿಕ್ರಮಣ ವಿರೋಧಿ ಕಾರ್ಯಾಚರಣೆಗಳಿಗೆ ಕೋರ್ಟ್ ನಿರ್ದೇಶನಗಳು ಧರ್ಮವನ್ನು ಲೆಕ್ಕಿಸದೆ ಎಲ್ಲಾ ನಾಗರಿಕರಿಗೆ ಅನ್ವಯಿಸುತ್ತದೆ ಎಂದು ನ್ಯಾಯಾಲಯ ಹೇಳಿದೆ. ನಮ್ಮ ಆದೇಶವು ಯಾವುದೇ ಸಾರ್ವಜನಿಕ ಸ್ಥಳಗಳನ್ನು ಅತಿಕ್ರಮಣದಾರರಿಗೆ ಸಹಾಯ ಮಾಡದಂತೆ ನೋಡಿಕೊಳ್ಳುವುದಾಗಿದೆ ಎಂದು ನ್ಯಾಯಪೀಠ ಹೇಳಿದೆ.

## ಮಿಸ್ ಯೂನಿವರ್ಸ್ ಕೊರಿಯಾ ಸ್ಪರ್ಧೆಯಲ್ಲಿ 80ರ ಮಹಿಳೆ

**ಕೊರಿಯಾ:** 80 ವರ್ಷದ ದಕ್ಷಿಣ ಕೊರಿಯಾದ ಮಾಡೆಲ್ ಮಿಸ್ ಯೂನಿವರ್ಸ್ನಲ್ಲಿ ಭಾಗವಹಿಸುವ ಮೂಲಕ ಇತಿಹಾಸವನ್ನು ಸೃಷ್ಟಿಸಿದ್ದಾರೆ ಮತ್ತು ಕನಸುಗಳನ್ನು ನನಸಾಗಿಸಬಹುದು ವಯಸ್ಸಿನ ಮಿತಿಯಿಲ್ಲ ಎಂಬ ಸಂದೇಶವನ್ನು ನೀಡಿದ್ದಾರೆ.80 ವರ್ಷದ ಈ ಮಾಡೆಲ್ ಹೆಸರು ಚೋಯ್ ಸೂನ್ -ಹ್ವಾ ಉನ್.



ತಾನು ಜಗತ್ತನ್ನು ಅಚ್ಚರಿಗೊಳಿಸಲು ಬಯಸುತ್ತೇನೆ ಎಂದು ಚೋಯ್ ಹೇಳಿದ್ದಾರೆ. 80ನೇ ವಯಸ್ಸಿನಲ್ಲೂ ಮಹಿಳೆಯ ಅಂದ ಹಾಗೂ ಫಿಟ್ನೆಸ್ ಕಂಡು ನೆಟ್ಟಿಗರು ಶಾಕ್ ಆಗಿದ್ದಾರೆ. ಬಳುಕುವ ಬಳ್ಳಿಯಂತಿರುವ ಈಕೆ ಹದಿಹರೆಯದ ಯುವತಿಯರನ್ನೇ ನಾಚುವಂತೆ ಮಾಡಿದ್ದಾರೆ. ಮಿಸ್ ಯೂನಿವರ್ಸ್ ಕೊರಿಯಾ ಸ್ಪರ್ಧೆಯಲ್ಲಿ 31 ಇತರ ಅಂತಿಮ ಸ್ಪರ್ಧಿಗಳೊಂದಿಗೆ ಚೋಯ್ ಸ್ಪರ್ಧಿಸುತ್ತಿದ್ದಾರೆ.

## 14 ಹಿಂದೂ ದೇವಾಲಯಗಳಿಂದ ಸಾಯಿಬಾಬ ಮೂರ್ತಿಗಳ ತೆರವು

**ವಾರಾಣಸಿ:** ಹಿಂದೂ ದೇವಾಲಯಗಳಲ್ಲಿ ಸಾಯಿ ಬಾಬಾ ಮೂರ್ತಿಗಳ ಪ್ರತಿಷ್ಠಾಪನೆ ವಿಚಾರದಲ್ಲಿ ಉತ್ತರ ಪ್ರದೇಶದ ವಾರಾಣಸಿಯಲ್ಲಿ ವಿವಾದ ಭುಗಿಲೆದ್ದಿದೆ. ಪ್ರಸಿದ್ಧ ಬಡಾ ಗಣೇಶ ದೇವಸ್ಥಾನ ಸೇರಿದಂತೆ ಈವರೆಗೂ 14ಕ್ಕೂ ಹೆಚ್ಚು ದೇವಾಲಯಗಳಿಂದ ಸಾಯಿಬಾಬಾ ಅವರ ಮೂರ್ತಿಯನ್ನು ತೆರವುಗೊಳಿಸಲಾಗಿದೆ. ಸನಾತನ ರಕ್ಷಕ ದಳದ ನೇತೃತ್ವದಲ್ಲಿ ಈ ತೆರವು ಕಾರ್ಯ ನಡೆದಿದೆ.



ಸಾಯಿಬಾಬಾ ಮುಸ್ಲಿಂ ವ್ಯಕ್ತಿಯಾಗಿದ್ದು, ಅವರಿಗೂ ಸನಾತನ ಧರ್ಮಕ್ಕೂ ಯಾವುದೇ ಸಂಬಂಧವಿಲ್ಲ ಎಂದು ಹೇಳುವ ಹಿಂದೂ ಸಂಘಟನೆಗಳಿಂದ ಇನ್ನೂ 28 ದೇವಾಲಯಗಳಲ್ಲಿ ಸಾಯಿ ಬಾಬಾ ವಿಗ್ರಹ ತೆರವಿನ ಗುರಿ ಹೊಂದಲಾಗಿದೆ ಎಂದು ಮೂಲಗಳು ತಿಳಿಸಿವೆ.

ನಾವು ಸಾಯಿಬಾಬಾ ಅವರ ವಿರೋಧಿಗಳಲ್ಲ.ಆದರೆ ಅವರ ಮೂರ್ತಿಗಳನ್ನು ದೇವಾಲಯಗಳಲ್ಲಿ ಸ್ಥಾಪಿಸಲು ಬಿಡುವುದಿಲ್ಲ ಎಂದು ಸನಾತನ ರಕ್ಷಕ ದಳದ ಅಧ್ಯಕ್ಷ ಅಜಯ್ ಶರ್ಮಾ ಹೇಳಿದ್ದಾರೆ. ಸಾಯಿಬಾಬಾ ಅನುಯಾಯಿಗಳು ಅವರಿಗಾಗಿಯೇ ಗುಡಿ ನಿರ್ಮಿಸಿ, ಅಲ್ಲಿಯೇ ಪೂಜಿಸಲಿ. ಸನಾತನ ಧರ್ಮದಲ್ಲಿ ಅವರ ಮೂರ್ತಿ ಸ್ಥಾಪನೆಗೆ ಅವಕಾಶವಿಲ್ಲ. ಸನಾತನ ಧರ್ಮದ ದೇಗುಲಗಳಲ್ಲಿ ಐದು ದೇವರ ಮೂರ್ತಿಗಳ ಪ್ರತಿಷ್ಠಾಪನೆ ಹಾಗೂ ಪೂಜೆಗಷ್ಟೇ ಅವಕಾಶವಿದೆ. ಇದರಲ್ಲಿ ಸೂರ್ಯ, ವಿಷ್ಣು, ಶಿವ, ಶಕ್ತಿ ಹಾಗೂ ಗಣೇಶ ಮೂರ್ತಿಗಳ ಆರಾಧನೆಗಷ್ಟೇ ಅವಕಾಶ ಎಂದಿದ್ದಾರೆ. ಭೂತೇಶ್ವರ ಹಾಗೂ ಅಗಸ್ತೇಶ್ವರ ದೇವಾಲಯಗಳಲ್ಲಿರುವ ಸಾಯಿಬಾಬು ಮೂರ್ತಿಗಳನ್ನು ಮುಂದಿನ ವಾರದೊಳಗೆ ತೆರವುಗೊಳಿಸಲಾಗುವುದು ಎಂದು ಶರ್ಮಾ ಹೇಳಿದ್ದಾರೆ. ಸಾಯಿಬಾಬಾ ಹಿಂದೂ ದೇವರಲ್ಲ, ಪ್ರಾಚೀನ ಪುರಾಣಗಳಲ್ಲಿ ಸಾಯಿಬಾಬಾ ಅವರ ಉಲ್ಲೇಖವಿಲ್ಲ ಎದು ಶಂಕರಾಚಾರ್ಯ ಸ್ವಾಮಿ ಸ್ವರೂಪಾನಂದ ಸರಸ್ವತಿ ಹೇಳಿದ್ದಾರೆ.

## ಜಪಾನ್ ಪ್ರಧಾನಿಯಾಗಿ 'ಶಿಗೆರು ಇಶಿಬಾ' ಆಯ್ಕೆ

**ಟೋಕಿಯೋ:** ಆಡಳಿತಾರೂಢ ಲಿಬರಲ್ ಡೆಮಾಕ್ರಟಿಕ್ ಪಕ್ಷವನ್ನು ಮುನ್ನಡೆಸುವ ಐದನೇ ಮತ್ತು ಅಂತಿಮ ಪ್ರಯತ್ನದಲ್ಲಿ ನಿಕಟ ಹೋರಾಟದ ಸ್ಪರ್ಧೆಯನ್ನು ಗೆದ್ದ ನಂತರ ಎಟೆರಾನ್ ಸಂಸದ ಶಿಗೆರು ಇಶಿಬಾ ಜಪಾನ್ ನ ನೂತನ ಪ್ರಧಾನಿಯಾಗಿ ಆಯ್ಕೆಯಾಗಿದ್ದಾರೆ. ದಶಕಗಳಲ್ಲಿ ಅತ್ಯಂತ ಅನಿರೀಕ್ಷಿತ ನಾಯಕತ್ವದ ಚುನಾವಣೆಗಳಲ್ಲಿ ಒಂದೆಂದು ಪರಿಗಣಿಸಲ್ಪಟ್ಟ ಚುನಾವಣೆಯಲ್ಲಿ ಇಶಿಬಾ ಕಟ್ಟರ್ ರಾಷ್ಟ್ರೀಯವಾದಿ ಸನೆ ತಕೈಚಿ ವಿರುದ್ಧ ಭರ್ಜರಿ ಮತಗಳಲ್ಲಿ ಮೇಲುಗೈ ಸಾಧಿಸಿದರು. ಯುದ್ಧಾನಂತರದ ಬಹುತೇಕ ಎಲ್ಲಾ ಯುಗಗಳಲ್ಲಿ ಜಪಾನ್ ಅನ್ನು ಆಳಿದ ಎಲ್ಡಿಪಿಯ ನಾಯಕ, ಸಂಸತ್ತಿನಲ್ಲಿ ಬಹುಮತದಿಂದಾಗಿ ಜಪಾನ್ನ ಪ್ರಧಾನಿಯಾಗುವುದು ಖಚಿತವಾಗಿದೆ.

## ಚಂಡಮಾರುತಕ್ಕೆ 130 ಬಲಿ



**ವಾಷಿಂಗ್ಟನ್:** ಆಗ್ನೇಯ ಅಮೆರಿಕದಲ್ಲಿ ವ್ಯಾಪಕ ನಾಶ-ನಷ್ಟಕ್ಕೆ ಕಾರಣವಾಗಿರುವ ಹೆಲೆನ್ ಚಂಡಮಾರುತಕ್ಕೆ ಬಲಿಯಾದವರ ಸಂಖ್ಯೆ 130ಕ್ಕೆ ಏರಿದ್ದು ಸಾವಿನ ಸಂಖ್ಯೆ ಇನ್ನಷ್ಟು ಹೆಚ್ಚಾಗುವ ಸಾಧ್ಯತೆಯಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ಉತ್ತರ ಕರೋಲಿನಾ, ದಕ್ಷಿಣ ಕರೋಲಿನಾ, ಜಾರ್ಜಿಯಾ, ಫ್ಲೋರಿಡಾ, ಟೆನ್ನೆಸಿ ಮತ್ತು ವರ್ಜೀನಿಯಾದಲ್ಲಿ ವ್ಯಾಪಕ ಹಾನಿ ಸಂಭವಿಸಿದ್ದು ಇಲ್ಲಿ 100ಕ್ಕೂ ಅಧಿಕ ಮಂದಿ ಸಾವನ್ನಪ್ಪಿದ್ದಾರೆ. ಜಲಾವೃತಗೊಂಡಿರುವ ಕೆಲವು ಪ್ರದೇಶಗಳನ್ನು ತಲುಪಲು ಶೋಧ ಮತ್ತು ರಕ್ಷಣಾ ತಂಡ ಹೆಣಗುತ್ತಿದ್ದು 92 ತಂಡಗಳನ್ನು ರಕ್ಷಣಾ ಕಾರ್ಯಾಚರಣೆಗೆ ನಿಯೋಜಿಸಲಾಗಿದೆ. ಹಲವೆಡೆ ಮರಗಳು ಉರುಳಿಬಿದ್ದು ರಸ್ತೆ ಸಂಚಾರ, ವಿದ್ಯುತ್ ಪೂರೈಕೆ ಸ್ಥಗಿತಗೊಂಡಿದೆ. ತಾತ್ಕಾಲಿಕ ಶಿಬಿರಗಳಲ್ಲಿ ಸಾವಿರಕ್ಕೂ ಹೆಚ್ಚು ಜನರಿಗೆ ವಸತಿ ಕಲ್ಪಿಸಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

## ಖಂಡಾಂತರ ಬ್ಯಾಲಿಸ್ಟಿಕ್ ಕ್ಷಿಪಣಿ ಪ್ರಯೋಗ ಯಶಸ್ವಿ

**ಹಾಂಕಾಂಗ್ :** ಚೀನಾ ಕಳೆದ ವಾರ ತನ್ನ ಭೂಪ್ರದೇಶದಿಂದ ಪೆಸಿಫಿಕ್ ಮಹಾಸಾಗರಕ್ಕೆ ಖಂಡಾಂತರ ಬ್ಯಾಲಿಸ್ಟಿಕ್ ಕ್ಷಿಪಣಿಯನ್ನು ಉಡಾಯಿಸಿದ್ದು ಇದು 1990ರ ಬಳಿಕದ ಮೊದಲ ಪರೀಕ್ಷೆಯಾಗಿದೆ.



ಆದರೆ ಯುದ್ಧತಂತ್ರದ ದೃಷ್ಟಿಯಿಂದ ಮಹತ್ವದ ಮತ್ತು ನಿರ್ಣಾಯಕವಾದ ಈ ಪ್ರಕ್ರಿಯೆಯನ್ನು ಸಾಮಾನ್ಯ ಘಟನೆ ಎಂಬ ರೀತಿಯಲ್ಲಿ ಚೀನಾ ಸರಕಾರ ಹೇಳಿಕೆ ನೀಡಿದೆ.

' ಪೀಪಲ್ಸ್ ಲಿಬರೇಷನ್ ಆರ್ಮಿ ರಾಕೆಟ್ ಪಡೆ(ಪಿಎಲ್ಎಆರ್ಎಫ್)ಯು ಕಳೆದ ವಾರ ನಕಲಿ ಸಿಡಿತಲೆಯನ್ನು ಹೊತ್ತೊಯ್ಯುವ ಐಸಿಬಿಎಂ ಅನ್ನು ಪೆಸಿಫಿಕ್ ಮಹಾಸಾಗರದ ಗುರಿಯತ್ತ ಪ್ರಯೋಗಿಸಿದೆ. ಈ ಪರೀಕ್ಷಾ ಉಡಾವಣೆಯು ನಮ್ಮ ವಾರ್ಷಿಕ ತರಬೇತಿ ಯೋಜನೆಯನ್ನು ವಾಡಿಕೆಯ ವ್ಯವಸ್ಥೆಯಾಗಿದೆ ಮತ್ತು ಅಂತರರಾಷ್ಟ್ರೀಯ ಕಾನೂನು ಹಾಗೂ ಅಂತರಾಷ್ಟ್ರೀಯ ಆಚರಣೆ(ರೂಢಿ)ಗೆ ಅನುಗುಣವಾಗಿದೆ ಮತ್ತು ಯಾವುದೇ ದೇಶ ಅಥವಾ ಗುರಿಯ ವಿರುದ್ಧ ನಿರ್ದೇಶಿಸಲ್ಪಟ್ಟಿಲ್ಲ' ಎಂದು ಚೀನಾದ ರಾಷ್ಟ್ರೀಯ ರಕ್ಷಣಾ ಸಚಿವಾಲಯದ ಹೇಳಿಕೆ ತಿಳಿಸಿದೆ. ಫ್ರಾನ್ಸ್, ಅಮೆರಿಕ ಸೇರಿದಂತೆ ಕೆಲವು ಆಯ್ದ ದೇಶಗಳಿಗೆ ಎಚ್ಚರಿಕೆ ನೀಡಲು ಈ ಕ್ರಮವನ್ನು ಚೀನಾ ಬಳಸಿದೆ ಎಂದು ವಿಶ್ಲೇಷಿಸಲಾಗಿದೆ.

ಖಂಡಾಂತರ ಬ್ಯಾಲಿಸ್ಟಿಕ್ ಕ್ಷಿಪಣಿ ಪರೀಕ್ಷೆಯ ಬಗ್ಗೆ ಕೆಲವು ಮುಂಗಡ ಅಧಿಸೂಚನೆಗಳನ್ನು ಸ್ವೀಕರಿಸಿದ್ದೇವೆ ಮತ್ತು ಅದು ಒಳ್ಳೆಯದು ಎಂದು ನಾವು ನಂಬುತ್ತೇವೆ. ಇದು ಸರಿಯಾದ ದಿಕ್ಕಿನಲ್ಲಿ ಒಂದು ಹೆಜ್ಜೆಯಾಗಿದೆ ಮತ್ತು ಯಾವುದೇ ತಪ್ಪು ಗ್ರಹಿಕೆ ಮತ್ತು ತಪ್ಪು ಲೆಕ್ಕಾಚಾರವನ್ನು ತಡೆಯಲು ಕಾರಣವಾಗುತ್ತದೆ ಎಂದು ಅಮೆರಿಕದ ಅಧಿಕಾರಿಗಳು ಪ್ರತಿಕ್ರಿಯಿಸಿದ್ದಾರೆ.

### ಪುಣೆಯಲ್ಲಿ ಹೆಲಿಕಾಪ್ಟರ್ ಪತನ

## ಪೈಲಟ್ ಸೇರಿ ಮೂವರ ಸಾವು

**ಪುಣೆ:** ಮಹಾರಾಷ್ಟ್ರದ ಪುಣೆ ಜಿಲ್ಲೆಯಲ್ಲಿ ಹೆಲಿಕಾಪ್ಟರ್ ಪತನಗೊಂಡು ಬೆಂಕಿ ಹೊತ್ತಿಕೊಂಡ ಪರಿಣಾಮ ಪೈಲಟ್ ಸೇರಿ ಮೂವರು ಸಾವನ್ನಪ್ಪಿರುವ ಘಟನೆ ಬುಧವಾರ ನಡೆದಿದೆ.

ದೆಹಲಿ ಮೂಲದ ಖಾಸಗಿ ವಿಮಾನಯಾನ ಸಂಸ್ಥೆಗೆ ಸೇರಿದ ಹೆಲಿಕಾಪ್ಟರ್ ಆಕ್ಸ್‌ಫರ್ಡ್ ಗಾಲ್ಫ್ ಕೋರ್ಸ್ ಹೆಲಿಪ್ಯಾಡ್‌ನಿಂದ ಹೊರಟು ಮುಂಬೈನ ಜುಹುಗೆ ತೆರಳುತ್ತಿತ್ತು. ಹೆಲಿಕಾಪ್ಟರ್ ಟೇಕಾಫ್ ಆದ ಕೆಲವೇ ಕ್ಷಣಗಳಲ್ಲಿ ಪತನಗೊಂಡಿದೆ.

ಈ ವೇಳೆ ಆಕ್ಸ್‌ಫರ್ಡ್ ಗಾಲ್ಫ್ ಕೋಸ್ ್ಗೆ ಸಮೀಪವಿರುವ ಬವ್‌ಧಾನ್ ಪ್ರದೇಶದ ಗುಡ್ಡಗಾಡು ಪ್ರದೇಶದ ಬಳಿ ಬೆಳಿಗ್ಗೆ 6.45 ಕ್ಕೆ ಪತನಗೊಂಡಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಮೃತರನ್ನು ಪೈಲಟ್‌ಗಳಾದ ಪರಂಜೀತ್ ಸಿಂಗ್, ಜಿ.ಕೆ. ಪಿಳ್ಳೈ ಹಾಗೂ ಎಂಜಿನಿಯರ್ ಪ್ರೀತಂ ಭಾರದ್ವಾಜ್ ಎಂದು ಗುರುತಿಸಲಾಗಿದೆ.

ಅಪಘಾತದ ನಂತರ ಹೆಲಿಕಾಪ್ಟರ್'ಗೆ ಬೆಂಕಿ ಹೊತ್ತಿಕೊಂಡಿದ್ದು, ಅಪಘಾತಕ್ಕೆ ಕಾರಣ ಇನ್ನೂ ತಿಳಿದುಬಂದಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ.





ಮಹಾತ್ಮ ಗಾಂಧೀಜಿಯವರ 155ನೇ ಜನ್ಮದಿನಾಚರಣೆ



ಶ್ರೀ ಲಾಲ್ ಬಹದ್ದೂರ್ ಶಾಸ್ತ್ರಿಯವರ 120ನೇ ಜನ್ಮದಿನಾಚರಣೆ

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ



ಮಹಾತ್ಮ ಗಾಂಧೀಜಿ
1869-1948

# ಸತ್ಯಕ್ಕಾಗಿ ಹೋರಾಟ...

## ಗಾಂಧೀಜಿ ಕಲಿಸಿದ ಪಾಠ

## "ಸತ್ಯಮೇವ ಜಯತೇ...

ಮಹಾತ್ಮ ಗಾಂಧೀಜಿಯವರಿಗೆ ಸತ್ಯವೇ ದೇವರು. ಸತ್ಯಶೋಧನೆಗಾಗಿ ತಮ್ಮ ಜೀವನವನ್ನೇ ಮುಡುಪಾಗಿಟ್ಟಿದ್ದರು. ಅಸತ್ಯದ ಮೇಲೆ ಸತ್ಯ ಜಯಗಳಿಸುತ್ತದೆ ಎಂದು ದೃಢವಾಗಿ ನಂಬಿದ್ದರು. ಗಾಂಧೀಜಿಯವರ ಜೀವನ ತೆರೆದ ಪುಸ್ತಕದಂತೆ. ಅವರ ಸಂದೇಶಗಳು ಸರ್ವಕಾಲಿಕ ಸತ್ಯ. ಇಂದಿಗೂ ಪ್ರಸ್ತುತ. ನಮ್ಮ ಸರ್ಕಾರ ಸತ್ಯವನ್ನು ಎತ್ತಿ ಹಿಡಿಯುವಲ್ಲಿ ಮತ್ತು ಸಾಮಾಜಿಕ ನ್ಯಾಯವನ್ನು ಪರಿಪಾಲಿಸುವಲ್ಲಿ ಸದಾ ಗಾಂಧೀಜಿಯವರ ಮೌಲ್ಯಗಳನ್ನು ಅಳವಡಿಸಿಕೊಂಡು ಮುನ್ನಡೆದಿದೆ."

– ಸಿದ್ದರಾಮಯ್ಯ, ಮುಖ್ಯಮಂತ್ರಿ





ಶ್ರೀ ಡಿ. ಕೆ. ಶಿವಕುಮಾರ್
ಮಾನ್ಯ ಉಪ ಮುಖ್ಯಮಂತ್ರಿಗಳು

ನುಡಿದಂತೆ ನಡೆದಿದ್ದೇವೆ...

ಶಕ್ತಿ
ಮಹಿಳೆಯರಿಗೆ ಬಸ್ ಪ್ರಯಾಣ ಉಚಿತ

ಅನ್ನಭಾಗ್ಯ
ಬಡವರಿಗೆ ಪ್ರತಿ ತಿಂಗಳು 10 kg
5 ಕೆಜಿ ಆಹಾರಧಾನ್ಯ ಬದಲಿಗೆ ರೂ. 170

ಗೃಹ ಜ್ಯೋತಿ
ಪ್ರತಿ ಮನೆಗೆ 200 ಯೂನಿಟ್‌ವರೆಗೆ ವಿದ್ಯುತ್ ಉಚಿತ

ಗೃಹಲಕ್ಷ್ಮಿ
ಪ್ರತಿ ಮನೆಯೊಡತಿಗೆ ಪ್ರತಿ ತಿಂಗಳು ₹2000

ಯುವನಿಧಿ
ಪ್ರತಿ ತಿಂಗಳು ನಿರುದ್ಯೋಗ ಭತ್ಯೆ
₹3000 ಪದವೀಧರರಿಗೆ | ₹1500 ಡಿಪ್ಲೊಮಾ ಪದವೀಧರರಿಗೆ

"ಸ್ವಾತಂತ್ರ್ಯ ಹೋರಾಟಕ್ಕೆ ಸ್ಫೂರ್ತಿಕೊಟ್ಟವರ ಆದರ್ಶಗಳನ್ನು ಗೌರವಿಸುವುದು ಮತ್ತು ಪಾಲಿಸುವುದು ಪ್ರತಿಯೊಬ್ಬ ಭಾರತೀಯರ ಸಂವಿಧಾನಬದ್ಧ ಮೂಲಭೂತಕರ್ತವ್ಯ"

CMofKarnataka https://dipr.karnataka.gov.in/

ಕರ್ನಾಟಕ ವಾರ್ತೆ